ಸಂಪುಟ: 21, ಸಂಚಿಕೆ: 263, ಪುಟಗಳು: 8, ಸೋಮವಾರ, 1 ಜುಲೈ 2024 RNI NO. KARKAN/2002/08054
epaper: www.sanjemugilu.com




ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3




**ಸುಭಾಷಿತ**

ಒಂದು ಲಿಲ್ಲಿಯಾಗಲಿ ಅಥವಾ ಗುಲಾಬಿಯಾಗಲಿ ಎಂದಿಗೂ ನಟಿಸುವುದಿಲ್ಲ. ತನ್ನ ಮೂಲಗುಣಕ್ಕೆ ತಕ್ಕಂತೆ ಇರುವುದೇ ಅವರ ಸೌಂದರ್ಯದ ಗುಟ್ಟು.

। ಜಿಡ್ಡು ಕೃಷ್ಣಮೂರ್ತಿ

**ಪಂಚಾಂಗ**

(ಸೋಮವಾರ 1, ಜುಲೈ-2024)

- ಸಂವತ್ಸರ: ಕ್ರೋಧಿ ನಾಮ
- ಋತು: ಗ್ರೀಷ್ಮ
- ಅಯನ: ಉತ್ತರಾಯಣ
- ಮಾಸ: ಜೇಷ್ಠ • ಪಕ್ಷ: ಕೃಷ್ಣ
- ತಿಥಿ: ನವಮಿ • ನಕ್ಷತ್ರ: ರೇವತಿ
- ರಾಹುಕಾಲ: 05:13 - 6:49
- ಗುಳಿಕಕಾಲ: 03:36 - 5:13
- ಯಮಗಂಡಕಾಲ: 12:23 - 1:59

## ಸಂಕ್ಷಿಪ್ತ ಸುದ್ದಿ

### 3 ಅಡಿ ಎತ್ತರದ ಗಣೇಶ್ ಬಾರಯ್ಯ ವಿಶ್ವದ ಅತ್ಯಂತ ಕುಳ್ಳಗಿನ ಡಾಕ್ಟರ್



**ಗುಜರಾತ್:** ಗುಜರಾತ್ ಮೂಲದ ಗಣೇಶ್ ಬಾರಯ್ಯ ಅವರು ವಿಶ್ವದಲ್ಲೇ ಅತ್ಯಂತ ಕುಳ್ಳಗಿನ ವೈದ್ಯ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಕೇವಲ 3 ಅಡಿ 4 ಇಂಚು ಎತ್ತರದ ಡಾ. ಗಣೇಶ್ ಅವರ ದೃಢಸಂಕಲ್ಪ ಮತ್ತು ಎಲ್ಲಾ ಅಡೆತಡೆಗಳನ್ನು ಮೆಟ್ಟಿ ನಿಂತು ಇದೀಗಾ ವೈದ್ಯರಾಗಿ ತನ್ನ ಸೇವೆಯನ್ನು ಪ್ರಾರಂಭಿಸಿದ್ದಾರೆ. ವೈದ್ಯಕೀಯ ಕ್ಷೇತ್ರದಲ್ಲಿ ಜ್ಞಾನದ ಹೊರತಾಗಿಯೂ, ಗಣೇಶ್ ಅವರು ತಮ್ಮ ಎತ್ತರದಿಂದಾಗಿ ಹಲವಾರು ಟೀಕೆ ಹಾಗೂ ಸವಾಲುಗಳನ್ನು ಎದುರಿಸಿದ್ದರು. 2018 ರಲ್ಲಿ, ಬೋರ್ಡ್‌ಗಳಲ್ಲಿ 87 ಪ್ರತಿಶತ ಮತ್ತು NEET ನಲ್ಲಿ 233 ಅಂಕಗಳನ್ನು ಗಳಿಸಿದ್ದರೂ ಗುಜರಾತ್ ಸರ್ಕಾರವು MBBS ಅನ್ನು ಪುಟ 2

### ದೇಶದ ಜನತೆಗೆ ಸಿಹಿ ಸುದ್ದಿ ಎಲ್‌ಪಿಜಿ ಸಿಲಿಂಡರ್ ಬೆಲೆ ಇಳಿಕೆ



**ಬೆಂಗಳೂರು:** ಎಲ್‌ಪಿಜಿ ಸಿಲಿಂಡರ್ ಬಳಕೆದಾರರಿಗೆ ತೈಲ ಮಾರುಕಟ್ಟೆ ಕಂಪನಿಯಾದ ಇಂಡಿಯನ್ ಆಯಿಲ್ ಕಾರ್ಪೊರೇಷನ್ ಸಿಹಿ ಸುದ್ದಿ ನೀಡಿದೆ. ಜುಲೈ ತಿಂಗಳ ಆರಂಭದಲ್ಲೇ ಇಂಡಿಯನ್ ಆಯಿಲ್ ಕಾರ್ಪೊರೇಷನ್ 19 ಕೆಜಿಯ ವಾಣಿಜ್ಯ ಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆಯಲ್ಲಿ 31ರೂ. ಇಳಿಕೆ ಮಾಡಿದೆ. ಹೊಸ ಬೆಲೆ ಮಧ್ಯರಾತ್ರಿಯಿಂದಲೇ ಜಾರಿಗೆ ಬರಲಿದೆ. ಆದರೆ, ಗೃಹ ಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆಯಲ್ಲಿ ಯಾವುದೆ ಬದಲಾವಣೆಯಾಗಿಲ್ಲ. ಪುಟ 2

## ಕೋಲಾರ ರೈತರನ್ನ ಸಂಕಷ್ಟಕ್ಕೆ ಸಿಲುಕಿಸಿದ ಬಿಂಗಿ ರೋಗ!



**ಕೋಲಾರ:** ಕೋಲಾರ ಜಿಲ್ಲೆಯ ಪ್ರಮುಖ ಬೆಳೆ ಟೊಮ್ಯಾಟೊ. ನದಿ, ನಾಲೆಗಳು ಇಲ್ಲದೆ ಇದ್ದರೂ ಸಹ ರೈತರು ಕಷ್ಟಪಟ್ಟು ಟೊಮ್ಯಾಟೊ ಬೆಳೆ ಬೆಳೆಯುತ್ತಾರೆ. ಇನ್ನು ಜೂನ್ ನಿಂದ ಮೂರು ತಿಂಗಳ ಕಾಲ ಟೊಮ್ಯಾಟೊ ಸುಗ್ಗಿ. ಇಂತಹ ಪರಿಸ್ಥಿತಿಯಲ್ಲಿ ಟೊಮ್ಯಾಟೊಗೆ ಸಹ ಮಾರುಕಟ್ಟೆಯಲ್ಲಿ ಒಳ್ಳೆಯ ಬೆಲೆ ಸಿಗುತ್ತದೆ. 15 ಕೆಜಿ ಬಾಕ್ಸ್ ಟೊಮ್ಯಾಟೊಗೆ 800 ರಿಂದ 1000 ರೂ ಇದೆ, ಒಂದು ಕೆಜಿ 60 ರಿಂದ 70 ರೂ.ಗಳಿಗೆ ಮಾರಾಟವಾಗುತ್ತಿದೆ. ಇಂಥ ಸಂದರ್ಭದಲ್ಲಿ ಟೊಮ್ಯಾಟೊ ಬೆಳೆಗೆ ಬಿಂಗಿ ರೋಗ, ಎಲೆಸುರುಳಿ ರೋಗ, ಬಿಳಿ ವೈರಸ್ ಆವರಿಸಿಕೊಂಡಿದೆ. ಪರಿಣಾಮ ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಬೆಳೆದ ಟೊಮ್ಯಾಟೊ ನಾಶವಾಗಿದೆ.

ಬೆಳೆದ ಬೆಳೆ ಮಾರುಕಟ್ಟೆಗೂ ಹಾಕಲಾಗದೆ ತೋಟಗಳಲ್ಲೇ ಕೊಳೆಯುವಂತಾಗಿದೆ. ಗುಣಮಟ್ಟದ ಟೊಮ್ಯಾಟೊ ಇಲ್ಲದೆ ಕಾರಣ ಮಾರುಕಟ್ಟೆಗೆ ಹಾಕಿ ಯಾವುದೆ ಪ್ರಯೋಜನವಿಲ್ಲ ಎನ್ನುವಂತಾಗಿದೆ.

ಒಂದು ಎಕರೆ ಟೊಮ್ಯಾಟೊ ಬೆಳೆಯಲು ಮೂರುವರೆ ಲಕ್ಷ ರೂಪಾಯಿ ಬಂಡವಾಳ ಹಾಕಿರುವ ರೈತರಿಗೆ, ಇದೀಗ ಕೈಗೆ ಬಂದ ತುತ್ತು ಬಾಯಿಗೆ ಬಾರದಂತಾಗಿದೆ.

ಜಿಲ್ಲೆಯ ಜನಪ್ರತಿನಿಧಿಗಳು, ಅಧಿಕಾರಿಗಳು ಯಾವುದೇ ರೀತಿಯ ಕ್ರಮ ಕೈಗೊಳ್ಳುತ್ತಿಲ್ಲ, ಜಾಣಕುರುಡರಂತೆ ವರ್ತನೆ ಮಾಡುತ್ತಿದ್ದು, ಟೊಮ್ಯಾಟೊ ಬೆಳೆಗೆ ಬಂದಿರುವ ರೋಗಕ್ಕೆ ವಿಜ್ಞಾನಿಗಳಿಂದ ಪರಿಶೀಲನೆ ನಡೆಸಿ ರೈತರ ಸಮಸ್ಯೆಯನ್ನು ಕೂಡಲೇ ಬಗೆಹರಿಸದಿದ್ದರೆ ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಿ ಪ್ರತಿಭಟನೆ ಮಾಡುತ್ತೇವೆ ಎಂದು ರೈತ ನಾರಾಯಣ ಗೌಡ ಎಚ್ಚರಿಕೆ ನೀಡಿದ್ದಾರೆ.

ಇನ್ನು ಟೊಮ್ಯಾಟೊಗೆ ಒಳ್ಳೆಯ ಬೆಲೆ ಇದೆ, ಅದಕ್ಕೆ ತಕ್ಕಂತೆ ಒಳ್ಳೆಯ ಬೇಡಿಕೆಯೂ ಇದೆ. ಟೊಮ್ಯಾಟೊ ಮಹಾರಾಷ್ಟ್ರ, ಆಂಧ್ರ, ತಮಿಳುನಾಡು ಸೇರಿದಂತೆ ಹೊರ ರಾಜ್ಯಗಳಿಂದಲೂ ಟೊಮ್ಯಾಟೊ ಬರುತ್ತಿಲ್ಲ. ಹೀಗಾಗಿ ಕೋಲಾರ ಜಿಲ್ಲೆಯ ಟೊಮ್ಯಾಟೊಗೆ ಭರ್ಜರಿ ಬೇಡಿಕೆ ಇದೆ. ಹೀಗಿರುವಾಗ ಕೋಲಾರದಲ್ಲಿನ ರೈತರು ಬೆಳೆದ ಟೊಮ್ಯಾಟೊಗೆ ಎಲೆಸುರುಳಿ ರೋಗ ಮತ್ತು ಬಿಂಗಿ ರೋಗ ಆವರಿಸಿಕೊಂಡಿದ್ದು, ಬೆಳೆದ ಬೆಳೆ ಹಾಳಾಗಿದೆ. ಪುಟ 2

## ಮಮತಾರ ಪಶ್ಚಿಮ ಬಂಗಾಳ ಮಹಿಳೆಯರಿಗೆ ಸುರಕ್ಷಿತವಲ್ಲ

# ಜೆಪಿ ನಡ್ಡಾ ವಾಗ್ದಾಳಿ

**ನವದೆಹಲಿ:** ಮಮತಾ ಬ್ಯಾನರ್ಜಿ ಆಡಳಿತದ ಪಶ್ಚಿಮ ಬಂಗಾಳವು ಮಹಿಳೆಯರಿಗೆ ಸುರಕ್ಷಿತವಲ್ಲ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆಪಿ ನಡ್ಡಾ ಟೀಕಿಸಿದರು. ಪಶ್ಚಿಮ ಬಂಗಾಳದ ಉತ್ತರ ದಿನಜ್‌ಪುರ ಜಿಲ್ಲೆಯಲ್ಲಿ ವ್ಯಕ್ತಿಯೊಬ್ಬ ದಂಪತಿ ಮೇಲೆ ಬಿದಿರಿನ ಕೋಲಿನಿಂದ ಅಮಾನುಷವಾಗಿ ಹಲ್ಲೆ ಮಾಡಿರುವ ವಿಡಿಯೋ ವೈರಲ್ ಆಗಿರುವ ವಿಚಾರವಾಗಿ ಅವರು ಸಾಮಾಜಿಕ ಮಾಧ್ಯಮ ಎಕ್ಸ್ ನಲ್ಲಿ ಸಂದೇಶ ಪ್ರಕಟಿಸಿದ್ದು, ತೃಣಮೂಲ ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಪಶ್ಚಿಮ ಬಂಗಾಳದಿಂದ ಭಯಾನಕ ವೀಡಿಯೊ ಪ್ರಸಾರವಾಗಿದೆ. ಇದು ದಬ್ಬಾಳಿಕೆಯ ಆಡಳಿತದಲ್ಲಿ ಮಾತ್ರ ನಡೆಯಬಹುದಾದ ಕ್ರೌರ್ಯಗಳನ್ನು ನೆನಪಿಸುತ್ತದೆ. ತೃಣಮೂಲ ಕಾಂಗ್ರೆಸ್ ಕಾರ್ಯಕರ್ತರು ಮತ್ತು ಶಾಸಕರು ಈ ಘಟನೆಯನ್ನು ಸಮರ್ಥಿಸಿಕೊಳ್ಳುತ್ತಿರುವುದು ಪರಿಸ್ಥಿತಿಯನ್ನು ಮತ್ತಷ್ಟು ಬಿಗಡಾಯಿಸಿದೆ ಎಂದು ನಡ್ಡಾ ಎಕ್ಸ್ ಸಂದೇಶದಲ್ಲಿ ಉಲ್ಲೇಖಿಸಿದ್ದಾರೆ. ಪುಟ 2



## ತಿರುಪತಿಯಲ್ಲಿ ಏಜೆಂಟ್‌ಗಳಿಗೆ ಕಡಿವಾಣ ಹಾಕಲು ಟಿಟಿಡಿ ಪ್ಲಾನ್

**ತಿರುಪತಿ:** ತಿರುಪತಿ ತಿರುಮಲ ದೇವಸ್ಥಾನ ಆಡಳಿತ ಮಂಡಳಿ ನೂತನ ಮುಖ್ಯ ಕಾರ್ಯನಿರ್ವಹಣಾಧಿಕಾರಿ (ಇಒ) ಜೆ. ಶ್ಯಾಮಲಾ ರಾವ್ ಅವರು ಶ್ರೀವಾರಿ ಭಕ್ತರಿಗೆ ಟಿಟಿಡಿ ಒದಗಿಸುವ ಆನ್‌ಲೈನ್ ಅರ್ಜಿ ಸೇವೆಗಳಿಗೆ ಆಧಾರ್ ಲಿಂಕ್ ಮಾಡಲು ಮುಂದಾಗಿದ್ದು, ಇದರಿಂದ ಪಾರದರ್ಶಕತೆಯ ಜತೆಗೆ ದಲ್ಲಾಳಿ ವ್ಯವಸ್ಥೆಯನ್ನು ನಿಯಂತ್ರಿಸಲು ಸಾಧ್ಯವಾಗುತ್ತದೆ. ತಿರುಪತಿಯ ಟಿಟಿಡಿ ಆಡಳಿತ ಭವನದ ಕಾನ್ಫರೆನ್ಸ್ ಹಾಲ್‌ನಲ್ಲಿ ಯುಐಡಿಎಐ (ಆಧಾರ್ ಸಂಸ್ಥೆ), ಟಿಸಿಎಸ್, ಜಿಐಒ ಮತ್ತು ಟಿಟಿಡಿಯ ಐಟಿ ವಿಭಾಗದ ಅಧಿಕಾರಿಗಳ ಸಭೆಯಲ್ಲಿ ಈ ಬಗ್ಗೆ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಇಒ, ಇಲ್ಲಿಯವರೆಗೆ ಟಿಟಿಡಿ ಭಕ್ತರಿಗೆ ದರ್ಶನ, ವಸತಿ, ಆರ್ಜಿತ ಸೇವೆಗಳು, ಶ್ರೀವಾರಿ ಸೇವೆ ಮತ್ತಿತರ ಸೇವೆಗಳನ್ನು ಆನ್‌ಲೈನ್‌ನಲ್ಲಿ ಕಾಯ್ದಿರಿಸಲು ಅನುವು ಮಾಡಿಕೊಡಲಾಗುತ್ತಿದೆ. ಪುಟ 2




## ಮಗಳ ಸಾವಿನ ಬಳಿಕ ಬಡ ಮಕ್ಕಳ ವಿದ್ಯಾಭ್ಯಾಸಕ್ಕೆ ಬೆಳಕಾದ ಪೊಲೀಸಪ್ಪ

**ಬೆಂಗಳೂರು:** ಇಂದಿನ ಮಕ್ಕಳೇ ಮುಂದಿನ ಪ್ರಜೆಗಳು. ಇಂದು ಮಕ್ಕಳಿಗೆ ಒಳ್ಳೆಯ ವಿದ್ಯಾಭ್ಯಾಸ, ಸಂಸ್ಕಾರಕಲಿಸಿಕೊಟ್ಟರೆ ಮುಂದಿನ ಪೀಳಿಗೆ ಸುಭದ್ರವಾಗಿರುತ್ತೆ ಎಂಬ ಮಾತಿದೆ. ಆದರೆ ಬಡತನದಲ್ಲಿ ಬೆಳೆಯುತ್ತಿರುವ ಮಕ್ಕಳಿಗೆ ವಿದ್ಯಾಭ್ಯಾಸವೆಂಬುವುದು ಕೇವಲ ಖರ್ಚಾಗಿ ಉಳಿದಿದೆ. ಮಕ್ಕಳಿಗೆ ಪುಸ್ತಕ ಕೊಡಿಸಲಾಗದೇ ಪೋಷಕರು ಮಕ್ಕಳನ್ನು ಶಾಲೆಗೆ ಸೇರುವುದೇ ಇಲ್ಲ. ಇಂತಹ ಅನೇಕ ಉದಾಹರಣೆಗಳಿವೆ. ಆದರೆ ಇಲ್ಲೊಬ್ಬ ಹಿರಿಯ ಪೊಲೀಸ್ ಸಿಬ್ಬಂದಿ ತಾವು ದುಡಿಯುವ ದುಡಿಮೆಯಲ್ಲಿ ಇಂತಿಷ್ಟು ಹಣವನ್ನು ಮಕ್ಕಳ ವಿದ್ಯಾಭ್ಯಾಸಕ್ಕೆಂದು ನೀಡಿ ಬಡ ಮಕ್ಕಳಿಗೆ ನೆರವಾಗುತ್ತಿದ್ದಾರೆ.

ಶಿವಾಜಿನಗರ ಮಹಿಳಾ ಠಾಣೆಯ ಅಸಿಸ್ಟೆಂಟ್ ಸಬ್ ಇನ್ಸ್‌ಪೆಕ್ಟರ್ ಲೋಕೇಶಪ್ಪನವರು ನೂರಾರು ಬಡ ಮಕ್ಕಳಿಗೆ ಓದಿಗೆ ಅಗತ್ಯವಿರುವ ಪುಸ್ತಕ, ಸಾಮಾಗ್ರಿಗಳನ್ನು ನೀಡಿ ಮಕ್ಕಳಿಗೆ ಓದಿನ ಬಗ್ಗೆ ಆಸಕ್ತಿ ಮೂಡಿಸುವ ಕೆಲಸ ಮಾಡುತ್ತಿದ್ದಾರೆ. ನೂರಾರು ಬಡ ಮಕ್ಕಳ ವಿದ್ಯಾಭ್ಯಾಸಕ್ಕೆ ಬೆಳಕಾಗಿದ್ದಾರೆ.



**ಮಕ್ಕಳ ಸೇವೆಗೆ ಮಗಳೇ ಪ್ರೇರಣೆ:** ಬೆಂಕಿ ದುರಂತದಲ್ಲಿ ASI ಲೋಕೇಶಪ್ಪ ಅವರು ತಮ್ಮ ಮಗಳನ್ನು ಕಳೆದುಕೊಂಡರು. ಅಂದಿನಿಂದಲೂ ಅವರು ಬಡ ಪುಟ 2

## ರದ್ದಾದ ಕಾಮಗಾರಿಗಳಿಗೂ ಬಿಲ್ ಮೊತ್ತ ಬಿಡುಗಡೆ ಮಾಡಲು ಮುಂದಾದ ಬಿಬಿಎಂಪಿ!

**ಬೆಂಗಳೂರು:** ಎರಡು ವರ್ಷಗಳ ಹಿಂದೆ ರದ್ದುಪಡಿಸಿದ್ದ ಕಾಮಗಾರಿಗಳಿಗೆ ಸಂಬಂಧಿಸಿದ 97.68 ಕೋಟಿ ರೂ.ಗಳ ಬಿಲ್‌ಗಳ ಮೊತ್ತವನ್ನು ಬಿಡುಗಡೆ ಮಾಡಲು ಬೆಂಗಳೂರು ನಗರ ಪಾಲಿಕೆ ನಿರ್ಧರಿಸಿದ್ದು, ಇದೀಗ ಭಾರಿ ಕುತೂಹಲಕ್ಕೆ ಕಾರಣವಾಗಿದೆ. ರದ್ದಾದ ಕಾಮಗಾರಿಗಳಿಗೆ ಈಗ ಹೊಸದಾಗಿ ಅವಕಾಶ ನೀಡಿ ಬಿಲ್ ಬಿಡುಗಡೆ ಮಾಡಿದ್ದೇ ಆದಲ್ಲಿ ಇತರ ಗುತ್ತಿಗೆದಾರರಿಂದ ಕೂಡ ಇದೇ ರೀತಿಯ ವಿನಂತಿಗಳು ಬರುವ ಸಾಧ್ಯತೆ ಇದ್ದು, ಬಿಬಿಎಂಪಿಗೆ ನಷ್ಟವಾಗಲಿದೆ ಎಂದು ವರದಿಯಾಗಿದೆ.

ಬಿಬಿಎಂಪಿಯು ಆರ್ಥಿಕ ಶಿಸ್ತು ತರುವುದಕ್ಕಾಗಿ ಸುಮಾರು 45,781 ಕಾಮಗಾರಿಗಳನ್ನು ಹಿಂತೆಗೆದುಕೊಂಡಿತ್ತು. ಈ ಕಾಮಗಾರಿಗಳು ಒಟ್ಟು 7,931 ಕೋಟಿ ರೂಪಾಯಿ ಮೊತ್ತದ್ದಾಗಿವೆ. ಇವುಗಳನ್ನು ‘ಅನಗತ್ಯ’ ಅಥವಾ ‘ಅನಿವಾರ್ಯವಲ್ಲದ’ ಕೆಲಸಗಳು ಎಂದು ಬಿಬಿಎಂಪಿ ವಿಂಗಡಿಸಿತ್ತು. ಚರಂಡಿಗಳ ಹೂಳು ತೆಗೆಯುವುದು, ಭೂಮಿ ಅಭಿವೃದ್ಧಿ, ರಸ್ತೆಗಳ ಸುಧಾರಣೆ, ಹೂಳು ಮತ್ತು ಟ್ರ್ಯಾಕ್ಟರ್ ಒದಗಿಸುವುದು, ಶಾಲಾ ದುರಸ್ತಿ, ಕಟ್ಟಡಗಳ ನಿರ್ಮಾಣ, ಬೋರ್‌ವೆಲ್ ಕೊರೆಯುವುದು ಮತ್ತು ಎಲ್‌ಇಡಿ ಬೀದಿ ದೀಪಗಳನ್ನು ಒದಗಿಸುವುದು ಇತ್ಯಾದಿ ಕಾಮಗಾರಿಗಳು ಈ ಪಟ್ಟಿಯಲ್ಲಿದ್ದವು.



ಈ ಯೋಜನೆಗಳು ಬೆಂಗಳೂರಿನ ವಿವಿಧ ಭಾಗಗಳಲ್ಲಿ ಹರಡಿದ್ದು, 2016-17 ಮತ್ತು 2020-21 ರ ನಡುವೆ ಬಜೆಟ್‌ಗಳಲ್ಲಿ ಉಲ್ಲೇಖಿಸಿರುವವು ಎಂದು ‘ಡೆಕ್ಕನ್ ಹೆರಾಲ್ಡ್’ ವರದಿ ಮಾಡಿದೆ. ಆದಾಗ್ಯೂ, ಬಿಬಿಎಂಪಿ 2022 ರ ಡಿಸೆಂಬರ್‌ನಲ್ಲಿ ಅವುಗಳನ್ನು ಸಂಪೂರ್ಣವಾಗಿ ರದ್ದುಗೊಳಿಸಿತ್ತು. ಏಕೆಂದರೆ ಅವುಗಳು ಬಹಳ ಸಮಯವಾದರೂ ಜಾರಿಗೆ ಬಂದಿರಲಿಲ್ಲ. ಆದರೆ, ಇದೀಗ ಕಾಮಗಾರಿಗೆ ಅವಕಾಶ ನೀಡಿ ಬಿಲ್ ಬಿಡುಗಡೆ ಮಾಡಲು ಮುಂದಾಗಿದೆ. ಪುಟ 2

## ಬೆಂಗಳೂರು- ಅಬುಧಾಬಿ ಮಧ್ಯೆ ಇಂಡಿಗೋ ನೇರ ವಿಮಾನ ಸಂಚಾರ

**ಬೆಂಗಳೂರು:** ಬೆಂಗಳೂರು ಹಾಗೂ ಅಬುಧಾಬಿ ಮಧ್ಯೆ ಆಗಸ್ಟ್ 1ರಿಂದ ನೇರ ವಿಮಾನ ಸೇವೆ ಆರಂಭಿಸುವುದಾಗಿ ಇಂಡಿಗೋ ಏರ್ ಲೈನ್ಸ್ ತಿಳಿಸಿದೆ. ವಾರದಲ್ಲಿ ಆರು ಬಾರಿ ಬೆಂಗಳೂರು ಅಬುಧಾಬಿ ವಿಮಾನಗಳು ಕಾರ್ಯನಿರ್ವಹಿಸಲಿವೆ. ಇದರೊಂದಿಗೆ ಭಾರತದ ವಿವಿಧ ನಗರಗಳಿಂದ ಅಬುಧಾಬಿಗೆ ತೆರಳುವ ಇಂಡಿಗೋ ವಿಮಾನಗಳ ಸಂಖ್ಯೆ 75 ಕ್ಕೆ ತಲುಪಿದೆ. ಹೊಸ ವಿಮಾನ ಸೇವೆಯು ಯುನೈಟೆಡ್ ಅರಬ್ ಎಮಿರೇಟ್ಸ್ ರಾಜಧಾನಿಗೆ ಸಂಪರ್ಕವನ್ನು ಮತ್ತಷ್ಟು ಬಲಪಡಿಸಲಿದೆ ಎಂದು ಇಂಡಿಗೋ ತಿಳಿಸಿದೆ.

ಅಬುಧಾಬಿಯಿಂದ ನೇರ ವಿಮಾನ ಸೇವೆ ಒದಗಿಸಲಾಗುತ್ತಿರುವ ಭಾರತೀಯ ನಗರಗಳಲ್ಲಿ ಬೆಂಗಳೂರು 10 ನೇಯದ್ದಾಗಿದೆ ಎಂದು ಇಂಡಿಗೋದ ಜಾಗತಿಕ ಮಾರಾಟದ ಮುಖ್ಯಸ್ಥ ವಿನಯ್ ಮಲ್ಹೋತ್ರಾ ತಿಳಿಸಿದ್ದಾರೆ. ಬೆಂಗಳೂರಿನ ವಿಮಾನ ಸೇರ್ಪಡೆಯೊಂದಿಗೆ, ಅಬುಧಾಬಿಗೆ ವಾರದಲ್ಲಿ 75 ಮತ್ತು ಯುಎಇಗೆ 220 ಕ್ಕೂ ಹೆಚ್ಚು ವಿಮಾನಗಳು ಸಂಚರಿಸಲಿವೆ ಎಂದು ಅವರು ಹೇಳಿದ್ದಾರೆ.

**ಬೆಂಗಳೂರು ಅಬುಧಾಬಿ ಇಂಡಿಗೋ ವಿಮಾನ ವೇಳಾಪಟ್ಟಿ:** ಇಂಡಿಗೋ ವಿಮಾನ ಸಂಖ್ಯೆ 6ಇ 1438 ಬೆಂಗಳೂರಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಮಂಗಳವಾರ ಹೊರತುಪಡಿಸಿ ಎಲ್ಲಾ ದಿನಗಳಲ್ಲಿ ರಾತ್ರಿ 9.25 ಕ್ಕೆ ಹೊರಟು ರಾತ್ರಿ 11.30 ಕ್ಕೆ ಅಬುಧಾಬಿ ತಲುಪಲಿದೆ. ಅಬುಧಾಬಿಯಿಂದ, ವಿಮಾನ ಸಂಖ್ಯೆ 6ಇ 1439 ಬುಧವಾರ ಹೊರತುಪಡಿಸಿ ಎಲ್ಲಾ ದಿನಗಳಲ್ಲಿ (ಆಗಸ್ಟ್ 2 ರಿಂದ) 12.30 ಕ್ಕೆ ಹೊರಟು ಬೆಳಗ್ಗೆ 5.45ಕ್ಕೆ ವಿಮಾನ ಬೆಂಗಳೂರು ತಲುಪಲಿದೆ. ಪುಟ 2




## ದೇವರಮನೆ, ಚಾರ್ಮಾಡಿ ಘಾಟಿಯಲ್ಲಿ ರಸ್ತೆ ಮಧ್ಯೆ ವಾಹನ ನಿಲ್ಲಿಸಿ ಪ್ರವಾಸಿಗರ ಹುಚ್ಚಾಟ ಸಂಚಾರಕ್ಕೆ ಸಮಸ್ಯೆ



**ಚಿಕ್ಕಮಗಳೂರು:** ಕಾಫಿನಾಡು ಚಿಕ್ಕಮಗಳೂರಿನ ಮೂಡಿಗೆರೆ ತಾಲೂಕಿನ ಪ್ರವಾಸಿ ತಾಣ ದೇವರಮನೆ ಪ್ರವಾಸಿಗರ ಮೋಜು-ಮಸ್ತಿಯ ಅಡ್ಡವಾಗಿರುವುದು ಕಂಡುಬಂದಿದೆ. ಹೊಯ್ಸಳರ ಕಾಲದ ಇತಿಹಾಸ ಪ್ರಸಿದ್ಧ ಕಾಲಭೈರವೇಶ್ವರನ ಕ್ಷೇತ್ರವಾಗಿರುವ ದೇವರಮನೆಯಲ್ಲಿ ರಸ್ತೆಯಲ್ಲಿ ಸಂಚಾರಕ್ಕೆ ಅಡಚಣೆಯಾಗುವಂತೆ ಕಾರು ನಿಲ್ಲಿಸಿಕೊಂಡು ಪ್ರವಾಸಿಗರು ಮೋಜು, ಮಸ್ತಿ, ಡ್ಯಾನ್ಸ್ ಮಾಡಿ ವಾಹನಗಳು ಓಡಾಡಲು ಜಾಗವಿಲ್ಲದಂತೆ ಮಾಡುತ್ತಿದ್ದಾರೆ. ಪುಟ 2

**ಆರೋಗ್ಯ ಇಲಾಖೆ, ಬಿಬಿಎಂಪಿ ಉದ್ಧಟತನ**

## ಪ್ರಾಥಮಿಕ ಆರೋಗ್ಯ ಕೇಂದ್ರ ಈಗ ಡಂಪಿಂಗ್ ಯಾರ್ಡ್ !

**ಬೆಂಗಳೂರು:** ಜಯನಗರ ಅಶೋಕ ಪಿಲ್ಲರ್ ಬಳಿ ಇರುವ ಹಳೆಯ ಹೆರಿಗೆ ಆಸ್ಪತ್ರೆಯನ್ನ ಸದ್ಯಕ್ಕೆ ತಾತ್ಕಾಲಿಕವಾಗಿ ಸ್ಥಳಾಂತರ ಮಾಡಲಾಗಿದೆ. ಆದ್ರೆ, ಇದೇ ಆವರಣದಲ್ಲಿರುವ ನಗರ ಪ್ರಾಥಮಿಕ ಆರೋಗ್ಯ ಕೇಂದ್ರವನ್ನ ಮಾತ್ರ ಇಲ್ಲೇ ಇರಿಸಲಾಗಿದೆ. ಈ ಕಟ್ಟಡದ ಪರಿಸ್ಥಿತಿ ನೋಡಿದ್ರೆ, ರೋಗ ವಾಸಿ ಆಗೋಕ್ಕಿಂತ ಯಾವಾಗ ತಲೆ ಮೇಲೆ ಈ ಕಟ್ಟಡದ ಸಿಮೆಂಟ್ ಬೀಳುತ್ತದೆಯೋ ಅಂತ ಅನಿಸುತ್ತಿದೆ. ಇನ್ನು ಪ್ರಮುಖವಾಗಿ ಈ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ಆವರಣದಲ್ಲಿ ಸುಮಾರು ನಾಲ್ಕೈದು ಬಿಬಿಎಂಪಿ ವಾಹನಗಳು ನಿಂತಿದ್ದಾವೆ. ಜೊತೆಗೆ ಕಟ್ಟಡದ ಸುತ್ತ ಕಸದ ರಾಶಿಯನ್ನ ಸುರಿಯಲಾಗಿದೆ. ಪುಟ 2





# ಕೋಟಿ ಕುಳವೆಂದು ಯುವಕನ ಅಪಹರಿಸಿ ತೆಲಂಗಾಣಕ್ಕೆ ಕರೆದೊಯ್ದು ಹಲ್ಲೆಗೈದ ಗ್ಯಾಂಗ್!



**ಬೆಂಗಳೂರು:** ರಾಜಧಾನಿ ಬೆಂಗಳೂರಲ್ಲಿ ಯುವಕನೊಬ್ಬನನ್ನು ಸಿನಿಮೀಯ ರೀತಿಯಲ್ಲಿ ಅಪಹರಿಸಲಾಗಿದೆ. ಜೂನ್ 16ರಂದು ಎಂಜಿ ರಸ್ತೆಯಲ್ಲಿ ಆಂಧ್ರ ಮೂಲದ ಗ್ಯಾಂಗ್‌ನಿಂದ ಸ್ಟಾಕ್ ಮಾರ್ಕೆಟ್ ಇನ್ವೆಸ್ಟ್ ವ್ಯವಹಾರ ಮಾಡ್ತಿದ್ದ ರಾಜು ಎಂಬಾತನನ್ನು ಕಿಡ್ನಾಪ್ ಮಾಡಲಾಗಿದೆ. ದೊಡ್ಡ ಕುಳ ಎಂದು ಕಿಡ್ನಾಪ್ ಮಾಡಿದ್ದ ಗ್ಯಾಂಗ್, ತೆಲಂಗಾಣ ಫಾಮ್ ್‌ಹೌಸ್‌ವೊಂದರಲ್ಲಿ ಕೂಡಿಟ್ಟು ಹಲ್ಲೆ ನಡೆಸಿದೆ. ಅಲ್ಲದೇ 5 ಕೋಟಿ ಹಣಕ್ಕೆ ಆರೋಪಿಗಳು ಬೇಡಿಕೆ ಇಟ್ಟಿದ್ರು. ಕಿಡ್ನಾಪ್ ಬಗ್ಗೆ ಹಲಸೂರು ಠಾಣೆಗೆ ರಾಜು ಸ್ನೇಹಿತ ದೂರು ನೀಡಿದ್ದ. ಪ್ರಕರಣ ದಾಖಲಿಸಿಕೊಂಡ ಹಲಸೂರು ಪೊಲೀಸರು ಇಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ. ಕಿಡ್ನಾಪ್ ಮಾಡುವ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಈ ಮಧ್ಯೆ ಕಿಡ್ನಾಪ್ ಆಗಿರೋ ರಾಜು ವಿರುದ್ಧ ತೆಲಂಗಾಣದಲ್ಲಿ ವಂಚನೆ ಪ್ರಕರಣ ದಾಖಲಾಗಿದೆ. ರಾಜುವನ್ನ ಸಿಸಿಎಸ್ ಪೊಲೀಸರು ಮುಂಬೈಯಿಂದ ಬಂಧಿಸಿ ಕರೆ ತಂದಿದ್ದರು. ಬಳಿಕ ವಂಚನೆ ಕೇಸ್‌ನಲ್ಲಿ ಜಾಮೀನು ಪಡೆದು ಬೆಂಗಳೂರಿನಲ್ಲಿ ಬಂದು ವಾಸವಾಗಿದ್ದ. ಕಿಡ್ನಾಪ್ ಆಗಿರೋ ರಾಜು ಮೂಲತಃ ತೆಲಂಗಾಣದವನಾಗಿದ್ದು, ಮಾಜಿ ಮುಖ್ಯಮಂತ್ರಿ ಜಗನ್ ಕುಟುಂಬದ ಹೆಸರು ಬಳಸಿಕೊಂಡು, ಕೆಲಸ ಕೊಡಿಸುವುದಾಗಿ ಹಲವರಿಂದ ಹಣ ಪಡೆದು ವಂಚಿಸಿದ್ದಾನೆ ಅನ್ನೋದು ಬೆಳಕಿಗೆ ಬಂದಿದೆ.

# ಪಶ್ಚಿಮ ಘಟ್ಟದಲ್ಲಿ ಭಾರೀ ಮಳೆ: ನೇತ್ರಾವತಿ ನದಿಯಲ್ಲಿ ಹೆಚ್ಚಿದ ನೀರು



**ಮಂಗಳೂರು:** ಪಶ್ಚಿಮ ಘಟ್ಟದಲ್ಲಿ ಹೆಚ್ಚಿದ ಭಾರೀ ಮಳೆಯಿಂದಾಗಿ ದಕ್ಷಿಣ ಕನ್ನಡ ಜಿಲ್ಲೆಯ ಎಲ್ಲಾ ಜೀವನದಿಗಳು ತುಂಬಿ ಹರಿಯುತ್ತಿದೆ.

ಪ್ರಮುಖ ಜೀವನದಿ ನೇತ್ರಾವತಿ ನದಿಯಲ್ಲಿ ನೀರಿನ ಪ್ರಮಾಣ ಹೆಚ್ಚಾಗಿದ್ದು, ಮಂಗಳೂರು ತಾಲೂಕಿನ ಪಾವೂರು ಅಣೆಕಟ್ಟು ಬಳಿ ನೇತ್ರಾವತಿ ನದಿಯ ಅಬ್ಬರ ಹೆಚ್ಚಾಗಿದೆ. ಸಮುದ್ರ ಸೇರಲು ರಭಸದಿಂದ ನದಿ ನೀರು ಹರಿಯುತ್ತಿದ್ದು, ಅಣೆಕಟ್ಟಿನ ಗೇಟ್ ಗಳನ್ನ ತೆರೆದು ಸಮುದ್ರಕ್ಕೆ ನೀರು ಬಿಡಲಾಗಿದೆ. ನದಿ ತೀರದ ಜನ ಎಚ್ಚರಿಕೆಯಿಂದ ಇರಲು ಜಿಲ್ಲಾಡಳಿತ ಸೂಚನೆ ನೀಡಿದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇಂದು ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಜಿಲ್ಲೆಯಾದ್ಯಂತ ಮೋಡ ಕವಿದ ವಾತಾವರಣ ನಿರ್ಮಾಣವಾಗಿದೆ. ಹಲವೆಡೆ ಬಿಟ್ಟು ಬಿಟ್ಟು ಮಳೆಯಾಗುತ್ತಿದೆ. ಮತ್ತಷ್ಟು ಮಳೆಯಾಗೋ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ.

# ಸರ್ಕಾರ ಹಾಲು ಉತ್ಪಾದಕರ 657 ಕೋಟಿ ರೂ. ಬಾಕಿ ಉಳಿಸಿಕೊಂಡಿದೆ

**ಬೆಂಗಳೂರು:** ಸರ್ಕಾರ ಹಾಲು ಉತ್ಪಾದಕರ 657 ಕೋಟಿ ರೂ. ಬಾಕಿ ಉಳಿಸಿಕೊಂಡಿದೆ. ಇದರ ಜೊತೆ ಈಗ ಬೆಲೆ ಏರಿಕೆ ಪರ್ವ ಆರಂಭಿಸಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ್ ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಅಭಿವೃದ್ಧಿ ನೆಲಕಚ್ಚಿದೆ. ಸಿಎಂ, ಡಿಸಿಎಂ ಫೈಟ್ ನಡೆಯುತ್ತಿದೆ. ಈ ನಡುವೆ ತಮ್ಮ ಸ್ಥಾನ ಭದ್ರಪಡಿಸಿಕೊಳ್ಳಲು ದೆಹಲಿಯಲ್ಲಿ ಪ್ರಯತ್ನ ಮಾಡುತ್ತಿದ್ದಾರೆ. ಒಟ್ಟಾರೆ ಹುಚ್ಚನ ಮದುವೆಯಲ್ಲಿ ಉಂಡವನೇ ಜಾಣ ಎನ್ನುವಂತಾಗಿದೆ. ಈ ಸರ್ಕಾರಕ್ಕೆ ನಾಚಿಕೆ ಆಗಬೇಕು ಎಂದು ಆಕ್ರೋಶ ಹೊರ ಹಾಕಿದ್ದಾರೆ.

**ಜು.3ರಂದು ಸಿಎಂ ಮನೆಗೆ ಮುತ್ತಿಗೆ:** ವಾಲ್ಮೀಕಿ ನಿಗಮದ ಅವ್ಯವಹಾರ ವಿಚಾರವಾಗಿ, ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಸನಗೌಡ ದದ್ದಲ್ ಅವರು ತಪ್ಪಿತಸ್ಥರ ವಿರುದ್ಧ ಕ್ರಮ ಆಗಬೇಕು ಎಂದು ಹೇಳಿಕೆ ನೀಡಿದ್ದಾರೆ. ನಿಗಮದಲ್ಲೇ ಅವ್ಯವಹಾರ ಆಗಿದೆ. ಕೂಡಲೇ ದದ್ದಲ್ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು. ಈ ಬಗ್ಗೆ ಶರಣ



ಪ್ರಕಾಶ್ ಪಾಟೀಲ್ ಅವರ ಕಚೇರಿಯಲ್ಲಿಯೇ ಸಭೆ ನಡೆದಿದೆ. ಅವರೂ ಕೂಡ ರಾಜೀನಾಮೆ ನೀಡಬೇಕು. ಅವ್ಯವಹಾರದ ಹೊಣೆ ಹೊತ್ತು ಸಿಎಂ ಸಿದ್ದರಾಮಯ್ಯ ರಾಜೀನಾಮೆ ಕೊಡಬೇಕು. ಇದೇ ವಿಚಾರವಾಗಿ ನಮ್ಮ ಶಾಸಕರು ಜು.3ರಂದು ಮುಖ್ಯಮಂತ್ರಿಗಳ ಮನೆಗೆ ಮುತ್ತಿಗೆ ಹಾಕಲಿದ್ದಾರೆ ಎಂದು ಎಚ್ಚರಿಸಿದ್ದಾರೆ.

ಗದಗದಲ್ಲಿ ಸರಗಳ್ಳತನ ಮಾಡ್ತಿದ್ದ ಅಮ್ಜದ್ ಅಲಿ ಹಾಗೂ ಸಹಚರರಿಂದ ಪೊಲೀಸರ ಮೇಲೆ ಹಲ್ಲೆ ನಡೆದ ವಿಚಾರವಾಗಿ, ನಾಲ್ಕು ಜನ ಪೊಲೀಸರ ಮೇಲೆ ಹಲ್ಲೆಯಾಗಿದೆ. ಪೊಲೀಸರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಅಮ್ಜದ್ ಅಲಿ ರಕ್ಷಣೆ ಮಾಡುವ ಕೆಲಸ ನಡೆದಿದೆ. ಇದರ ಹಿಂದೆ ಸರ್ಕಾರ ಇದೆಯಾ? ಎಸ್ಪಿ ಇದ್ದಾರಾ? ಯಾರಿದ್ದಾರೆ ಗೊತ್ತಿಲ್ಲ. ಒಟ್ಟಾರೆ ಈ ಸರ್ಕಾರದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ ಎಂದು ಕಿಡಿಕಾರಿದ್ದಾರೆ.

ಇನ್ನೂ ಜು.4ರಂದು ಅರಮನೆ ಮೈದಾನದಲ್ಲಿ ರಾಜ್ಯ ಬಿಜೆಪಿ ಕಾರ್ಯಕಾರಿಣಿ ಸಮಿತಿ ಸಭೆ ನಡೆಯಲಿದೆ. ಸಭೆಯಲ್ಲಿ ಪ್ರಮುಖವಾಗಿ ಎರಡು ನಿರ್ಣಯ ತೆಗೆದುಕೊಳ್ಳಲಿದ್ದೇವೆ. ಕೇಂದ್ರದ ಬಿಜೆಪಿ ಸರ್ಕಾರ ಮೂರನೇ ಬಾರಿ ಅಧಿಕಾರ ಸ್ವೀಕರಿಸಿದೆ. ಮೋದಿಯವರಿಗೆ ಅಭಿನಂದನೆ ಸಲ್ಲಿಸಲಿದ್ದೇವೆ. ಎರಡನೇಯದಾಗಿ ರಾಜ್ಯ ಸರ್ಕಾರದ ವೈಫಲ್ಯಗಳ ಬಗ್ಗೆ ನಿರ್ಣಯ ಕೈಗೊಳ್ಳಲಿದ್ದೇವೆ. ಬೆಲೆ ಏರಿಕೆ, ಆಡಳಿತ ವೈಫಲ್ಯ, ಭ್ರಷ್ಟಾಚಾರ, ಸಿಎಂ ರಾಜೀನಾಮೆ ಕೊಡುವವರೆಗೂ ಹೋರಾಟ ನಿಲ್ಲಿಸಬಾರದು ಎಂದು ನಿರ್ಣಯ ಮಾಡಲಿದ್ದೇವೆ. ರಾಜ್ಯದಿಂದ ಆಯ್ಕೆಯಾಗಿರುವ ಬಿಜೆಪಿಯ ನಾಲ್ಕು ಜನ ಕೇಂದ್ರದ ಸಚಿವರೂ ಭಾಗಿಯಾಗಲಿದ್ದಾರೆ ಎಂದು ತಿಳಿಸಿದ್ದಾರೆ.

# ಮೈಸೂರು ಮುಡಾದಲ್ಲೂ ಬ್ರಹ್ಮಾಂಡ ಭ್ರಷ್ಟಾಚಾರ

**ಮೈಸೂರು:** ವಾಲ್ಮೀಕಿ ನಿಗಮದ ಬಳಿಕ ಮೈಸೂರು ಮುಡಾದಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ ನಡೆದಿದೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಆರೋಪಿಸಿದ್ದಾರೆ.

ಮೈಸೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ವಾಲ್ಮೀಕಿ ನಿಗಮ



ಹಾಗೂ ಮೈಸೂರು ಮುಡಾದಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ ನಡೆದಿದೆ. ಇದನ್ನ ಮುಚ್ಚಿಹಾಕಲು ಸಿಎಂ ಹಾಗೂ ಡಿಸಿಎಂ ರಾಜಕೀಯ ನಾಟಕ ಆಡುತ್ತಿದ್ದಾರೆ. ಮೈಸೂರು ಮುಡಾದಲ್ಲಿ ಬೇಲಿಯೇ ಎದ್ದು ಹೊಲ ಮೇದಾಂತಾಗಿದೆ. ಸಾವಿರಾರು ಕೋಟಿ ಬೆಲೆ ಬಾಳುವ ಮುಡಾ ಆಸ್ತಿ ಕಳ್ಳರ ಪಾಲಾಗಿದೆ. 69ನೇ ಇಸವಿಯಲ್ಲಿ ಭೂಮಿ ಕಳೆದುಕೊಂಡವರು ಇವತ್ತಿಗೆ ಜ್ಞಾನೋದಯವಾಗಿ ಅರ್ಜಿ ಕೊಟ್ಟಿದ್ದಾರಂತೆ. ಮುಡಾದವರು ಲಕ್ಷ ಲಕ್ಷ ಅಡಿಯನ್ನ ಬಿಟ್ಟು ಕೊಟ್ಟಿದ್ದಾರೆ. ಮುಡಾ ಲೂಟಿಯನ್ನ ನೋಡಿದರೇ ಚಾಲ್ಸ್ ಶೋಬರಾಜ್‌ನದ್ದೂ ಏನು ಹಗರಣ ಇಲ್ಲ ಅಂದುಕೊಳ್ಳುತ್ತಾರೆ ಎಂದು ಅಚ್ಚರಿ ಬಾಂಬ್ ಸಿಡಿಸಿದ್ದಾರೆ.

**ಮುಡಾ ಹಗರಣ ಸಿಬಿಐಗೆ ವಹಿಸಿ:** ಮುಡಾ ಹಗರಣದ ಬಗ್ಗೆ ಬಿಜೆಪಿ ಸಮಗ್ರ, ಮಾಹಿತಿ ಕಲೆ ಹಾಕುತ್ತಿದೆ. ಪ್ರಕರಣದ ತನಿಖೆಯನ್ನ ಸಿಬಿಐಗೆ ವಹಿಸಿ ಸಮಗ್ರ ತನಿಖೆಯಾಗಬೇಕು. ಯಾರೇ ಈ ಪ್ರಕರಣದಲ್ಲಿದ್ದರೂ ಅವರ ತಲೆ ತಂಡ ಆಗಬೇಕು. ಬಡವರಿಗೆ, ದಲಿತರಿಗೆ ಜಾಗ ಕೊಡಲು ಆಗುವುದಿಲ್ಲ, ಲೂಟಿಕೋರರಿಗೆ ಜಾಗ ಕೊಡುತ್ತಿದ್ದಾರೆ. ಈ ಸರ್ಕಾರ ಬಂದ ಮೇಲೆ ಎಲ್ಲಾ ದರಗಳು ಹೆಚ್ಚಾಗಿದೆ ಎಂದು ಕಿಡಿ ಕಾರಿದ್ದಾರೆ.

# ಶುಭಂ ಗೋಲ್ಡ್ ನಂದಿನಿ ಹಾಲಿನ ದರ ಲೀಟರ್‌ಗೆ 4 ರೂ. ಹೆಚ್ಚಳ!

**ರಾಯಚೂರು:** ನಂದಿನಿ ಹಾಲಿನ ದರ ಹೆಚ್ಚಳ ಮಾಡಿರುವ ಕೆಎಂಎಫ್ ಗ್ರಾಹಕರಿಗೆ ಬೆಲೆ ಏರಿಕೆ ಜೊತೆಗೆ ಮತ್ತೊಂದು ಶಾಕ್ ನೀಡಿದೆ. ತಾನೇ ಹೊರಡಿಸಿದ್ದ ಪರಿಷ್ಕೃತ ದರ ಪಟ್ಟಿಯನ್ನ ಕೈಬಿಟ್ಟು ಹಾಲಿನ ಪ್ಯಾಕೆಟ್ ಮೇಲೆ ಹೆಚ್ಚುವರಿ ಬೆಲೆ ಮುದ್ರಿಸಿ ಮಾರಾಟಕ್ಕೆ ಮುಂದಾಗಿದ್ದು, ಇದರ ವಿರುದ್ಧ ರಾಯಚೂರಿನಲ್ಲಿ ಗ್ರಾಹಕರು ಸಿಡಿದೆದ್ದಿದ್ದಾರೆ. ಸರ್ಕಾರದ ವಿರುದ್ಧವೂ ಅಸಮಾಧಾನ ಹೊರಹಾಕಿದ್ದಾರೆ.

ಇತ್ತೀಚೆಗಷ್ಟೇ ಕೆಎಂಎಫ್ ನಂದಿನ ಹಾಲಿನ ದರ ಹೆಚ್ಚಿಸಿ ಪರಿಷ್ಕೃತ ದರದ ಪಟ್ಟಿಯನ್ನ ಬಿಡುಗಡೆ ಮಾಡಿತ್ತು. ಪ್ರತಿ ಲೀಟರ್ ಹಾಗೂ ಅರ್ಧ ಲೀಟರ್ ಹಾಲಿನ ಪ್ಯಾಕೆಟ್‌ನಲ್ಲಿ 50 ಎಂಎಲ್ ಹಾಲಿನ ಪ್ರಮಾಣ ಹೆಚ್ಚಿಸಿ 2 ರೂ. ಹೆಚ್ಚಳ ಮಾಡಿರುವುದಾಗಿ ಘೋಷಣೆ ಮಾಡಿತ್ತು. ಆದ್ರೆ ಶುಭಂ ಗೋಲ್ಡ್ ಹಾಲಿನ ದರವನ್ನು ತಾನೇ ಘೋಷಿಸಿದಂತೆ 2 ರೂ. ಹೆಚ್ಚಳ ಮಾಡುವ ಬದಲು ಅರ್ಧ ಲೀಟರ್‌ಗೆ 3 ರೂ. ಹಾಗೂ 1 ಲೀಟರ್‌ಗೆ 4 ರೂ. ಹೆಚ್ಚಳ




ಮಾಡಿದೆ. ಈಗ ಬಂದಿರುವ ಹೊಸ ಪ್ಯಾಕೆಟ್ ನಲ್ಲಿ ದುಬಾರಿ ಬೆಲೆ ಮುದ್ರಿತವಾಗಿದೆ. ಈ ಮೊದಲು ಅರ್ಧ ಲೀಟರ್‌ಗೆ 26 ರೂ. ಇದ್ದ ಶುಭಂ ಗೋಲ್ಡ್ ಹಾಲು 28 ರೂ. ಬದಲು 29 ರೂ. ಆಗಿದೆ. 1 ಲೀಟರ್‌ಗೆ 49 ರೂ. ಇದ್ದ ಹಾಲು 51 ರೂ. ಬದಲು 53 ರೂಪಾಯಿ ಆಗಿದೆ. ಹೀಗಾಗಿ ಸರ್ಕಾರ ಹೇಳುವುದೊಂದು ಮಾಡಿರುವುದು ಒಂದು ಅಂತ ಗ್ರಾಹಕರು ಆಕ್ರೋಶ ಹೊರಹಾಕಿದ್ದಾರೆ.

# ಕಾಂಗ್ರೆಸ್ ಸರ್ಕಾರ ಕರ್ನಾಟಕವನ್ನ ಮಾರಾಟಕ್ಕಿಟ್ಟಿದೆ

**ಗದಗ:** ಕಾಂಗ್ರೆಸ್ ಸರ್ಕಾರ ದಿವಾಳಿಯಾಗಿದೆ, ಆದ್ದರಿಂದ ಕರ್ನಾಟಕವನ್ನೇ ಮಾರಾಟಕ್ಕಿಟ್ಟಿದೆ ಎಂದು ಮಾಜಿ ಸಿಎಂ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಗುಡುಗಿದ್ದಾರೆ.

ನಗರದ ತೋಂಟದಾರ್ಯ ಕಲ್ಯಾಣ ಕೇಂದ್ರದಲ್ಲಿ ನಡೆದ ಬಿಜೆಪಿ ಕಾರ್ಯಕರ್ತರ ಕೃತಜ್ಞತಾ ಸಮಾರಂಭದಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದ ವಿರುದ್ಧ ಹರಿಹಾಯ್ದಿದ್ದಾರೆ. ರಾಜ್ಯದಲ್ಲಿ ಅಭಿವೃದ್ಧಿ ಶೂನ್ಯವಾಗಿದೆ, ಕಾಂಗ್ರೆಸ್ ನಲ್ಲಿ ಕೇವಲ ಅಧಿಕಾರದ ದಾಹ ಬಿಟ್ಟರೆ ಬೇರೆ ಏನೂ ಬೇಕಿಲ್ಲ ಎಂದು ಕಿಡಿ ಕಾರಿದ್ದಾರೆ.

ಕರ್ನಾಟಕದ ರಾಜಕಾರಣ ದೊಡ್ಡ ಪ್ರಮಾಣದಲ್ಲಿ ಬದಲಾವಣೆ ಆಗ್ತಿದೆ. ದಿನನಿತ್ಯ ಜನ ನೋಡ್ತಿದ್ದಾರೆ. ಯಾರು ಸಿಎಂ ಆಗಬೇಕು? ಯಾರು, ಎಷ್ಟು ಜನ ಡಿಸಿಎಂ ಆಗಬೇಕು? ಯಾವ ಜಾತಿಯವರು ಡಿಸಿಎಂ ಆಗಬೇಕು? ಎಂಬ ಕಚ್ಚಾಟ ಕಾಂಗ್ರೆಸ್‌ನಲ್ಲಿ ನಡೆಯುತ್ತಿದೆ. ಅಭಿವೃದ್ಧಿ ಶೂನ್ಯ



ಅಂತ ಕಾಂಗ್ರೆಸ್ ಪಕ್ಷದ ಶಾಸಕರೇ ಹೇಳ್ತಿದ್ದಾರೆ ಎಂದು ಅಸಮಾಧಾನ ಹೊರಹಾಕಿದ್ದಾರೆ.

ಕರ್ನಾಟಕವನ್ನು ಕಾಂಗ್ರೆಸ್ ಮಾರಾಟಕ್ಕಿಟ್ಟಿದೆ. ಈ ಸರ್ಕಾರ ದಿವಾಳಿ ಆಗಿದೆ. ಸರ್ಕಾರದ ವಿರುದ್ಧ ಜನರ ಆಂದೋಲನ ಪ್ರಾರಂಭ ಮಾಡುವ ಕಾಲವೂ ಸನಿಹವಾಗಿದೆ. ಮುಂಬರುವ ದಿನಗಳಲ್ಲಿ ಜನಪರ ಹೋರಾಟಕ್ಕೆ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಕಾರ್ಯಕರ್ತರಿಗೆ ಕರೆ ನೀಡಿದ್ದಾರೆ.

ಇದೇ ವೇಳೆ ವಿಧಾನಸಭೆ ಚುನಾವಣೆ ಬಗ್ಗೆ ಮತ್ತೆ ಬೊಮ್ಮಾಯಿ ಭವಿಷ್ಯ ನುಡಿದಿದ್ದಾರೆ. ಲೋಕಸಭಾ ಚುನಾವಣೆ ಸಂದರ್ಭದಲ್ಲೇ ಹೇಳಿದ್ದೆನೆ, ಈಗಲೂ ಹೇಳ್ತೀನಿ. 1 ವರ್ಷದಲ್ಲಿ ವಿಧಾನಸಭೆ ಚುನಾವಣೆ ಬಂದೇ ಬರುತ್ತೆ. ಗದಗನಲ್ಲಿ ಮತ್ತೊಮ್ಮೆ 4 ಕ್ಷೇತ್ರದಲ್ಲಿ ಬಿಜೆಪಿ ಶಾಸಕರನ್ನು ಆಯ್ಕೆ ಮಾಡುವ ಮೂಲಕ ಕಮಲದ ಬಾವುಟ ಹಾರಿಸುವ ಸಂಕಲ್ಪ ಮಾಡೋಣ ಎಂದರಲ್ಲದೇ ಎಂಪಿ ಚುನಾವಣೆ ಸ್ಯಾಂಪಲ್, ಫಿಕ್ಚರ್ ಅಬಿ ಬಾಕಿ ಹೈ ಎಂದು ಕಾಂಗ್ರೆಸ್‌ಗೆ ಟಾಂಗ್ ಕೊಟ್ಟಿದ್ದಾರೆ.

ಈ ಸಂದರ್ಭದಲ್ಲಿ ಮಾಜಿ ಸಚಿವ ನರಗುಂದ ಶಾಸಕ ಸಿ.ಸಿ ಪಾಟೀಲ, ಶಿರಹಟ್ಟಿ ಶಾಸಕ ಡಾ ಚಂದ್ರು ಲಮಾಣಿ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಎಮ್.ಎಸ್ ಕರಿಗೌಡ್ರ, ಮೋಹನ್ ಮಾಳಶೆಟ್ಟಿ, ಶ್ರೀಪತಿ ಉಡುಪಿ ಸೇರಿದಂತೆ ಅನೇಕ ಮುಖಂಡರು ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

# ಕಳ್ಳತನವಾಗಿದ್ದ ಕೋಟ್ಯಂತರ ರೂ. ಮೌಲ್ಯದ ವಸ್ತುಗಳು ವಾರಸುದಾರರಿಗೆ ವಾಪಸ್!

**ಬಳ್ಳಾರಿ:** ವಿಜಯನಗರ ಜಿಲ್ಲಾ ಪೊಲೀಸರ ನಿರಂತರ ಕಾರ್ಯಾಚರಣೆಯಲ್ಲಿ ಕಳೆದ 1 ವರ್ಷದಿಂದ ಕಳ್ಳತನವಾಗಿದ್ದ ಕೋಟ್ಯಂತರ ರೂ. ಮೌಲ್ಯದ ಸ್ವತ್ತು ವಶಪಡಿಸಿಕೊಂಡಿದ್ದ ಪೊಲೀಸರು ಅದನ್ನು ವಾರಸುದಾರರಿಗೆ ಹಿಂದಿರುಗಿಸಿದ್ದಾರೆ.

ಕಳೆದ 1 ವರ್ಷದಲ್ಲಿ 244 ಪ್ರಕರಣಗಳಲ್ಲಿ 2 ಕೋಟಿ 15 ಲಕ್ಷ 53 ಸಾವಿರದ 637 ರೂ. ಮೌಲ್ಯದ ಸ್ವತ್ತನ್ನು ವಶಪಡಿಸಿಕೊಳ್ಳಲಾಗಿದೆ. ಒಂದು ವರ್ಷದ ಅವಧಿಯಲ್ಲಿ ಕಳುವಾಗಿದ್ದ ಬಂಗಾರ, ಬೆಳ್ಳಿ, ಹಸು, ಕರು, ದನ ಸೇರಿದಂತೆ ಇತರೆ ಸ್ವತ್ತುಗಳು ಪೊಲೀಸರು ವಾರಸುದಾರರಿಗೆ ಹಿಂದಿರುಗಿಸಿದ್ದಾರೆ.

ಒಂದು ವರ್ಷದ ಅವಧಿಗೆ ದಾಖಲಾದ ಸ್ವತ್ತಿನ ಪ್ರಕರಣಗಳಿಗೆ ಸಂಬಂಧಿಸಿದಂತೆ 5 ಕೋಟಿ 54 ಲಕ್ಷದ 89,001 ಸಾವಿರ ರೂ. ಮೌಲ್ಯದ ವಸ್ತುಗಳು ಕಳ್ಳತನವಾಗಿತ್ತು. ಆ ಪೈಕಿ 2,15,53,637 ರೂ. ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.

ಈ ಪೈಕಿ 85,83,637 ರೂ. ಮೌಲ್ಯದ 96 ದ್ವಿ-ಚಕ್ರವಾಹನಗಳು, 42,31,200 ರೂ. ಮೌಲ್ಯದ 18 ತೋಲ ಬಂಗಾರದ, 95,300 ರೂ. ಮೌಲ್ಯದ 30 ತೋಲ ಬೆಳ್ಳಿ ಆಭರಣಗಳು ಹಾಗೂ 2,05,000 ರೂ. ಮೌಲ್ಯದ 25 ಮೊಬೈಲ್ ಗಳನ್ನ ವಾರಸುದಾರರಿಗೆ ಹಿಂದಿರುಗಿಸಲಾಗಿದೆ.

# ಸ್ವಾಮೀಜಿಗಳು ವೇದಿಕೆ, ಸಂದರ್ಭ ನೋಡಿ ಮಾತಾಡಿದ್ರೆ ಒಳ್ಳೆಯದು

**ಬೆಂಗಳೂರು:** ಸ್ವಾಮೀಜಿಗಳು ವೇದಿಕೆ, ಸಂದರ್ಭ ನೋಡಿ ಮಾತಾಡಿದ್ರೆ ಒಳ್ಳೆಯದು. ಸ್ವಾಮೀಜಿಗಳ ಹೇಳಿಕೆ ತಪ್ಪು ಅಂತ ಹೇಳಕ್ಕಾಗಲ್ಲ, ಅವರಿಗೂ ಕಾಳಜಿ ಇರಬಹುದು. ಅವರು ಅವರ ಅಭಿಪ್ರಾಯ ಹೇಳಿದ್ದಾರೆ ಅಷ್ಟೇ ಎಂದು ಗೃಹ ಸಚಿವ ಜಿ. ಪರಮೇಶ್ವರ್ ಹೇಳಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿಎಂ, ಡಿಸಿಎಂ ಹುದ್ದೆಗಳ ವಿಚಾರ ಪ್ರಸ್ತುತ ಅಪ್ರಸ್ತುತ ಅಂತ ಅಲ್ಲ. ಹೈಕಮಾಂಡ್ ನವರು ಆ ರೀತಿ ಬದಲಾವಣೆ ಮಾಡುವುದಾದರೆ ವೀಕ್ಷಕರನ್ನು ಕಳುಹಿಸಿ ಅಭಿಪ್ರಾಯ ಪಡೆಯುತ್ತಾರೆ ಎಂದು ಹೇಳಿದರು.

ನಾವು ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆಯವರನ್ನೂ ಭೇಟಿ ಮಾಡಿದ್ದೆವು. ರಾಜಕೀಯವಾಗಿ ಚರ್ಚೆ ಮಾಡಲಾಯಿತು. ಸೌಹಾರ್ದಯುತವಾಗಿ ಚರ್ಚೆ ಮಾಡಲಾಯ್ತು. ಹೆಚ್ಚುವರಿ ಡಿಸಿಎಂ ಬಗ್ಗೆ ಯಾರೂ ಪ್ರಸ್ತಾಪ



ಮಾಡಲಿಲ್ಲ. ಹೆಚ್ಚುವರಿ ಡಿಸಿಎಂ ಬಗ್ಗೆ ಅವರವರು ಅವರವರ ಅಭಿಪ್ರಾಯ ಹೇಳ್ತಾರೆ. ಆದರೆ ಎಲ್ಲವೂ ಹೈಕಮಾಂಡ್ ಗೆ ಬಿಟ್ಟಿದ್ದು ಎಂದು ತಿಳಿಸಿದರು.

ಇತ್ತೀಚೆಗೆ ಬೆಂಗಳೂರಿನ ಕಂಠೀರವ ಒಳಾಂಗಣ ಕ್ರೀಡಾಂಗಣದಲ್ಲಿ ನಡೆದ ನಾಡಪ್ರಭು ಕೆಂಪೇಗೌಡರ 515ನೇ ಜಯಂತೋತ್ಸವ ಸಮಾರಂಭದಲ್ಲಿ ಮಾತನಾಡಿದ್ದ ವಿಶ್ವ ಒಕ್ಕಲಿಗ ಮಹಾ ಸಂಸ್ಥಾನ ಮಠದ ಚಂದ್ರಶೇಖರನಾಥ ಸ್ವಾಮೀಜಿ, ಸಿದ್ದರಾಮಯ್ಯನವರು ಮುಂದೆ ಡಿ.ಕೆ ಶಿವಕುಮಾರ್ ಅವರಿಗೆ ಸಿಎಂ ಸ್ಥಾನ ಬಿಟ್ಟುಕೊಡಬೇಕು ಎಂದು ಹೇಳಿದ್ದರು.

ಸಿದ್ದರಾಮಯ್ಯನವರು ಮನಸ್ಸು ಮಾಡಿದರೆ ಮಾತ್ರ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗಲು ಸಾಧ್ಯ. ಈಗಾಗಲೇ ಸಿದ್ದರಾಮಯ್ಯನವರು ಮುಖ್ಯಮಂತ್ರಿ ಆಗಿ ಅನುಭವ ಹೊಂದಿದ್ದಾರೆ. ನಮ್ಮ ಸಮುದಾಯದ ಡಿ.ಕೆ ಶಿವಕುಮಾರ್ ಅವರಿಗೆ ಮುಂದೆ ಅವಕಾಶ ಮಾಡಿಕೊಡಲಿ ಎಂದು ತಿಳಿಸಿದ್ದರು. ಸ್ವಾಮೀಜಿ ಈ ಹೇಳಿಕೆ ನೀಡುತ್ತಿದ್ದಂತೆಯೇ ಪರ-ವಿರೋಧ ಮಾತುಗಳು ಆರಂಭವಾಗಿದೆ.

## ಬಿಂಗಿ ರೋಗ!

**ಕೊಳೆಯುತ್ತಿರುವ ಟೊಮ್ಯಾಟೊ:** ಬಿಂಗಿ ರೋಗಕ್ಕೆ ಎಷ್ಟೇ ಕ್ರಿಮಿನಾಶಕ ಔಷಧಿಯನ್ನು ಹೊಡೆದರು ಸಹ ರೋಗ ಹತೋಟಿಗೆ ಬರುತ್ತಿಲ್ಲ. ಕ್ರಿಮಿನಾಶಕ ಸಹ ನಕಲಿಯಾಗಿದ್ದು, ರೈತರು ಪರದಾಡುವಂತಾಗಿದೆ. ಈ ಬಗ್ಗೆ ಅಧಿಕಾರಿಗಳು ಯಾವುದೆ ಕ್ರಮ ಕೈಗೊಳ್ಳುತ್ತಿಲ್ಲ. ಕಳೆದ ಮೂರು ವರ್ಷಗಳಿಂದ ಬಿಂಗಿ ರೋಗ ಕಾಡುತ್ತಿದೆ. ಈ ಬಗ್ಗೆ ಕೂಡಲೆ ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ತೋಟಗಾರಿಕೆ ಇಲಾಖೆ ಸಹಾಯಕ ನಿರ್ದೇಶಕ ರವಿಕುಮಾರ್ ಭರವಸೆ ನೀಡಿದ್ದಾರೆ.

ಒಟ್ಟಾರೆಯಾಗಿ ಕೋಲಾರ ಟೊಮ್ಯಾಟೊಗೆ ಮಾರುಕಟ್ಟೆಯಲ್ಲಿ ಬಂಗಾರದ ಬೆಲೆ ಇರುವಾಗಲೇ ಬಿಂಗಿ ರೋಗ ಆವರಿಸಿ ರೈತರ ಬದುಕಿಗೆ ಕೊಳ್ಳಿ ಇಟ್ಟಿದ್ದು, ಲಕ್ಷಾಂತರ ರೂಪಾಯಿ ಬಂಡವಾಳ ಹಾಕಿ ಬೆಳೆದ ಬೆಳೆ ಬೀದಿಗೆ ಸುರಿಯುವಂತಾಗಿದ್ದು, ಕೂಡಲೇ ತೋಟಗಾರಿಕಾ ಇಲಾಖೆ ರೋಗಕ್ಕೆ ಸೂಕ್ತ ಪರಿಹಾರ ಕಂಡು ಹಿಡಿಯಬೇಕಿದೆ.

## ಜೆಪಿ ನಡ್ಡಾ ವಾಗ್ದಾಳಿ

**ಜೆಪಿ ನಡ್ಡಾ ಎಕ್ಸ್ ಸಂದೇಶ:** ಸಂದೇಶ್‌ಖಾಲಿ ಆಗಲಿ, ಉತ್ತರ ದಿನಾಜ್‌ಪುರ ಅಥವಾ ಇತರ ಹಲವು ಸ್ಥಳಗಳಾಗಲಿ, ದೀದಿಯ ಪಶ್ಚಿಮ ಬಂಗಾಳವು ಮಹಿಳೆಯರಿಗೆ ಅಸುರಕ್ಷಿತವಾಗಿದೆ ಎಂದು ನಡ್ಡಾ ಟೀಕಿಸಿದ್ದಾರೆ.

ಘಟನೆಗೆ ಸಂಬಂಧಿಸಿದಂತೆ ಪಶ್ಚಿಮ ಬಂಗಾಳ ಪೊಲೀಸರು ಭಾನುವಾರ ಪ್ರಕರಣ ದಾಖಲಿಸಿದ್ದಾರೆ. ದಂಪತಿ ಮೇಲೆ ಹಲ್ಲೆ ಮಾಡಿದ ವ್ಯಕ್ತಿ ಉತ್ತರ ದಿನಜ್‌ಪುರ ಜಿಲ್ಲೆಯ ಚೋಪ್ರಾದ ಸ್ಥಳೀಯ ತೃಣಮೂಲ ನಾಯಕ ಎಂದು ಆರೋಪಿಸಲಾಗಿದೆ. ಆರೋಪಿ ತಜಮುಲ್ ಅಲಿಯಾಸ್ ಜೆಸಿಬಿಯನ್ನು ಬಂಧಿಸಲಾಗಿದೆ.

**ವೈರಲ್ ವಿಡಿಯೋದಲ್ಲೇನಿತ್ತು:** ತಜಮುಲ್ ಅಲಿಯಾಸ್ ಜೆಸಿಬಿ ನಡು ರಸ್ತೆಯಲ್ಲೇ ಮಹಿಳೆಯೊಬ್ಬರ ಕೂದಲು ಹಿಡಿದೆಳೆದು ಕೋಲಿನಿಂದ ಬಾರಿಸಿದ್ದಲ್ಲದೆ ಥಳಿಸಿದ್ದ. ಆಕೆಯ ಜತೆಗಿದ್ದ ಪುರುಷನ ಮೇಲೂ ಹಲ್ಲೆ ನಡೆಸಿದ್ದ. ಹತ್ತಾರು ಜನರ ಸಮ್ಮುಖದಲ್ಲೇ ಈ ಘಟನೆ ನಡೆದಿತ್ತು. ಸ್ಥಳದಲ್ಲಿದ್ದವರೆಲ್ಲ ಮೂಕ ಪ್ರೇಕ್ಷಕರಾಗಿ ನೋಡುತ್ತಿರುವಂತಾಗಿತ್ತು.

## ಟಿಟಿಡಿ ಪ್ಲಾನ್

ಆದರೆ, ಇನ್ನು ಮುಂದೆ ಆಧಾರ್ ಲಿಂಕ್ ಮಾಡುವ ಸಾಧ್ಯತೆಗಳನ್ನು ಪರಿಶೀಲಿಸುವಂತೆ ಮತ್ತು ಈ ಅರ್ಜಿಗಳನ್ನು ನಿಯಂತ್ರಿಸಲು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳುವಂತೆ ಇಒ ಐಟಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಈ ನಿಟ್ಟಿನಲ್ಲಿ ಯುಐಡಿಐ ಅಧಿಕಾರಿಗಳ ಸಹಕಾರ ತೆಗೆದುಕೊಳ್ಳಬೇಕು. ಆಧಾರ್ ಮೂಲಕ ಯಾತ್ರಾರ್ಥಿಗಳ ಗುರುತಿಸುವಿಕೆ, ತಪಾಸಣೆ, ಬಯೋಮೆಟ್ರಿಕ್ ಪರಿಶೀಲನೆ, ಆಧಾರ್ ನಕಲು ತಡೆಯುವುದು ಹೇಗೆ ಇತ್ಯಾದಿ ವಿಷಯಗಳ ಕುರಿತು ಚರ್ಚಿಸಿದರು. ಯುಐಡಿಎಐ ಅಧಿಕಾರಿಗಳು ಪವರ್ ಪಾಯಿಂಟ್ ಪ್ರೆಸೆಂಟೇಶನ್ ಮೂಲಕ ಅರ್ಜಿಗಳಿಗೆ ಆಧಾರ್ ಅನ್ನು ಹೇಗೆ ಲಿಂಕ್ ಮಾಡುವುದು ಎಂಬ ಬಗ್ಗೆ ವಿವರಿಸಿದರು. ಶೀಘ್ರದಲ್ಲೇ ಈ ಬಗ್ಗೆ ಆಡಳಿತ ಮಂಡಳಿ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ.

**ತಿಮ್ಮಪ್ಪನ ಲಡ್ಡು ಪ್ರಸಾದ ಗುಣಮಟ್ಟ ಮತ್ತು ರುಚಿ ಬಗ್ಗೆ ಮತ್ತೆ ಸಭೆ:** ಇನ್ನು ತಿರುಪತಿ ತಿಮ್ಮಪ್ಪನ ಲಡ್ಡು ಪ್ರಸಾದಗಳ ಗುಣಮಟ್ಟ ಮತ್ತು ರುಚಿ ಹೆಚ್ಚಿಸಲು ಕ್ರಮಕೈಗೊಳ್ಳಲು ಟಿಟಿಡಿ ಇಒ ಶ್ರೀ ಜೆ. ಶ್ಯಾಮರಾವ್ ಅಧಿಕಾರಿಗಳಿಗೆ ಇತ್ತೀಚೆಗಷ್ಟೇ ಆದೇಶಿಸಿದ್ದಾರೆ.

ಈ ಸಂಬಂಧ ಕಳೆದ ವಾರವೂ ತಿರುಪತಿಯ ಟಿಟಿಡಿ ಆಡಳಿತ ಭವನದಲ್ಲಿರುವ ಇಒ ಕಚೇರಿಯಲ್ಲಿ ಟಿಟಿಡಿ ಅಧಿಕಾರಿಗಳು ಮತ್ತು ಡೈರಿ ತಜ್ಞರೊಂದಿಗೆ ಸಭೆ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಇಒ, ಪ್ರಸ್ತುತ ಪರೀಕ್ಷೆ ನಡೆಸುತ್ತಿರುವ ವಿಧಾನಕ್ಕಿಂತ ಉತ್ತಮ ಗುಣಮಟ್ಟದ ತುಪ್ಪ ಖರೀದಿಸುವುದು ಹೇಗೆ, ಖರೀದಿಸಿದ ತುಪ್ಪವನ್ನು ಅತ್ಯಾಧುನಿಕ ತಂತ್ರಜ್ಞಾನದಿಂದ ಪರೀಕ್ಷಿಸುವುದು ಹೇಗೆ ಎಂಬುದರ ಬಗ್ಗೆ ಬದಲಾವಣೆಗಳನ್ನು ಮಾಡುವಂತೆ ತಜ್ಞರಿಗೆ ತಿಳಿಸಿದರು.

ನಂತರ ಖ್ಯಾತ ಡೈರಿ ತಜ್ಞರಾದ ಶ್ರೀ ವಿಜಯಭಾಸ್ಕರ್ ರೆಡ್ಡಿ ಮತ್ತು ಶ್ರೀ ಸುರೇಂದ್ರನಾಥ್ ಅವರು ಲಡ್ಡು ಗುಣಮಟ್ಟವನ್ನು ಸುಧಾರಿಸಲು ಎಸ್‌ಎಸ್‌ಐ ನಿಯಮಗಳ ಪ್ರಕಾರ ಗುಣಮಟ್ಟದ ತುಪ್ಪವನ್ನು ಹೇಗೆ ತಯಾರಿಸುವುದು, ಭಾರತೀಯ ಆಹಾರ ಸುರಕ್ಷತಾ ಪ್ರಾಧಿಕಾರ, ಆಗ್ ಮಾರ್ಕ್, ಟಿಟಿಡಿ ನಿಯಮಗಳ ಪ್ರಕಾರ ತುಪ್ಪದ ಗುಣಮಟ್ಟವನ್ನು ಹೇಗೆ ನಿರ್ವಹಿಸುವುದು ಎಂದು ವಿವರಿಸಿದರು. ಪವರ್ ಪಾಯಿಂಟ್ ಪ್ರೆಸೆಂಟೇಶನ್ ಮೂಲಕ. ಗುಣಮಟ್ಟದ ತುಪ್ಪದ ಪ್ರಮಾಣಿತ ಮೌಲ್ಯಗಳ ಬಗ್ಗೆ ಅವರು ತಮ್ಮ ಪಿಪಿಟಿಯಲ್ಲಿ ಉಲ್ಲೇಖಿಸಿದ್ದಾರೆ. ಲಡ್ಡು ಗುಣಮಟ್ಟವನ್ನು ಮತ್ತಷ್ಟು ಹೆಚ್ಚಿಸಲು ಅಗತ್ಯವಿರುವ ತುಪ್ಪವನ್ನು ಸಂಗ್ರಹಿಸಲು ಶೀಘ್ರವೇ ಸಮಗ್ರ ವರದಿ ಸಿದ್ಧಪಡಿಸುವಂತೆ ಸೂಚಿಸಿದ್ದಾರೆ.

## ಮುಂದಾದ ಬಿಬಿಎಂಪಿ!

**ಬಿಬಿಎಂಪಿ ಆಯುಕ್ತರು ಹೇಳುವುದೇನು?:** ರದ್ದಾದ ಕಾಮಗಾರಿಗಳಿಗೆ ಮತ್ತೆ ಅವಕಾಶ ನೀಡಿ ಬಿಲ್ ಮೊತ್ತ ಬಿಡುಗಡೆ ಮಾಡುವ ನಿರ್ಧಾರವನ್ನು ಸಮರ್ಥಿಸಿಕೊಂಡ ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್, ಇದಕ್ಕೆ ಎಂಜಿನಿಯರ್‌ಗಳು ಮತ್ತು ಕೇಂದ್ರ ಕಚೇರಿಯ ನಡುವಿನ ಸಂವಹನ ಸಮಸ್ಯೆಯೇ ಕಾರಣ ಎಂದು ಹೇಳಿದ್ದಾರೆ. ಗುತ್ತಿಗೆದಾರರು ಕೆಲಸವನ್ನು ನಿರ್ವಹಿಸುವ ಬಗ್ಗೆ ಸೂಕ್ತ ಪುರಾವೆಗಳನ್ನು ಒದಗಿಸಿದ ನಂತರವೇ ನಾವು ಅವರಿಗೆ ಅವಕಾಶಗಳನ್ನು ನೀಡಿದ್ದೇವೆ. ಅಂತಹ ಅನೇಕ ಮನವಿಗಳು ಈಗಲೂ ಬರುತ್ತಿವೆ. ಆದರೆ, ಇನ್ನೂ ಆರಂಭವಾಗದ ಕಾಮಗಾರಿಗಳಿಗೆ ಅವಕಾಶ ಕೊಡುತ್ತಿಲ್ಲ ಎಂದು ಅವರು ಹೇಳಿದ್ದಾರೆ.

**ಅಕ್ರಮಕ್ಕೆ ದಾರಿ:** ಬಿಬಿಎಂಪಿಯ ಈ ಕ್ರಮದಿಂದ ಹೆಚ್ಚೆಚ್ಚು ಗುತ್ತಿಗೆದಾರರು ತಾವು ಕಾಮಗಾರಿ ನಡೆಸಿದ್ದೇವೆ ಎಂದು ಹೇಳಿಕೊಂಡು ಮುಂದೆ ಬರುವ ಸಾಧ್ಯತೆ ಇದೆ. ಕಾನೂನುಬಾಹಿರ ಚಟುವಟಿಕೆಗಳಿಗೆ ಆಸ್ಪದ ನೀಡಿದಂತಾಗಲಿದೆ. ಇದರ ಹೆಚ್ಚುವರಿ ಆರ್ಥಿಕ ಹೊರೆ ಅಂತಿಮವಾಗಿ ಹೊಸ ಕಾಮಗಾರಿಗಳ ಮೇಲೆ ಪರಿಣಾಮ ಬೀರಲಿದೆ ಎಂದು ಬಿಬಿಎಂಪಿ ನಿವೃತ್ತ ಎಂಜಿನಿಯರ್ ಒಬ್ಬರು ಅಭಿಪ್ರಾಯಪಟ್ಟಿದ್ದಾರೆ. ಅಲ್ಲದೆ, ಮತ್ತೊಬ್ಬ ಹಿರಿಯ ಅಧಿಕಾರಿ ಕೂಡ ಬಿಬಿಎಂಪಿಯ ನಿರ್ಧಾರಕ್ಕೆ ಆಘಾತ ವ್ಯಕ್ತಪಡಿಸಿದ್ದಾರೆ.

## ಬೆಳಕಾದ ಪೊಲೀಸಪ್ಪ

ಮಕ್ಕಳ ಸಹಾಯಕ್ಕಾಗಿ ದುಡಿಯುತ್ತಿದ್ದಾರೆ. ಬಡ ವಿದ್ಯಾರ್ಥಿಗಳಿಗೆ ಶಾಲಾ ಸಾಮಾಗ್ರಿಗಳನ್ನು ಒದಗಿಸುತ್ತಿದ್ದಾರೆ. ಆರಂಭದಲ್ಲಿ ಒಂದು ಶಾಲೆಯಿಂದ ಶುರುವಾದ ಇವರ ಸೇವೆ ಈಗ 6 ಶಾಲಾ ಮಕ್ಕಳ ನೆರವಿನವರೆಗೆ ಬಂದಿದೆ. ಸುಮಾರು 600 ಬಡ ಮಕ್ಕಳಿಗೆ ಲೋಕೇಶಪ್ಪ ಅವರು ಶಾಲಾ ಸಾಮಾಗ್ರಿಗಳನ್ನು ಒದಗಿಸಿ ತಮಗಾಗುವಷ್ಟು ಸಹಾಯ ಮಾಡುತ್ತಿದ್ದಾರೆ. ತಮ್ಮ ಎರಡು ತಿಂಗಳ ಸಂಬಳವನ್ನು ಬಡಮಕ್ಕಳ ವಿದ್ಯಾಭ್ಯಾಸಕ್ಕೆಂದು

## ಮೊದಲನೇ ಪುಟದಿಂದ...

ಮುಡಿಪಿಟ್ಟಿದ್ದಾರೆ. ಕಬ್ಬನ್ ಪಾರ್ಕ್ ಸಂಚಾರಿ ಠಾಣೆಯ ಹೆಡ್ ಕಾನ್ಸ್ ಟೇಬಲ್ ಆಗಿ ಕರ್ತವ್ಯದಲ್ಲಿದ್ದಾಗ 2019ರಲ್ಲಿ ಲೋಕೇಶಪ್ಪ ತನ್ನ ಮಗಳನ್ನು ಕಳೆದುಕೊಂಡರು. ಬೆಂಕಿ ಅವಘಡದಲ್ಲಿ ಮಗಳು ಹರ್ಷಾಲಿ ಮೃತಪಟ್ಟಳು. ಮಗಳ ಸಾವಿನ ಬಳಿಕ ಲೋಕೇಶಪ್ಪನವರು ಬಡ ಮಕ್ಕಳ ಸಹಾಯಕ್ಕೆ ನಿಲ್ಲಲು ನಿರ್ಧರಿಸಿದರು. ತನ್ನ ಮಗಳ ನೆನಪಿನಲ್ಲಿ ಬಡಮಕ್ಕಳಿಗೆ ಸಹಾಯ ಮಾಡುವ ಮುಂದಾದರು. ತನ್ನ ಮಗಳ ಶಿಕ್ಷಣಕ್ಕೆ ಖರ್ಚಾಗುತ್ತಿದ್ದ ಹಣ ಬಡ ಮಕ್ಕಳ ಶಾಲಾ ಸಾಮಾಗ್ರಿಗಳಿಗೆ ನೀಡುತ್ತಿದ್ದಾರೆ.

ಕಳೆದ ಒಂದು ವರ್ಷದಿಂದ ಆರು ಶಾಲೆಗಳ ಬಡ ಮಕ್ಕಳಿಗೆ ಶಾಲಾ ಸಾಮಾಗ್ರಿಗಳಿಗೆ ಧನಸಹಾಯ ಮಾಡುತ್ತಿದ್ದಾರೆ. ಬೆಂಗಳೂರಿನ ಒಂದು ಶಾಲೆ, ಮೈಸೂರಿನ ಒಂದು ಶಾಲೆ ಹಾಗೂ ಹಾಸನದ ನಾಲ್ಕು ಶಾಲೆಯ ಬಡ ಮಕ್ಕಳಿಗೆ ನೆರವಾಗಿದ್ದಾರೆ. ಬೆಂಗಳೂರಿನ 200 ಮಕ್ಕಳು ಸೇರಿದಂತೆ 01 ರಿಂದ 08ನೇ ತರಗತಿಯ 600 ಮಕ್ಕಳಿಗೆ ಸಾಮಾಗ್ರಿಗಳನ್ನು ನೀಡುತ್ತಿದ್ದಾರೆ. ಲೋಕೇಶಪ್ಪ ಅವರ ಪತ್ನಿ ಶಿಕ್ಷಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದರು. ಈಗ ತಮ್ಮ ಮಗಳ ಹೆಸರಿನಲ್ಲಿ ಎನ್ ಜಿಒ ನಡೆಸುತ್ತಿದ್ದಾರೆ. ಸದ್ಯ ಎಎಸ್ಐ ಲೋಕೇಶಪ್ಪನವರ ಕೆಲಸಕ್ಕೆ ಹಲವೆಡೆ ಪ್ರಶಂಸೆ ವ್ಯಕ್ತವಾಗಿದೆ.

ಬಡತನದಲ್ಲೇ ಬೆಳೆದಿದ್ದ ಎಎಸ್ ಐ ಲೋಕೇಶಪ್ಪ, ಪಿಯುಸಿ ಫಸ್ಟ್ ಕ್ಲಾಸ್ ನಲ್ಲಿ ಪಾಸ್ ಆದರೂ ಹಣ ಇಲ್ಲದೆ ಶಿಕ್ಷಣಕ್ಕೆ ಪರದಾಡಿದ್ದರು. ಬಡ ಮಕ್ಕಳ ಶಿಕ್ಷಣಕ್ಕೆ ಎದುರಾಗುವ ಆರ್ಥಿಕ ಸಮಸ್ಯೆ ಅರಿತಿದ್ದ ಲೋಕೇಶಪ್ಪ, ಮಗಳ ಸಾವಿಗೆ ಕೊರಗುವ ಬದಲು ಬದಲಾವಣೆಯ ನಿರ್ಧಾರ ಮಾಡಿದರು.

ಬುಡಕಟ್ಟು ಜನಾಂಗದ ಮಕ್ಕಳು, ಕಟ್ಟಡ ನಿರ್ಮಾಣ ಜನರ ಮಕ್ಕಳ ವಿದ್ಯಾಭ್ಯಾಸಕ್ಕೆ ನೆರವಾಗಿದ್ದಾರೆ. ಲೋಕೇಶಪ್ಪ ಸೇವೆಗೆ ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್ ಸೇರಿದಂತೆ ಹಲವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

## ವಿಮಾನ ಸಂಚಾರ

ಇದರೊಂದಿಗೆ, ಬೆಂಗಳೂರು ಹಾಗೂ ಅಬುಧಾಬಿ ನಡುವಣ ಪ್ರಯಾಣ ಮತ್ತಷ್ಟು ಸುಗಮವಾಗಲಿದೆ. ಭಾರತೀಯ ಪ್ರಯಾಣಿಕರಿಗೆ ಸೇವೆ ಸಲ್ಲಿಸುವುದು ಮಾತ್ರ ಈ ವಿಮಾನ ಸಂಚಾರ ಆರಂಭಿಸುವ ಉದ್ದೇಶವಲ್ಲ. ಬೆಂಗಳೂರಿಗೆ ಅಂತಾರಾಷ್ಟ್ರೀಯ ಮಟ್ಟದ ಪ್ರವಾಸಿಗರನ್ನು ಆಕರ್ಷಿಸುವ ಗುರಿಯನ್ನೂ ಹೊಂದಿದೆ. ನಗರದ ಶ್ರೀಮಂತ ಪರಂಪರೆ ಮತ್ತು ಐತಿಹಾಸಿಕ ಹೆಗ್ಗುರುತುಗಳನ್ನು ಎತ್ತಿ ತೋರಿಸಲು ಉದ್ದೇಶಿಸಲಾಗಿದೆ ಎಂದು ಇಂಡಿಗೋ ತಿಳಿಸಿದೆ.

## ಸಂಚಾರಕ್ಕೆ ಸಮಸ್ಯೆ

ಪ್ರವಾಸಿಗರು ರಸ್ತೆ ಮಧ್ಯೆ ಕಾರು ನಿಲ್ಲಿಸಿಕೊಂಡು ಕುಣಿದು ಕುಪ್ಪಳಿಸಿರುವ ವಿಡಿಯೋ ದೊರೆತಿದೆ. ಪೊಲೀಸರ ಭಯ ಹೇಗೂ ಇಲ್ಲ, ಸ್ಥಳೀಯರ ಮಾತಿಗೆ ಕಿಮ್ಮತ್ತು ನೀಡದೆ ಪ್ರಪಾತದ ಸ್ಥಳದಲ್ಲೂ ಪ್ರವಾಸಿಗರು ಮೋಜು ಮಾಡುತ್ತಿದ್ದಾರೆ. ಮಳೆ ಮಂಜಿನಲ್ಲಿ ಪ್ರವಾಸಿಗರ ಮೋಜು ಮಸ್ತಿ ಹೆಚ್ಚಾಗಿದೆ. ಈ ಪ್ರದೇಶ ಬಣಕಲ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿದೆ.

**ಚಾರ್ಮಾಡಿ ಘಾಟಿಯಲ್ಲೂ ಪ್ರವಾಸಿಗರ ಸಾಹಸ:** ಚಾರ್ಮಾಡಿ ಘಾಟಿ ರಸ್ತೆಯಲ್ಲಿಯೂ ಪ್ರಯಾಣಿಕರು, ಪ್ರವಾಸಿಗರು ಹುಚ್ಚಾಟ ಮೆರೆಯುತ್ತಿದ್ದಾರೆ. ಮಳೆಯಿಂದ ಸೃಷ್ಟಿಯಾಗಿರುವ ಕಿರು ಜಲಪಾತಗಳ ವೀಕ್ಷಣೆಗೆ ಬಂಡೆ ಮೇಲೆ ನಿಂತು ಹುಚ್ಚಾಟ ಮಾಡುತ್ತಿದ್ದಾರೆ. ಜಾರುವ ಬಂಡೆಗಳ ಮೇಲೆ ಪ್ರವಾಸಿಗರು ಮೋಜು ಮಸ್ತಿ ಮಾಡುತ್ತಿರುವುದು ಅಪಾಯಕ್ಕೆ ಆಹ್ವಾನ ನೀಡುತ್ತಿದೆ. ಜಾರುವ ಬಂಡೆ ಮೇಲಿಂದ ಬಿದ್ದು ಕೈಕಾಲು ಮುರಿದುಕೊಂಡ ಕೆಲವು ಉದಾಹರಣೆಗಳಿದ್ದರೂ ಪ್ರವಾಸಿಗರು ಬುದ್ಧಿ ಕಲಿತಿಲ್ಲ.

## ಈಗ ಡಂಪಿಂಗ್ ಯಾರ್ಡ್ !

ಈ ಬಗ್ಗೆ ಬಿಬಿಎಂಪಿ ಅಧಿಕಾರಿಗಳಿಗೆ ದೂರು ಕೊಟ್ಟರೂ ಯಾವುದೇ ಪ್ರಯೋಜನವಾಗಿಲ್ಲ ಅಂತ ದೂರುದಾರರು ಆಕ್ರೋಶ ವ್ಯಕ್ತಪಡಿಸ್ತಿದ್ದಾರೆ.

ಇನ್ನೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಬೆಂಗಳೂರು ಮಹಾನಗರ ಪಾಲಿಕೆ ಅಧಿಕಾರಿಗಳು ನಿಜಕ್ಕೂ ಕಣ್ಣು ಮುಚ್ಚಿ ಕುಳಿತಿದ್ದೀರಾ ಅಥವಾ ನಿಮ್ಮ ಕುಮ್ಮಕ್ಕಿನಲ್ಲೇ ಈ ರೀತಿ ಮಾಡ್ತಿದ್ದಾರಾ ಅನ್ನೋ ಪ್ರಶ್ನೆ ಮೂಡದೇ ಇರದು. ಸಂಪೂರ್ಣ ಗಬ್ಬೆದ್ದು ನಾರುತ್ತಿವೆ ಅಶೋಕ ಪಿಲ್ಲರ್ ಬಳಿಯಿರುವ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ. ಇಲ್ಲಿ ಬಂದ್ರೆ ರೋಗ ವಾಸಿಯಾಗೋದ್ ಇರಲಿ, ಹೊಸ ರೋಗ ಬರದಿದ್ದರೆ ಸಾಕು ಎನ್ನುವಷ್ಟು ಹೀನ ಪರಿಸ್ಥಿತಿಯಿದೆ.

ಆರೋಗ್ಯ ಕೇಂದ್ರದ ಸುತ್ತ ಕಸ ತಂದು ಸುರಿದಿರುವ ಬಿಬಿಎಂಪಿ ಅಧಿಕಾರಿಗಳು, ಸಿಬ್ಬಂದಿಗಳಿಗೆ ಇಲ್ಲಿ ಸುರಿಯಬೇಡಿ ಎಂದು ಹೇಳಿದ್ರೂ ಕ್ಯಾರೆ ಅಂದಿಲ್ಲ. ಇದರಿಂದ ಪ್ರತಿದಿನ ಜೀವನ ಮಾಡುವುದಕ್ಕೆ ಕಷ್ಟ ಆಗಿದೆ. ಉಸಿರಾಡಲು ಆಗ್ತಿಲ್ಲ. ಮನೆ ತುಂಬಾ ಇಲಿ ಹೆಗ್ಗಣ್ಣಗಳ ಕಾಟ ಆಗಿದೆ. ಡೆಂಗ್ಯೂ ಕಾಯಿಲೆ ಹೆಚ್ಚಾಗ್ತಿದೆ. ನಮಗೆ ತುಂಬಾ ಭಯ ಆಗ್ತಿದೆ ಎಂದು ಪಕ್ಕದ ಮನೆಯ ನಿವಾಸಿ ಸುಮ ಆತಂಕ ವ್ಯಕ್ತಪಡಿಸಿದ್ದಾರೆ.

ಒಟ್ಟಾರೆ ಬಿಬಿಎಂಪಿಯ ಕೆಲ ಅಧಿಕಾರಿಗಳು ಸಿಬ್ಬಂದಿಗಳಿಂದ ಜನರು ನರಕ ಯಾತನೆ ಅನುಭವಿಸುವಂತಾಗಿದೆ. ಆಸ್ಪತ್ರೆ ಇರೋ ಜಾಗದಲ್ಲಿ ಡಂಪಿಂಗ್ ಯಾರ್ಡ್ ರೀತಿ ಕಸ ಹಾಕಿದ್ರೆ ಎಷ್ಟು ಸರಿ. ಇನ್ನಾದ್ರೂ ಸಂಬಂಧಪಟ್ಟವರು ಎಚ್ಚೆತ್ತುಕೊಳ್ಳಲಿ ಎನ್ನುವುದೇ ನಮ್ಮ ಒತ್ತಾಯ.

## ಡಾಕ್ಟರ್

ಮುಂದುವರಿಸಲು ಅನುಮತಿಯನ್ನು ನಿರಾಕರಿಸಿತ್ತು. ಬಳಿಕ ತನ್ನ ಕಾಲೇಜಿನ ಪ್ರಾಂಶುಪಾಲರ ಸಹಾಯ ಪಡೆದು ಜಿಲ್ಲಾಧಿಕಾರಿ, ರಾಜ್ಯ ಶಿಕ್ಷಣ ಸಚಿವರನ್ನು ಸಂಪರ್ಕಿಸಿ ನಂತರ ಗುಜರಾತ್ ಹೈಕೋರ್ಟ್ ವರೆಗೂ ಹೋಗಿದ್ದಾರೆ. ಹೈಕೋರ್ಟ್ ್‌ನಲ್ಲಿ ಕೇಸ್ ಸೋತ ನಂತರವೂ ಡಾ.ಬಾರಯ್ಯ ಭರವಸೆ ಕಳೆದುಕೊಳ್ಳಲಿಲ್ಲ. ಅವರು ಸುಪ್ರೀಂ ಕೋರ್ಟ್ ಸಂಪರ್ಕಿಸಿ 2018 ರಲ್ಲಿ ಪ್ರಕರಣವನ್ನು ಗೆದ್ದು, 2019 ರಲ್ಲಿ MBBS ಗೆ ಪ್ರವೇಶ ಪಡೆದರು ಮತ್ತು ಈಗ ಅವರ MBBS ಮುಗಿಸಿದ ನಂತರ ಭಾವನಗರದ Sir-T ಆಸ್ಪತ್ರೆಯಲ್ಲಿ ಇಂಟರ್ನ್ ಆಗಿ ಕೆಲಸ ಮಾಡುತ್ತಿದ್ದಾರೆ.

''ನಾನು 12 ನೇ ತರಗತಿಯಲ್ಲಿ ಉತ್ತೀರ್ಣನಾದೆ ಮತ್ತು MBBS ಗೆ ಸೇರಲು ಒಇಇಖಿ ಪರೀಕ್ಷೆಯಲ್ಲಿ ತೇರ್ಗಡೆಯಾಗಿ ಫಾರ್ಮ್ ಅನ್ನು ಭರ್ತಿ ಮಾಡಿದ ನಂತರ, ಮೆಡಿಕಲ್ ಕೌನ್ಸಿಲ್ ಆಫ್ ಇಂಡಿಯಾ ಸಮಿತಿಯು ನಾನು ಕುಳ್ಳಗಿರುವುದರಿಂದ ನನ್ನನ್ನು ತಿರಸ್ಕರಿಸಿತು. ಎತ್ತರ ಕಡಿಮೆ ಇರುವ ಕಾರಣ ತುರ್ತು ಚಿಕಿತ್ಸೆ ಸಮಯದಲ್ಲಿ ನಿಭಾಯಿಸಲು ಸಾಧ್ಯವಿಲ್ಲ ಎಂದು ಹೇಳಿದ್ದರು. ನಂತರ, ನಾನು ನೀಲಕಂಠ ವಿದ್ಯಾಪೀಠದ ನನ್ನ ಪ್ರಾಂಶುಪಾಲ ಡಾ ದಲಪತ್ ಭಾಯಿ ಕಟಾರಿಯಾ ಮತ್ತು ರೇವಿಶ್ ಸರ್ವೈಯಾ ಅವರೊಂದಿಗೆ ಈ ಬಗ್ಗೆ ಮಾತನಾಡಿದೆ ಮತ್ತು ಇದರ ಬಗ್ಗೆ ನಾವು ಏನು ಮಾಡಬಹುದು ಎಂದು ಕೇಳಿದ್ದೆ'' ಎಂದು ಡಾ ಬಾರಯ್ಯ ತಮ್ಮ ಆರಂಭಿಕ ದಿನದ ಹೋರಾಟದ ಬಗ್ಗೆ ANIಗೆ ಹೇಳಿದ್ದಾರೆ.

''ಭಾವನಗರ ಕಲೆಕ್ಟರ್ ಮತ್ತು ಗುಜರಾತ್ ಶಿಕ್ಷಣ ಸಚಿವರನ್ನು ಭೇಟಿ ಮಾಡಲು ಅವರು ನನಗೆ ಹೇಳಿದರು. ಭಾವನಗರ ಕಲೆಕ್ಟರ್ ನಿರ್ದೇಶನದ ನಂತರ, ನಾವು ಪ್ರಕರಣವನ್ನು ಗುಜರಾತ್ ಹೈಕೋರ್ಟ್‌ಗೆ ತೆಗೆದುಕೊಳ್ಳಲು ನಿರ್ಧರಿಸಿದ್ದೇವೆ. ವಿಕಲಚೇತನರಾಗಿರುವ ಇಬ್ಬರು ಅಭ್ಯರ್ಥಿಗಳು ನಮ್ಮೊಂದಿಗಿದ್ದರು. ನಾವು ಹೈಕೋರ್ಟ್‌ನಲ್ಲಿ ಪ್ರಕರಣವನ್ನು ಸೋತಿದ್ದೇವೆ ಆದರೆ ನಂತರ ನಾವು ನಿರ್ಧಾರವನ್ನು ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಲು ನಿರ್ಧರಿಸಿದ್ದೇವೆ, ''ಎಂದು ಅವರು ಹೇಳಿದರು.

ಅವರ ಎಂಬಿಬಿಎಸ್ ಪ್ರಯಾಣವು ಅಂತಿಮವಾಗಿ ಹೇಗೆ ಪ್ರಾರಂಭವಾಯಿತು ಎಂಬುದರ ಕುರಿತು ಮಾತನಾಡಿದ ಡಾ.ಬಾರಯ್ಯ, ''2018 ರಲ್ಲಿ, ನಾನು ಎಂಬಿಬಿಎಸ್ ಕೋಸ್ ್‌ಗೆ ಪ್ರವೇಶ ಪಡೆಯಬಹುದು ಎಂದು ಸುಪ್ರೀಂ ಕೋರ್ಟ್ ತೀರ್ಪು ನೀಡಿತು. 2018 ರ ಎಂಬಿಬಿಎಸ್ ಕೋರ್ಸ್‌ಗೆ ಪ್ರವೇಶ ಪೂರ್ಣಗೊಂಡಿದ್ದರಿಂದ, ನಾನು 2019 ರ ಎಂಬಿಬಿಎಸ್ ಕೋಸ್ ್‌ಗೆ ಪ್ರವೇಶ ಪಡೆಯುತ್ತೇನೆ ಎಂದು ಸುಪ್ರೀಂ ಕೋರ್ಟ್ ಹೇಳಿತ್ತು. ನಾನು ಭಾವನಗರದಲ್ಲಿರುವ ಸರ್ಕಾರಿ ವೈದ್ಯಕೀಯ ಕಾಲೇಜಿನಲ್ಲಿ ಪ್ರವೇಶ ಪಡೆದೆ ಮತ್ತು ನನ್ನ ಒಃಃಖ ಪ್ರಯಾಣ ಪ್ರಾರಂಭವಾಯಿತು ಎಂದು ಹೇಳಿಕೊಂಡಿದ್ದಾರೆ.

## ಬೆಲೆ ಇಳಿಕೆ

ಇಂಡಿಯನ್ ಆಯಿಲ್ ಕಾರ್ಪೊರೇಷನ್ ಕಂಪನಿ ವಾಣಿಜ್ಯ ಬಳಕೆಯ ಎಲ್ ಪಿಜಿ ಸಿಲಿಂಡರ್ ಬೆಲೆ ಇಳಿಸಿದ್ದರಿಂದ ಹೋಟೆಲ್ ಉದ್ಯಮಿಗಳಿಗೆ ಅನುಕೂಲವಾಗಿದೆ. ಆದರೆ, ಸಬ್ಸಿಡಿ ರಹಿತ 14.2 ಕೆಜಿ ಅಡುಗೆ ಅನಿಲ ಸಿಲಿಂಡರ್ ಬೆಲೆಯಲ್ಲಿ ಯಾವುದೇ ಬದಲಾವಣೆಯಾಗಿಲ್ಲ.

ಬೆಲೆ ಇಳಿಕೆ ನಂತರ ಕರ್ನಾಟಕ ಮತ್ತು ಬೆಂಗಳೂರಿನಲ್ಲಿ ವಾಣಿಜ್ಯ ಬಳಕೆಯ 19 ಕೆಜಿಯ ಸಿಲಿಂಡರ್ ಬೆಲೆ 1813 ರೂಪಾಯಿ ಇದೆ. ದೆಹಲಿಯಲ್ಲಿ ಪ್ರತಿ ಸಿಲಿಂಡರ್ ಬೆಲೆ 1,646 ರೂಪಾಯಿ ಇದೆ. ಮುಂಬೈ ಮತ್ತು ಚೆನ್ನೈನಲ್ಲಿ 19 ಕೆಜಿಯ ವಾಣಿಜ್ಯ ಸಿಲಿಂಡರ್ ಬೆಲೆ 1,598 ಮತ್ತು 1,809.5 ರೂ. ಗೆ ಇಳಿದಿದೆ. ಎರಡೂ ನಗರಗಳಲ್ಲಿ 31 ರೂ. ಇಳಿಕೆಯಾಗಿದೆ.

ಇಂಡಿಯನ್ ಆಯಿಲ್ ಪ್ರಕಾರ 14.5 ಕೆಜಿಯ ಸಬ್ಸಿಡಿ ಅಡುಗೆ ಅನಿಲ ಬೆಲೆ ಕೋಲ್ಕತ್ತಾದಲ್ಲಿ 892 ರೂಪಾಯಿ ಇದೆ. ದೆಹಲಿ, ಮುಂಬೈ ಮತ್ತು ಚೆನ್ನೈನಲ್ಲಿ ಸಬ್ಸಿಡಿ ರಹಿತ 14.2 ಕೆಜಿ ಅಡುಗೆ ಅನಿಲ ಸಿಲಿಂಡರ್ ಬೆಲೆ ಕ್ರಮವಾಗಿ 803, 802.5, 818.5 ರೂ. ಆಗಿದೆ. ಇಂಡಿಯನ್ ಆಯಿಲ್ ಕಾರ್ಪೊರೇಷನ್ ಕಂಪನಿ 2024ರ ಜೂನ್ ನಲ್ಲಿ, ಇಂಡಿಯನ್ ಆಯಿಲ್ ನಾಲ್ಕು ಮೆಟ್ರೋ ನಗರಗಳಲ್ಲಿ 19 ಕೆಜಿಯ ಎಲ್‌ಪಿಜಿ ಸಿಲಿಂಡರ್‌ನ ಬೆಲೆಯನ್ನು 72 ರೂ.ಗೆ ಇಳಿಕೆ ಮಾಡಿತ್ತು.

ಸರ್ಕಾರಿ ಸ್ವಾಮ್ಯದ ಇಂಡಿಯನ್ ಆಯಿಲ್ ಕಾರ್ಪೊರೇಷನ್ (ಐಒಸಿ), ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ (ಬಿಪಿಸಿಎಲ್), ಮತ್ತು ಹಿಂದೂಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ (ಎಚ್‌ಪಿಸಿಎಲ್) ಅಂತರರಾಷ್ಟ್ರೀಯ ಇಂಧನದ ಸರಾಸರಿ ಬೆಲೆ ಮತ್ತು ವಿದೇಶಿ ವಿನಿಮಯ ದರದ ಆಧಾರದ ಮೇಲೆ ಎಲ್ ಪಿಜಿ ಸಿಲಿಂಡರ್ ಬೆಲೆಯನ್ನು ಪ್ರತಿ ತಿಂಗಳು ಒಂದನೇ ತಾರೀಖಿನಂದು ಪರಿಷ್ಕರಿಸುತ್ತವೆ.

# ಮಕ್ಕಳನ್ನು ಶಿಸ್ತುಬದ್ಧವಾಗಿ ರೂಪಿಸುವ ಗುರಿ



**ಮೈಸೂರು:** ರಾಜ್ಯದಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯ 20 ಲಕ್ಷ ವಿದ್ಯಾರ್ಥಿಗಳನ್ನು ಸ್ಕೌಟ್ಸ್ ಮತ್ತು ಗೈಡ್ಸ್ ವ್ಯಾಪ್ತಿಗೆ ತಂದು ಅವರನ್ನು ಶಿಸ್ತುಬದ್ಧ ಮಕ್ಕಳನ್ನಾಗಿ ರೂಪಿಸುವ ಗುರಿ ಹೊಂದಲಾಗಿದೆ ಎಂದು ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್. ಸಿಂಧ್ಯಾ ಹೇಳಿದರು.

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ವತಿಯಿಂದ ನಗರದ ಸಂಸ್ಥೆಯ ಸಭಾಂಗಣದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಜಿಲ್ಲೆಯ ಅಧಿಕಾರಿಗಳಿಗೆ ಹಮ್ಮಿಕೊಂಡಿದ್ದ ಮಾಹಿತಿ ಶಿಬಿರದಲ್ಲಿ ಮಾತನಾಡಿ, ರಾಜ್ಯದಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯ 1 ಕೋಟಿ ವಿದ್ಯಾರ್ಥಿಗಳು ಇದ್ದು, ಪ್ರಸ್ತುತ 6.50 ಲಕ್ಷ ವಿದ್ಯಾರ್ಥಿಗಳು ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಗೆ ಸೇರ್ಪಡೆಯಾಗಿದ್ದಾರೆ ಎಂದು ಹೇಳಿದರು.

ವಿದ್ಯಾರ್ಥಿಗಳು ಸೇವಾ ಮನೋಭಾವ ಬೆಳೆಸಿಕೊಳ್ಳಬೇಕು. ಇದರ ಜತೆಗೆ ಪ್ರಪಂಚದ ಹಾಗುಹೋಗುಗಳನ್ನು ತಿಳಿದುಕೊಳ್ಳಬೇಕು. ಸಮಾಜವನ್ನು ಪ್ರೀತಿಸುವ ಗುಣ ಬೆಳೆಸಿಕೊಳ್ಳಬೇಕು. ಅವರಲ್ಲಿ ಮಾನವೀಯ ಮೌಲ್ಯಗಳು ಹೆಚ್ಚಾಗಬೇಕು. ಈ ಎಲ್ಲ ಗುಣಗಳು ಮಕ್ಕಳಲ್ಲಿ ಬೆಳೆಯಲು ಸ್ಕೌಟ್ಸ್ ಮತ್ತು ಗೈಡ್ಸ್‌ನ ಅವಶ್ಯಕತೆ ಇದೆ ಎಂದು ಅಭಿಪ್ರಾಯಪಟ್ಟರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪ ನಿರ್ದೇಶಕ ಎಸ್.ಟಿ.ಜವರೇಗೌಡ ಮಾತನಾಡಿ, ಮಕ್ಕಳಲ್ಲಿ ನೈತಿಕ ಮೌಲ್ಯಗಳನ್ನು ಹೆಚ್ಚಿಸಲು ಸ್ಕೌಟ್ಸ್ ಮತ್ತು ಗೈಡ್ಸ್‌ನ ಅವಶ್ಯಕತೆ ಇದೆ. ಹೀಗಾಗಿ ಪ್ರತಿ ಶಾಲೆಯಲ್ಲೂ ಕನಿಷ್ಠ 5 ಸ್ಕೌಟ್ಸ್ ಮತ್ತು ಗೈಡ್ಸ್ ತಂಡವನ್ನು ರಚಿಸಬೇಕು ದೈಹಿಕ ಶಿಕ್ಷಕರು ಇರುವ ಶಾಲೆಯಲ್ಲಿ ಕಡ್ಡಾಯವಾಗಿ ಸ್ಕೌಟ್ಸ್ ಮತ್ತು ಗೈಡ್ಸ್ ತಂಡ ರಚನೆಯಾಗಲೇಬೇಕು ಎಂದು ಹೇಳಿದರು.

ವೇದಿಕೆಯಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ರಾಜ್ಯ ಜಂಟಿ ನಿರ್ದೇಶಕ ಬಿ.ಕೆ.ಬಸವರಾಜು, ಜಿಲ್ಲಾ ಮುಖ್ಯ ಆಯುಕ್ತ ಪಿ.ವಿಶ್ವನಾಥ್ ಹಾಗೂ ಇತರರು ಇದ್ದರು.

# ದೇಶದ ಬೆಳವಣಿಗೆಯಲ್ಲಿ ವಿಜ್ಞಾನದ ಪಾತ್ರ ಅಪಾರ

**ಮೈಸೂರು:** ವಿಜ್ಞಾನವಿಲ್ಲದೆ ಯಾವ ನೂತನ ಅವಿಷ್ಕಾರ, ಸಂಶೋಧನೆ ಸಾಧ್ಯವಿಲ್ಲ. ದೇಶದ ಅಭಿವೃದ್ಧಿಯಲ್ಲಿ ಮತ್ತು ಮಾನವನ ಸರ್ವತೋಮುಖ ಬೆಳವಣಿಗೆಯಲ್ಲಿ ವಿಜ್ಞಾನದ ಪಾತ್ರ ಅಪಾರವಾಗಿದೆ ಎಂದು ಮೈಸೂರು ವಿಶ್ವವಿದ್ಯಾನಿಲಯದ ಮೌಲ್ಯಮಾಪನದ ಉಪ ಕುಲಸಚಿವ ಡಾ.ಬಸಪ್ಪ ತಿಳಿಸಿದರು.

ವಿಜಯ ವಿಠಲ ಸಂಯುಕ್ತ ಪದವಿ ಪೂರ್ವ ಕಾಲೇಜಿನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವಿಜ್ಞಾನ ವೇದಿಕೆ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಪಠ್ಯಕ್ರಮದಲ್ಲಿ ಅತ್ಯುನ್ನತ ತರಬೇತಿ ಹೊಂದುವ ಕೌಶಲ ಪಡೆಯುವುದರಿಂದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಸುಲಭವಾಗುತ್ತದೆ. ಕಲಿಕೆಯ ಉದ್ದೇಶ ಮತ್ತು ಗುರಿ ಅರಿತು ಯಾವ ಕ್ಷೇತ್ರ ಆರಿಸಿಕೊಳ್ಳುವಿರೋ ಅದರಲ್ಲಿ ನೀವು ಸಂಪೂರ್ಣ ಜ್ಞಾನ ಪಡೆಯಲು ಪ್ರಯತ್ನಿಸಿ. ಕೌಶಲ್ಯಾಧಾರಿತ, ನವನವೀನ ವೈಜ್ಞಾನಿಕ ಸಂಶೋಧನೆಗಳಲ್ಲಿ ವಿದ್ಯಾರ್ಥಿಗಳು ತಮ್ಮನ್ನು ತೊಡಗಿಸಿಕೊಂಡು ದೇಶದ ಗೌರವ ಹೆಚ್ಚಿಸಬೇಕು. ಪರಿಸರಕ್ಕೆ ಪೂರಕವಾದ ಚಟುವಟಿಕೆಗಳಾದ ಪ್ಲಾಸ್ಟಿಕ್ ಬಳಕೆ ನಿಷೇಧ, ನೀರಿನ ಸದ್ಬಳಕೆ ಮುಂತಾದ ಪರಿಸರ ಜಾಗೃತಿ ಕಾರ್ಯಕ್ರಮಗಳಲ್ಲಿ ಭಾಗವಹಿಸಬೇಕು. ಪ್ರತಿಯೊಬ್ಬ ವಿದ್ಯಾರ್ಥಿ ವೈಜ್ಞಾನಿಕ ಮನೋಭಾವ ಬೆಳೆಸಿಕೊಂಡು ವಿಜ್ಞಾನದಲ್ಲಿ ಸತತ ಅಧ್ಯಯನಶೀಲರಾಗಬೇಕೆಂದು ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ವಿಜಯ ವಿಠಲ ವಿದ್ಯಾಸಂಸ್ಥೆಗಳ ಗೌರವ ಕಾರ್ಯದರ್ಶಿ ವಾಸುದೇವ ಭಟ್ ಮಾತನಾಡಿ, ಮಾನವ ಜೀವನ ಉತ್ತಮಪಡಿಸಲು ವಿದ್ಯಾವಂತರಾಗುವುದೇ ಮಾತ್ರವಲ್ಲದೆ ಹೊಸ ಹೊಸ ಅವಿಷ್ಕಾರ ಮಾಡುವ ಮೂಲಕ ಸಮಾಜಕ್ಕೆ ಕೊಡುಗೆ ನೀಡಬೇಕು. ಮನುಕುಲದ ಉದ್ಧಾರಕ್ಕೆ ವಿಜ್ಞಾನಿಗಳ ಕೊಡುಗೆ ಅವಿಸ್ಮರಣೀಯ ಎಂದು ಹೇಳಿದರು.

ಕಾಲೇಜಿನ ಪ್ರಾಚಾರ್ಯ ಹೆಚ್.ಸತ್ಯಪ್ರಸಾದ್ ಮಾತನಾಡಿ, ವೈಜ್ಞಾನಿಕ ಮನೋಭಾವ, ಚಿಂತನೆ ವಿದ್ಯಾರ್ಥಿಗಳಲ್ಲಿ ಸಂಶೋಧನೆ ಮತ್ತು ಪ್ರಾಯೋಗಿಕ ಕಲಿಕೆ ಬೆಳೆಸುತ್ತದೆ. ವಿದ್ಯಾರ್ಥಿಗಳು ವಿಜ್ಞಾನ ವೇದಿಕೆಯ ಸದ್ಬಳಕೆ ಮಾಡಿಕೊಳ್ಳುವುದರಿಂದ ಪ್ರಶ್ನಿಸುವ, ತಾರ್ಕಿಕ ಮನೋಭಾವ ಹೆಚ್ಚುತ್ತದೆ ಎಂದು ಹೇಳಿದರು.

ವಿಜ್ಞಾನ ಸಂಘದ ಸಂಚಾಲಕಿ ಶ್ವೇತಾರವರು ವಿಜ್ಞಾನ ಸಂಘದ ಧ್ಯೇಯೋದ್ದೇಶಗಳನ್ನು ತಿಳಿಸಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ಮಯೂರಲಕ್ಷ್ಮಿ, ಅನಿತಾ, ಭಾವನಾ ಭಾರದ್ವಾಜ್, ಪಂಚಮಿ ಮತ್ತು ಸಾಗರಿಕ ಪ್ರಾರ್ಥಿಸಿ, ಫಾಸ್ಟಿನಾ, ಖುಷಿ.ಎಂ.ಗೌಡ ನಿರೂಪಿಸಿ, ಸಾರಿಕಾ ಸೇರಿದಂತೆ ಹಲವರು ಇದ್ದರು.

## ಮಳೆಗೆ 2 ಮನೆ ಕುಸಿತ

**ಮೈಸೂರು:** ಬುಧವಾರ ಸುರಿದ ಧಾರಕಾರ ಒಂದೇ ಗ್ರಾಮದ ಎರಡು ಮನೆಗಳು ಕುಸಿತಗೊಂಡಿದ್ದು, ಅದೃಷ್ಟಾವಶಾತ್ ಮನೆಯ ವೃದ್ಧರೊಬ್ಬರು ಪ್ರಾಣಾಪಾಯದಿಂದ ಪಾರಾಗಿರುವ ಘಟನೆ ನಡೆದಿದೆ. ಜಯಪುರ ಹೋಬಳಿಯ ಗೋಪಾಲಪುರ ಗ್ರಾಮದ ದೇವಮ್ಮ ಮತ್ತು ಸಣ್ಣ ತಾಯಮ್ಮ ಎಂಬುವವರಿಗೆ ಸೇರಿದ ಮನೆಗಳು ಕುಸಿತಗೊಂಡಿವೆ. ಒಂದು ಮನೆಯಲ್ಲಿ ಗೋಡೆಯೊಂದು ಕುಸಿದು ಮನೆಯಲ್ಲಿ ಇದ್ದ ವಸ್ತುಗಳು ಹಾನಿಯಾದರೆ ಮತ್ತೊಂದು ಮನೆಯೂ ಸಂಪೂರ್ಣ ಕುಸಿತಗೊಂಡ ಪರಿಣಾಮ ಮನೆಯ ಒಳಗಡೆ ಇದ್ದ ವೃದ್ಧ ರಾಜೇಗೌಡ ಎಂಬುವರು ಚಾವಣಿಗಳ ಅಡಿ ಸಿಲುಕಿಕೊಂಡು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಮಳೆಯ ಅವಘಡದಿಂದ ಮನೆ ಕಳೆದುಕೊಂಡ ಕುಟುಂಬ ಬೀದಿಗೆ ಬಂದಂತಾಗಿದೆ. ಸ್ಥಳಕ್ಕೆ ತಹಸೀಲ್ದಾರ್ ಹಾಗೂ ಗ್ರಾಮ ಲೆಕ್ಕಾಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ತಂಬಾಕು ಜಾಗೃತಿ ಸೈಕ್ಲೋಥಾನ್

**ಮೈಸೂರು:** ಜೂ.29ರಂದು ಭಾರತ್ ಕ್ಯಾನ್ಸರ್ ಆಸ್ಪತ್ರೆ ವತಿಯಿಂದ ಮುಖ್ಯವಾಗಿ ಮಕ್ಕಳು, ಹದಿಹರೆಯದವರು ಸೇರಿದಂತೆ ಸಾರ್ವಜನಿಕರು ತಂಬಾಕು ಬಳಕೆಯಿಂದ ದೂರ ಇರುವಂತೆ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಸೈಕ್ಲೋಥಾನ್ ಆಯೋಜಿಸಲಾಗಿದೆ ಎಂದು ಆಸ್ಪತ್ರೆಯ ಹಿರಿಯ ಸಲಹೆಗಾರ ಡಾ.ಕೆ.ಜಿ. ಶ್ರೀನಿವಾಸ್ ತಿಳಿಸಿದರು.ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಬೆಳಗ್ಗೆ 7 ಗಂಟೆಗೆ ನಗರದ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ಉಪ ಪೊಲೀಸ್ ಆಯುಕ್ತ ಎಂ.ಮುತ್ತುರಾಜ್ ಮತ್ತು ಶಿಲ್ಪಿ ಅರುಣ್ ಯೋಗಿರಾಜ್ ಚಾಲನೆ ನೀಡಲಿದ್ದಾರೆ.ಯಾವುದೇ ರೀತಿಯ ತಂಬಾಕು ಉತ್ಪನ್ನ ಸೇವನೆಯಿಂದ ಕ್ಯಾನ್ಸರ್ ತಗಲುವ ಸಾಧ್ಯತೆ ಇದೆ. ಇನ್ನು, ಸಿಗರೇಟ್ ಸೇವನೆಯಿಂದ ಶೇ.90ರಷ್ಟು ಶ್ವಾಸಕೋಶದ ಕ್ಯಾನ್ಸರ್ ಬರುವ ಅಪಾಯವಿದೆ. ಅಲ್ಲದೆ, ಬಾಯಿ, ಮೂಗು, ಗಂಟಲು, ಧ್ವನಿಪೆಟ್ಟಿಗೆ ಕ್ಯಾನ್ಸರ್‌ಗಳಿಗೂ ಇದು ದಾರಿ ಮಾಡಿಕೊಡಬಹುದಾಗಿದೆ. ಇದಲ್ಲದೆ, ಅನ್ನನಾಳ, ಯಕೃತ್, ಮೂತ್ರಕೋಶ, ಮೂತ್ರಪಿಂಡ, ಮೇದೋಜೀರಕ ಗ್ರಂಥಿ ಮೊದಲಾದ ಅನೇಕ ರೀತಿಯ ಕ್ಯಾನ್ಸರ್ ಬರಲಿವೆ. ಹೀಗಾಗಿ ಮಕ್ಕಳು, ಹದಿಹರೆಯದವರು ಶೋಕಿಗಾಗಿ ಧೂಮಪಾನದಂತಹ ಕೆಟ್ಟ ಅಭ್ಯಾಸಕ್ಕೆ ಬಲಿಯಾಗುವುದನ್ನು ಬಿಡಬೇಕೆಂದು ಈ ವೇಳೆ ಜಾಗೃತಿ ಮೂಡಿಸಲಾಗುವುದೆಂದರು. ಗೋಷ್ಠಿಯಲ್ಲಿ ಕ್ಯಾನ್ಸರ್ ತಜ್ಞರಾದ ಡಾ.ಜೆ.ಸೌಮ್ಯ, ಡಾ.ಅಭಿಷೇಕ್ ಹಾಜರಿದ್ದರು.

## ಸಂವಾದ, ಚರ್ಚಾ ಕಾರ್ಯಕ್ರಮ

**ಮೈಸೂರು:** ಎನ್‌ಐಇ ಕಾಲೇಜು ವತಿಯಿಂದ ಕೋರ್ ಎಂಜಿನಿಯರಿಂಗ್ ಶಾಖೆಗಳತ್ತ ವಿದ್ಯಾರ್ಥಿಗಳ ಆಸಕ್ತಿ ಸೆಳೆಯುವ ನಿಟ್ಟಿನಲ್ಲಿ ಜೂ.29ರಂದು ಬೆಳಗ್ಗೆ 10ರಿಂದ ಮಧ್ಯಾಹ್ನ 1ರವರೆಗೆ ಈ ಕ್ಷೇತ್ರದಲ್ಲಿನ ಇತ್ತೀಚಿನ ಬೆಳವಣಿಗೆ ಮತ್ತು ಅಧ್ಯಯನ ಶಾಖೆ ವಿಷಯ ಕುರಿತ ಚರ್ಚಾ ಕಾರ್ಯಕ್ರಮ ಆಯೋಜಿಸಿದ್ದು, ಈ ಕ್ಷೇತ್ರದ ದಿಗ್ಗಜರೊಡನೆ ಸಂವಾದ ನಡೆಸುವ ಅವಕಾಶ ವಿದ್ಯಾರ್ಥಿಗಳಿಗೆ ಸಿಗಲಿದೆ ಎಂದು ಕಾಲೇಜಿನ ಪ್ಲೇಸ್ಮೆಂಟ್ ವಿಭಾಗದ ಮುಖ್ಯಸ್ಥರಾದ ಹರ್ಷಿತ್ ದಿವಾಕರ್ ತಿಳಿಸಿದರು. ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭಾರತೀಯ ಕೈಗಾರಿಕೆಗಳ ಒಕ್ಕೂಟದ ಸಹಯೋಗದಲ್ಲಿ ತಮ್ಮ ಕಾಲೇಜು ಈ ಕಾರ್ಯಕ್ರಮ ಆಯೋಜಿಸಿದೆ. ಇದರಲ್ಲಿ ಕೋರ್ ಎಂಜಿನಿಯರಿಂಗ್ ಕ್ಷೇತ್ರದಲ್ಲಿನ ವಿಪುಲ ಉದ್ಯೋಗಾವಕಾಶ ಕುರಿತಂತೆ ಉದ್ಯಮ ಕ್ಷೇತ್ರದ ದಿಗ್ಗಜರಾದ ನಾಗಾರ್ ಗರ್ಗೇಶ್ವರಿ, ಹರ್ಷ ಬಸವರಾಜು, ಎಂ.ವಿ.ಕಾರ್ತಿಕ್, ಸಂತೋಷ್ ಗುಂಡಾಪಿ ಮೊದಲಾದವರು ಪಾಲ್ಗೊಂಡು ವಿದ್ಯಾರ್ಥಿಗಳೊಡನೆ ಸಂವಾದ ನಡೆಸಿ, ಅವರ ಅನುಮಾನಗಳನ್ನು ಬಗೆಹರಿಸಲಿದ್ದಾರೆ. ಈಚೆಗೆ ಎಲ್ಲರೂ ಸಾಫ್ಟ್‌ವೇರ್ ತಂತ್ರಜ್ಞರಾಗುವತ್ತ ಒಲವು ತೋರುತ್ತಿದ್ದಾರೆ. ಆದರೆ, ಈ ಕ್ಷೇತ್ರದಲ್ಲಿ ಪರಿಮಿತ ಸಾಧ್ಯತೆ ಇದೆ. ಇದೇ ವೇಳೆ ಕೋರ್ ಎಂಜಿನಿಯರಿಂಗ್ ಕ್ಷೇತ್ರದಲ್ಲಿ ವಿದ್ಯಾಭ್ಯಾಸ ಮಾಡಿದವರಿಗೆ ಉದ್ಯೋಗ ಭದ್ರತೆ ಹೆಚ್ಚು. ಆದ್ದರಿಂದ ಇತ್ತ ವಿದ್ಯಾರ್ಥಿಗಳನ್ನು ಆಕರ್ಷಿಸಲು ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಮಾಹಿತಿ ನೀಡಿದರು. ಗೋಷ್ಠಿಯಲ್ಲಿ ವಿವೇಕ್ ಭಾರದ್ವಾಜ್, ಪ್ರೊ.ಹೇಮಂತ್ ಹಾಜರಿದ್ದರು.

## ಗಾಂಜಾ ಸಾಗಾಣಿಕೆ: ನಾಲ್ವರ ಸೆರೆ

**ಚಾಮರಾಜನಗರ:** ಮಾರಾಟ ಮಾಡುವ ಉದ್ದೇಶದಿಂದ ಗಾಂಜಾ ಸಾಗಾಣಿಕೆ ಮಾಡುತ್ತಿದ್ದಂತಹ ನಾಲ್ಕು ಮಂದಿಯನ್ನು ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಮಹದೇಶ್ವರ ಬೆಟ್ಟ ಪೊಲೀಸರು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ. ಮೈಸೂರು ಮೂಲದ ಪ್ರದೀಪ್ ( 23)ಪ್ರೀತಮ್ (26) ಶ್ರೇಯಸ್(24) ಅಭಿಷೇಕ್( 25 )ಎಂಬಾತರೆ ಬಂಧಿತ ಆರೋಪಿಗಳಾಗಿದ್ದಾರೆ. ಬಂಧಿತರು ಬೈಕ್ ನಲ್ಲಿ ಮಹದೇಶ್ವರ ಬೆಟ್ಟಕ್ಕೆ ಆಗಮಿಸಿ ಬೆಟ್ಟದ ಪಾಲಾರ್ ರಸ್ತೆಯಲ್ಲಿ ಅನುಮಾನಸ್ಪಾದವಾಗಿ ಓಡಾಡುತ್ತಿದ್ದರು ಈ ಬಗ್ಗೆ ಅರಿತ ಮಹದೇಶ್ವರಬೆಟ್ಟ ಪೊಲೀಸ್ ಠಾಣೆಯ ಇನ್ಸ್ಪೆಕ್ಟರ್ ಜಗದೀಶ್ ನೇತೃತ್ವದ ಪೊಲೀಸರ ತಂಡ ಸ್ಥಳಕ್ಕೆ ಆಗಮಿಸಿ ಪರೀಶೀಲಿಸಿದಾಗ ಗಾಂಜಾ ಇರುವುದು ಪತ್ತೆಯಾಗಿದೆ. ಕೂಡಲೇ ನಾಲ್ವರನ್ನು ಬಂಧಿಸಿ ಸುಮಾರು 190 ಗ್ರಾಂ ಒಣ ಗಾಂಜಾವನ್ನು ವಶಕ್ಕೆ ಪಡೆದು ಮುಂದಿನ ಕ್ರಮ ಕೈಗೊಂಡಿದ್ದಾರೆ . ಈ ಸಂಬಂಧ ಮಹದೇಶ್ವರಬೆಟ್ಟ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಈ ಕಾರ್ಯಚರಣೆಯಲ್ಲಿ ಪೊಲೀಸ್ ಠಾಣೆಯ ಸಭ್ ಇನ್ಸಪೇಕ್ಟರ್ ಬಸವರಾಜು ಪೇದೆಗಳಾದ ಆಸ್ಲಾಂಪಾಷಾ ಅಣ್ಣಾದೊರೆ, ವಿನೋದ್ ಮೆಹಬೂಬ್ ಗೋಗಿ, ಮಲ್ಲು,ಚಂದ್ರಶೇಖರ್ ನಾಗೇಂದ್ರ ಭಾಗವಹಿಸಿದ್ದರು.



# ಸಂಘಟನೆಗಳು ಸಮಾಜಮುಖಿ ಕೆಲಸ ಮಾಡಲಿ:ಕೆ.ಮಹದೇವ್

**ಪಿರಿಯಾಪಟ್ಟಣ:** ಸಮಾಜದ ಹೆಸರಿನಲ್ಲಿ ಸ್ಥಾಪಿತವಾದ ಸಂಘಟನೆಗಳು ಸಮಾಜದಲ್ಲಿ ನೋವುಂಡವರ ಪರ ಸಾಮಾಜಿಕ ಕಳಕಳಿ ಹಾಗೂ ಬದ್ಧತೆಯಿಂದ ಸಮಾಜಮುಖಿ ಕೆಲಸಗಳನ್ನು ಮಾಡಬೇಕು ಎಂದು ಮಾಜಿ ಶಾಸಕ ಕೆ. ಮಹದೇವ್ ತಿಳಿಸಿದರು.

ಪಟ್ಟಣ ತಾಲ್ಲೂಕು ಒಕ್ಕಲಿಗರ ಸಂಘದ ಕಛೇರಿ ಉದ್ಘಾಟನೆ ಹಾಗೂ ನಾಡಪ್ರಭು ಕೆಂಪೇಗೌಡ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಾಡಪ್ರಭು ಕೆಂಪೇಗೌಡರ ದೂರದೃಷ್ಟಿಯಿಂದ 500 ವರ್ಷಗಳ ಹಿಂದೆ ಕಟ್ಟಿದ ಬೆಂಗಳೂರು ಇಂದು ವಿಶ್ವದಲ್ಲಿಯೇ ಪ್ರಸಿದ್ಧಿ ಪಡೆದಿದೆ ಬೆಂಗಳೂರು ಹಾಗೂ ನಮ್ಮ ರಾಜ್ಯದ ಬೆಳವಣಿಗೆಗೆ ಕೆಂಪೇಗೌಡರವರ ಕೊಡುಗೆ ಅಪಾರವಾಗಿದೆ ಎಂದರು.

ಪಿರಿಯಾಪಟ್ಟಣದಲ್ಲಿ ಇಂದು ಒಕ್ಕಲಿಗರ ಸಂಘದ ಉದ್ಘಾಟನೆ ಯಾಗುತ್ತಿರುವುದು ಸಂತಸದ ವಿಷಯ ಒಕ್ಕಲಿಗ ಸಮುದಾಯ ಎಲ್ಲಾರಿಗೂ ನ್ಯಾಯವನ್ನು ಒದಗಿಸುವ ಸಮುದಾಯವಾಗಿದೆ ತಾಲೂಕಿನ ಒಕ್ಕಲಿಗ ಸಮುದಾಯದ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಸಮುದಾಯದ ಬೆಳವಣಿಗೆಗೆ ಶ್ರಮಿಸುವುದು ಸಂಘಟನೆಗಳ ಜವಾಬ್ದಾರಿಯಾಗಿರುತ್ತದೆ. ಆ ನಿಟ್ಟಿನಲ್ಲಿ ಸಂಘವು ಕೆಲಸ ಮಾಡಲಿ ಇಂದು ಪ್ರಾರಂಭವಾಗಿರುವ ಒಕ್ಕಲಿಗರ ಸಂಘವು ಯಶಸ್ಸನ್ನು ಗಳಿಸಲಿ ಎಂದು ಸಂಘಕ್ಕೆ ಶುಭ ಹಾರೈಸಿದರು

ಮಾಜಿ ನಗರ ಪಾಲಿಕೆ ಸದಸ್ಯ ಹಾಗೂ ಸಂಘದ ಗೌರವಾದ್ಯಕ್ಷ ಪಿ. ಪ್ರಶಾಂತ್ ಗೌಡ ಮಾತನಾಡಿ ನಾಡಪ್ರಭು ಕೆಂಪೇಗೌಡರವರ ಆದರ್ಶಗಳನ್ನು ಎಲ್ಲರೂ ಅನುಸರಿಸಬೇಕು ಅವರು ಹಾಕಿಕೊಟ್ಟ ದಾರಿಯಲ್ಲಿ ನಡೆಯಬೇಕು ಹಾಗೂ ಒಕ್ಕಲಿಗ ಸಮಾಜದ ಸರ್ವೋತೋಮುಖ ಬೆಳವಣಿಗೆಯಾಗಬೇಕು ಎನ್ನುವ ಉದ್ದೇಶದಿಂದ ಪಿರಿಯಾಪಟ್ಟಣದಲ್ಲಿ ಒಕ್ಕಲಿಗರ ಸಂಘವನ್ನು ಪ್ರಾರಂಭ ಮಾಡಲಾಗಿದೆ. ಸಮುದಾಯದ ಕಟ್ಟಕಡೆಯ ವ್ಯಕ್ತಿಯೂ ಸಮಾಜದ ಮುಖ್ಯವಾಹಿನಿಗೆ ಬರಬೇಕು ಅವರು ಸಾಮಾಜಿಕವಾಗಿ , ಶೈಕ್ಷಣಿಕವಾಗಿ, ಆರ್ಥಿಕವಾಗಿ ಸಬಲರಾಗಬೇಕು ಆ ನಿಟ್ಟಿನಲ್ಲಿ ಸಂಘ ಕೆಲಸಮಾಡುತ್ತದೆ ಎಂದರು

ನಮ್ಮ ರಾಜ್ಯ ಇಷ್ಟು ಅಭಿವೃದ್ಧಿ ಹೊಂದಲು ನಾಡಪ್ರಭು ಕೆಂಪೇಗೌಡರವರ ಆಡಳಿತ ಹಾಗೂ ಅವರ ಆರ್ಥಿಕ ನೀತಿಗಳು ಕಾರಣವಾಗಿವೆ ಎಂದರೆ ತಪ್ಪಾಗಲಾರದು ಅವರ ಯೋಜನೆಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಹೇಳಿದರು

ಮೈಮುಲ್ ಅಧ್ಯಕ್ಷ ಪಿ. ಎಂ. ಪ್ರಸನ್ನ ಮಾತನಾಡಿ ಸಂಘಟನೆಗಳು ಸಮುದಾಯದ ಅಭಿವೃದ್ಧಿಗಾಗಿ ಶ್ರಮಿಸಬೇಕು ಆಗ ಸಮುದಾಯಗಳು ಬೆಳವಣಿಗೆ ಹೊಂದುತ್ತವೆ ಕೆಂಪೇಗೌಡರವರ ಆದರ್ಶಗಳನ್ನು ಎಲ್ಲರೂ ಮೈಗೂಡಿಸಿಕೊಂಡು ಎಲ್ಲಾರೂ ಸಮುದಾಯದ ಬೆಳವಣಿಗೆಗಾಗಿ ದುಡಿಯಬೇಕು ಎಂದರು.

ಈ ಸಂದರ್ಭದಲ್ಲಿ ತಾಲ್ಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಆನಂದ್ ಬಸಲಾಪುರ, ಉಪಾಧ್ಯಕ್ಷರಾದ ಚಂದ್ರೆಗೌಡ, ಜಗದೀಶ್, ಕಾನೂನು ಸಲಹೆಗಾರ ಕೆ. ಡಿ. ಸಂದೀಪ್ ಕಾರ್ಯದರ್ಶಿ ಮೋಹನ್, ಖಜಾಂಚಿ ಮನು, ನಿರ್ದೇಶಕರಾದ ಗಣೇಶ್, ಮಧು, ರಾಜೇಶ್, ಪಿ. ಕುಮಾರ್, ಅರುಣ್, ಅನಿಲ್, ರಾಜು, ಕುಮಾರ್.ಎಂ, ರವಿ, ಪ್ರವೀಣ್, ಮಧು, ಭಾಸ್ಕರ್, ಮುಖಂಡರಾದ ಕೃಷ್ಣೆಗೌಡ, ಹನುಮಂತು,ಸೇರಿದಂತೆ ಸಂಘದ ಪದಾಧಿಕಾರಿಗಳು ಮತ್ತಿತರರು ಉಪಸ್ಥಿತರಿದ್ದರು.



# ವಿವಿ ತಾತ್ಕಾಲಿಕ ಸಿಬ್ಬಂದಿ ಮೇಲೆ ತೂಗುಗತ್ತಿ

## ಸಿಬ್ಬಂದಿ ಸಂಖ್ಯೆ ಕಡಿತಗೊಳಿಸಲು ಮುಂದಿನ ದಿನಗಳಲ್ಲಿ ತೀರ್ಮಾನ

**ಮೈಸೂರು:** ವಿಶ್ವವಿದ್ಯಾನಿಲಯದಲ್ಲಿ ತಾತ್ಕಾಲಿಕವಾಗಿ ಕಾರ್ಯನಿರ್ವಹಿಸುತ್ತಿರುವ ಬೋಧಕೇತರ ಸಿಬ್ಬಂದಿಗಳನ್ನು ಕಡಿತಗೊಳಿಸುವ ವಿಚಾರವಾಗಿ ಮುಂದಿನ ದಿನಗಳಲ್ಲಿ ತೀರ್ಮಾನ ತಗೆದುಕೊಳ್ಳಲಾಗುವುದು ಎಂದು ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ತಿಳಿಸಿದರು.



ಮೈಸೂರು ವಿವಿಯ ಆಡಳಿತ ಭವನ ಕ್ರಾಫರ್ಡ್ ಹಾಲ್‌ನಲ್ಲಿ ಶುಕ್ರವಾರ ನಡೆದ ಶಿಕ್ಷಣ ಮಂಡಳಿಯ ಮೊದಲ ಸಾಮಾನ್ಯ ಸಭೆಯಲ್ಲಿ ಮಾತನಾಡಿದ ಅವರು, ಸಿಬ್ಬಂದಿ ಕಡಿತವನ್ನು ದಿಢೀರ್ ಎಂದು ಮಾಡುವುದುಕ್ಕೆ ಆಗುವುದಿಲ್ಲ. ಅದಕ್ಕೆ ಅದರದೇ ಆದ ಕೆಲವು ನೀತಿ-ನಿಯಮಗಳು ಇವೆ. ಅವುಗಳನ್ನು ಪಾಲನೆ ಮಾಡಬೇಕಾಗುತ್ತದೆ. ಸಮಿತಿಯನ್ನು ನೇಮಕ ಮಾಡಿ, ಅವರಿಂದ ವರದಿ ಪಡೆದುಕೊಂಡು, ಸಂಬಂಧಿಸಿದ ಸಮಿತಿ ಮುಂದೆ ಅದನ್ನು ಮಂಡಿಸಿ, ಅಲ್ಲಿ ತೀರ್ಮಾನ ತೆಗೆದುಕೊಳ್ಳಬೇಕು ಎಂದು ಹೇಳಿದರು.

ಈ ಸಮಯದಲ್ಲಿ ಮಾತನಾಡಿದ ಕುಲಸಚಿವೆ ವಿ.ಆರ್.ಶೈಲಜಾ, ಸರ್ಕಾರದ ಉನ್ನತ ಶಿಕ್ಷಣ ಇಲಾಖೆಯ ಆದೇಶದ ಅನ್ವಯ ತಾತ್ಕಾಲಿಕ ಬೋಧಕೇತರ ಸಿಬ್ಬಂದಿಯನ್ನು ಸೇವೆಯಲ್ಲಿ ಮುಂದುವರೆಸುವ ಅಥವಾ ತರ್ಕಬದ್ಧಗೊಳಿಸುವ ವಿಚಾರವಾಗಿ ಆರು ತಿಂಗಳ ಹಿಂದೆ ನಾಲ್ಕು ಜನರನ್ನು ಒಳಗೊಂಡ ಸಮಿತಿ ರಚನೆ ಮಾಡಲಾಗಿತ್ತು. ಆ ಸಮಿತಿ ವರದಿ ನೀಡಿದೆ. ಕುಲಪತಿಗಳು ವರದಿಯ ಆಧಾರದಲ್ಲಿ ಮುಂದಿನ ತೀರ್ಮಾನ ತಗೆದುಕೊಳ್ಳಲಿದ್ದಾರೆ ಎಂದರು. ಸಮಿತಿಯ ಅಧ್ಯಕ್ಷರಾಗಿ ವಿಶ್ರಾಂತ ಕುಲಪತಿ ಪ್ರೊ. ಅಂಬಳಿಕೆ ಹಿರಿಯಣ್ಣ, ಸದಸ್ಯರಾಗಿ ನಿವೃತ್ತ ಐಎಎಸ್ ಅಧಿಕಾರಿ ಬಿ.ರಾಮು, ಕರ್ನಾಟಕ ರಾಜ್ಯ ಲೆಕ್ಕ ಪತ್ರ ಇಲಾಖೆಯ ನಿವೃತ್ತ ಜಂಟಿ ನಿಬಂಧಕ ರಾಮಚಂದ್ರಸ್ವಾಮಿ, ಸಂಚಾಲಕರಾಗಿ ಮೈವಿವಿಯ ಆಡಳಿತ ಶಾಖೆಯ ಉಪಕುಲಸಚಿವ ಕೆ.ನರೇಂದ್ರ ಇದ್ದರು ಎಂದು ಅವರು ಇದೇ ಸಂದರ್ಭದಲ್ಲಿ ತಿಳಿಸಿದರು.

ಇದಕ್ಕೂ ಮೊದಲು ಸಿಬ್ಬಂದಿ ವಿಚಾರವಾಗಿ ವಿಧಾನ ಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ ಸಭೆಯಲ್ಲಿ ಗಮನ ಸೆಳೆದರು. ವಿಶ್ವವಿದ್ಯಾನಿಲಯದ ಕ್ಯಾಂಪಸ್‌ನಲ್ಲಿ ಇರುವ ಹಲವಾರು ವಿಭಾಗಗಳಲ್ಲಿ ವಿದ್ಯಾರ್ಥಿಗಳಿಂತ ಸಿಬ್ಬಂದಿಗಳೆ ಹೆಚ್ಚಾಗಿರುವುದು ಕಂಡು ಬರುತ್ತಿದೆ. ಇದು ವಿಶ್ವವಿದ್ಯಾನಿಲಯಕ್ಕೆ ಒಂದು ರೀತಿ ಹೊರೆಯಾಗಿದೆ. ಈಗಾಗಲೇ ಈ ಶೈಕ್ಷಣಿಕ ಸಾಲಿಗೆ ಕೊರತೆ ಬಜೆಟ್ ಮಂಡಿಸಲಾಗಿದೆ. ಈ ಸಿಬ್ಬಂದಿಗಳನ್ನು ಕಡಿತ ಮಾಡಿದರೇ ಕೊರತೆಯ ಗಾತ್ರ ಕಾಲು ಭಾಗವಾದರೂ ತಗ್ಗುತ್ತದೆ ಎಂದರು. ಇದಕ್ಕೆ ಉತ್ತರವಾಗಿ ಮಾತನಾಡಿದ ಕುಲಸಚಿವೆ ವಿ.ಆರ್.ಶೈಲಜಾ, ಮೈವಿವಿಯಲ್ಲಿ 1340 ಬೋಧಕೇತರ ಸಿಬ್ಬಂದಿ ಕೆಲಸ ಮಾಡುತ್ತಿದ್ದಾರೆ. ಚಾಮರಾಜ ನಗರ, ಮಂಡ್ಯ, ಹಾಸನದಲ್ಲಿ ವಿಶ್ವವಿದ್ಯಾನಿಲಯಗಳು ಸ್ಥಾಪನೆಯಾದ ಮೇಲೆ ಅಲ್ಲಿಗೆ ಕೆಲವರನ್ನು ಕಳುಹಿಸಲಾಗಿದೆ. ಪ್ರಸ್ತುತ 1036 ಮಂದಿ ಇದ್ದಾರೆ. ಇವರ ಸಂಬಳಕ್ಕೆ ವರ್ಷಕ್ಕೆ ಸರಿ ಸುಮಾರು 25 ಕೋಟಿ ರೂಪಾಯಿ ಬೇಕು. 2020ರಿಂದ ಈಚೆಗೆ ಯಾವುದೇ ಸಿಬ್ಬಂದಿಯನ್ನು ನೇಮಕ ಮಾಡಿಕೊಂಡಿಲ್ಲ. 2010ರಿಂದ 2016ರ ಅವಧಿಯಲ್ಲಿ ಜಾಸ್ತಿಯಾಗಿ ತಾತ್ಕಾಲಿಕ ಸಿಬ್ಬಂದಿ ನೇಮಕ ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದರು. ವಿವಿಧ ನಿಕಾಯದ ಡೀನ್‌ಗಳಾದ ಪ್ರೊ.ಸಿ.ವೆಂಕಟೇಶ್, ಪ್ರೊ.ಬಿ.ಮಹದೇವಪ್ಪ, ಪ್ರೊ.ಎಂ. ಜಿ.ಮಂಜುನಾಥ್ ಪ್ರೊ.ಡಿ.ಸೋನರ್ ನಂದಪ್ಪ, ಪ್ರೊ. ಎಂ.ಸುರೇಶ್ ಬೆಂಜಮಿನ್ ಮತ್ತಿತರರು ಸಭೆಯಲ್ಲಿ ಹಾಜರಿದ್ದರು.

**ಕ್ಯಾಂಪಸ್ ಸ್ವಚ್ಛವಾಗಿರಿಸಿ:** ಮೈಸೂರು ವಿಶ್ವವಿದ್ಯಾನಿಲಯದ ಮಾನಸಗಂಗೋತ್ರಿ ಕ್ಯಾಂಪಸ್ಸಿಗೆ ಅದರದೆ ಆದ ಘನತೆ-ಗೌರವವಿದೆ. ಕುವೆಂಪು ಅಂತಹವರು ಓಡಾಡಿದ ಜಾಗ. ಇಲ್ಲಿ ಈಗ ಮದ್ಯದ ಬಾಟಲಿಗಳು, ತಂಬಾಕು ಸಂಬಂಧಿಸಿದ ವಸ್ತುಗಳ ತ್ಯಾಜ್ಯ ಎಲ್ಲೆಂದರಲ್ಲಿ ಕಣ್ಣಿಗೆ ಕಾಣುತ್ತಿವೆ. ಕ್ಯಾಂಪಸ್ ನಿರ್ವಹಣೆಗೆ ಎಂದು ಕೋಟ್ಯಂತರ ರೂಪಾಯಿ ಖರ್ಚು ಮಾಡಲಾಗುತ್ತಿದೆ. ಆದರೆ ಇಂತಹ ತ್ಯಾಜ್ಯಗಳನ್ನು ಸ್ವಚ್ಛ ಮಾಡಲು ಕ್ರಮಕೈಗೊಳ್ಳುವುದಿಲ್ಲ ಎಂದು ಎಂಎಲ್‌ಸಿ ಮಂಜೇಗೌಡ ಅಸಹನೆ ವ್ಯಕ್ತಪಡಿಸಿದರು.

ಇದಕ್ಕೆ ಉತ್ತರಿಸಿದ ಕುಲಪತಿ ಪ್ರೊ. ಎನ್.ಕೆ.ಲೋಕನಾಥ್, ಕ್ಯಾಂಪಸ್ ಬಹಳ ದೊಡ್ಡದಿದೆ. ನಮ್ಮ ಎನ್‌ಎಸ್‌ಎಸ್ ಘಟಕದ ವಿದ್ಯಾರ್ಥಿಗಳು ಹಾಗೂ ಸ್ವಚ್ಛತಾ ಸಿಬ್ಬಂದಿ ವಾರಕ್ಕೊಮ್ಮೆ ಆವರಣ ತುಂಬಾ ಓಡಾಡಿ ತ್ಯಾಜ್ಯವನ್ನು ಸಂಗ್ರಹಿಸುವ ಕೆಲಸ ಮಾಡುತ್ತಿದ್ದಾರೆ. ಅಲ್ಲದೇ ಪ್ರತಿನಿತ್ಯ ವಿಭಾಗಗಳ ಬಳಿ ಬಿದ್ದಿರುವ ಕಸ-ತ್ಯಾಜ್ಯವನ್ನು ನಿಗಧಿತ ಸ್ಥಳದಲ್ಲಿ ರಾಶಿ ಮಾಡಲಾಗುತ್ತದೆ ಎಂದು ಸಮಜಾಯಿಷಿ ನೀಡಿದರು. ಕ್ಯಾಂಪಸ್ ನಲ್ಲಿ ಅರ್ಧಂಬರ್ಧ ಕಾಮಗಾರಿಯಾಗಿರುವ ಕಟ್ಟಡಗಳು ಬೇಕಾದಷ್ಟು ಇವೆ. ಇವುಗಳನ್ನು ಬೇಗನೆ ಪೂರ್ಣಗೊಳಿಸಬಾರದೇ ಎಂದು ಪ್ರಶ್ನೆ ಮಾಡಿದರು. 2018ರಿಂದ ಈಚೆಗೆ ಸರ್ಕಾರ ರಾಜ್ಯದ ಎಲ್ಲ ವಿವಿಗಳಿಗೂ ಅಭಿವೃದ್ಧಿ ಯೋಜನೆಗಳಿಗೆ ಅನುದಾನ ನೀಡವುದನ್ನು ನಿಲ್ಲಿಸಿಬಿಟ್ಟಿದೆ ಎಂದು ಕುಲಪತಿಗಳು ಉತ್ತರ ನೀಡಿದರು.

# ಸೊಳ್ಳೆಗಳ ಸಂತಾನೋತ್ಪತ್ತಿ ತಡೆಯಿರಿ

**ಮಂಡ್ಯ:** ನಗರದ ಪೌರಕಾರ್ಮಿಕ ಕಾಲೋನಿಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಚೇರಿ ವತಿಯಿಂದ ರಾಷ್ಟ್ರೀಯ ಡೆಂಗ್ಯೂ ದಿನ ಆಚರಿಸಲಾಯಿತು.

ಜಿಲ್ಲಾ ಮಲೇರಿಯಾ ನಿಂತ್ರಣಾಧಿಕಾರಿ ಡಾ.ಕಾಂತರಾಜು ಮಾತನಾಡಿ, ಸೊಳ್ಳೆಗಳ ಸಂತಾನೋತ್ಪತ್ತಿ ಹೆಚ್ಚಾಗಿದೆ, ಇದರ ನಿಯಂತ್ರಣದ ಮೂಲಕ ರಾಜ್ಯಾದ್ಯಂತ ಜಾಗೃತಿ ಮೂಡಿಸುವ ಕಾರ್ಯಕ್ರಮಕ್ಕೆ ಆರೋಗ್ಯ ಇಲಾಖೆಯಿಂದ ಚಾಲನೆ ನೀಡಲಾಗಿದೆ ಎಂದರು.

ಸೊಳ್ಳೆಗಳ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಮನೆಯ ಸುತ್ತಮುತ್ತಲ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಕಡೆ ಪ್ರತಿಯೊಬ್ಬರೂ ಗಮನ ಹರಿಸಬೇಕು. ಗ್ರಾಮೀಣ ಭಾಗದಲ್ಲಿ ಸ್ವಚ್ಛತೆಗೆ ಹೆಚ್ಚು ಒತ್ತು ಕೊಡುವ ನಿಟ್ಟಿನಲ್ಲಿ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ, ಪ್ರತಿಯೊಬ್ಬರೂ ತಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸುವ ಮೂಲಕ ಆರೋಗ್ಯ ಇಲಾಖೆಯ ಜೊತೆ ಸಹಕರಿಸಬೇಕು ಎಂದು ಮನವಿ ಮಾಡಿದರು.



ನಗರದ ಪ್ರಮುಖ ಬೀದಿಗಳಲ್ಲಿ ಡೆಂಗ್ಯೂ ಮತ್ತು ಚಿಕೂನ್ ಗುನ್ಯ ತಡೆಗೆ ಅಗತ್ಯ ಕ್ರಮಗಳ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಹಾಗೂ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಡಾ.ಆಶಾಲತಾ, ಡಾ.ಜವರೇಗೌಡ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸೋಮಶೇಖರ್, ಡಾ.ಶಶಿಕಲಾ, ಮುಖಂಡರಾದ ವಸಂತ್‌ಕುಮಾರ್ ಸೇರಿದಂತೆ ಅಂಗನವಾಡಿ ಕಾರ್ಯಕರ್ತರು ಭಾಗವಹಿಸಿದ್ದರು.

# ಬಾಳೆ ಬೆಳೆ ನಾಶಪಡಿಸಿದ ಕಿಡಿಗೇಡಿಗಳು: ಅಪಾರ ನಷ್ಟ

**ಸಂತೇಮರಹಳ್ಳಿ:** ಸಮೀಪದ ಬಾಗಳಿ ಗ್ರಾಮದ ಸಿದ್ದಲಿಂಗಸ್ವಾಮಿ (ಲೋಕೇಶ್ ) ಎಂಬುವರ ಎರಡು ಎಕರೆಯಲ್ಲಿ ಬೆಳೆದಿರುವ ಬಾಳೆಯನ್ನು ಯಾರೋ ಕಿಡಿಗೇಡಿಗಳು ರಾತ್ರೋ ರಾತ್ರಿ ಸಂಪೂರ್ಣವಾಗಿ ನಾಶ ಮಾಡಿರುವ ಘಟನೆ ನಡೆದಿದೆ.



ತಡ ರಾತ್ರಿ ಯಾರೋ ಕಿಡಿಗೇಡಿಗಳು ಬಂದು 8 ತಿಂಗಳಿಂದ ಕಷ್ಟ ಪಟ್ಟು ಲಕ್ಷಾಂತರ ರೂ ಖರ್ಚು ಮಾಡಿ ಬೆಳೆದ ಬಾಳೆಯನ್ನು ಅರ್ಧಕ್ಕೆ ಮಚ್ಚಿನಿಂದ ಕೊಚ್ಚಿ ಕೆಡವಿ ಪರಾರಿಯಾಗಿದ್ದಾರೆ. ರೈತ ಲೋಕೇಶ್ ಬೆಳಗ್ಗೆ ಎದ್ದು ತನ್ನ ಜಮೀನಿನಲ್ಲಿ ಬೆಳೆದ ಬಾಳೆಯನ್ನು ನೋಡಿ ಸುಸ್ತಾಗಿ ಮೂರ್ಛೆ ಬಿದ್ದಿದ್ದಾರೆ. ಕೂಡಲೇ ಗ್ರಾಮದ ಜನರು ಜಮೀನಿನ ಹತ್ತಿರ ನೋಡಿದಾಗ ಎಲ್ಲರೂ ಗಾಬರಿಗೊಂಡರು. ಸುಮಾರು ಹತ್ತು ಲಕ್ಷಕ್ಕೂ ಅಧಿಕ ನಷ್ಟವಾಗಿದ್ದು ಕೃಷಿಯನ್ನೇ ನಂಬಿ ಜೀವನ ಮಾಡುತ್ತಿದ್ದ ಲೋಕೇಶ್ ಎಂಬ ರೈತನ ಕುಟುಂಬ ಬೀದಿಗೆ ಬರುವಂತಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಪರಿಹಾರ ನೀಡಬೇಕು ಎಂದು ಇಲ್ಲಿನ ಗ್ರಾಮಸ್ಥರು ಆಗ್ರಹ ಮಾಡಿದ್ದಾರೆ.

ಈ ಪ್ರಕರಣ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದು ಕೃತ್ಯ ಎಸೆದಿರುವ ಕಿಡಿಗೇಡಿಗಳನ್ನು ಪತ್ತೆ ಹಚ್ಚುವುದಾಗಿ ಪೊಲೀಸರು ತಿಳಿಸಿದ್ದಾರೆ.

# ಬಿದಿರು ಮಾರುಕಟ್ಟೆ ಪ್ರೋತ್ಸಾಹಕ್ಕೆ ಬದ್ಧ

**ಬೆಂಗಳೂರು:** ಬಿದಿರು ಕೃಷಿ, ಸಂಸ್ಕರಣೆ, ಮೌಲ್ಯವರ್ಧನೆ, ಮಾರುಕಟ್ಟೆಗೆ ಪ್ರೋತ್ಸಾಹ ಮತ್ತು ಬೆಂಬಲ ನೀಡಲು ಸರ್ಕಾರ ಬದ್ದವಿದೆ ಎಂದು ಕೃಷಿ ಸಚಿವ ಎನ್. ಚೆಲುವರಾಯಸ್ವಾಮಿ ತಿಳಿಸಿದರು.



ಶುಕ್ರವಾರ ಕೃಷಿ ಇಲಾಖೆ ಆವರಣದ ಸಂಗಮ ಸಭಾಂಗಣದಲ್ಲಿ ಕೃಷಿ, ಜಲಾನಯನ ಅಭಿವೃದ್ಧಿ ಹಾಗೂ ಅರಣ್ಯ ಇಲಾಖೆಗಳು, ಕೃಷಿ ಅರಣ್ಯ ರೈತರ ಮತ್ತು ತಂತ್ರಜ್ಞರ ಸಂಸ್ಥೆ, ಬಿದಿರು ಸೊಸೈಟಿ ಆಫ್ ಇಂಡಿಯಾ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಒಂದು ದಿನದ ರಾಜ್ಯಮಟ್ಟದ ಕಾರ್ಯಗಾರ ಹಾಗೂ ಬಿದಿರು ಕೃಷಿ, ಸಂಸ್ಕರಣೆ, ಮೌಲ್ಯವರ್ಧನೆ, ಮಾರುಕಟ್ಟೆ ಮತ್ತು ಬಿದಿರು ಮೌಲ್ಯವರ್ಧಿತ ವಸ್ತುಗಳ ಪ್ರದರ್ಶನವನ್ನು ಉದ್ಘಾಟಿಸಿ ಮಾತನಾಡಿದರು.

ಬಿದಿರು ಕೃಷಿ, ಸಂಸ್ಕರಣೆ, ಮೌಲ್ಯವರ್ಧನೆ, ಮಾರುಕಟ್ಟೆ ಮತ್ತು ಬಿದಿರು ಮೌಲ್ಯವರ್ಧಿತ ವಸ್ತುಗಳ ಪ್ರದರ್ಶನವು ಉತ್ತಮವಾಗಿದೆ. ಇದು ರಾಜ್ಯ ಮಟ್ಟದಲ್ಲಿ ಬೆಳಕು ಚೆಲ್ಲುವ ಕಾರ್ಯಕ್ರಮವಾಗಿದೆ. ಬಿದಿರಿನ ಉಪಯೋಗಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ನಿಟ್ಟಿನಲ್ಲಿ ಗ್ರಾಮ, ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಇಂತಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಬೇಕು ಎಂದು ತಿಳಿಸಿದರು.

ಬಿದಿರನ್ನು ಸಂಸ್ಕರಣೆ ಮಾಡಿ ಉಪಯೋಗಿಸಬಹುದು. ಕಡಿಮೆ ನೀರು, ಕಡಿಮೆ ವೆಚ್ಚದಲ್ಲಿ ಬಿದಿರನ್ನು ಬೆಳೆಯಬಹುದು. ಆಡು ಮುಟ್ಟದ ಸೊಪ್ಪಿಲ್ಲ ಎಂಬ ಗಾದೆಯಂತೆ ದಿನ ನಿತ್ಯವು ಬಿದಿರಿನಿಂದ ತಯಾರಿಸಿದ ವಸ್ತುಗಳ ಪ್ರಯೋಜನ ಪಡೆಯುತ್ತೇವೆ. ಬಿದಿರಿನಿಂದ ಮಾಡಿದ ಪೀಠೋಪಕರಣಗಳು ಗಟ್ಟಿ ಇರುವುದರಿಂದ ದೀರ್ಘಕಾಲ ನಾವು ಬಳಸಬಹುದು. ಬಿದಿರು ಕೇವಲ ಸಣ್ಣ ಪುಟ್ಟ ಪೀಠೋಪಕರಣ, ಆಟಿಕೆ ತಯಾರಿಸಲು ಸೀಮಿತವಾಗಿಲ್ಲ. ಬದಲಿಗೆ ದೊಡ್ಡ ಪಿಠೋಪಕರಣ, ನಿರ್ಮಾಣ ಕ್ಷೇತ್ರದಲ್ಲೂ ವ್ಯಾಪಕವಾಗಿ ಬಳಕೆಯಲ್ಲಿದೆ ಎಂದರು. ಕೆಂಪೇಗೌಡ ಬೆಂಗಳೂರು ಇಂಟರ್ ನ್ಯಾಷನಲ್ ಏರ್ ಪೋರ್ಟ್ ಟರ್ಮಿನಲ್ 2 ನಲ್ಲಿ ಒಳಾಂಗಣ ಮತ್ತು ಹೊರಾಂಗಣದಲ್ಲಿ ಬಿದಿರನ್ನು ಉಪಯೋಗಿಸಲಾಗಿದೆ ಎಂದರು. ಇದೇ ಸಂದರ್ಭದಲ್ಲಿ ಸಚಿವರು ಕೃಷಿ ಅರಣ್ಯ-ರೈತರಿಗೊಂದು ಆಶಾಕಿರಣ ವಿಶೇಷ ಸಂಚಿಕೆ ಬಿಡುಗಡೆ ಮಾಡಿದರು. ಕಾರ್ಯಕ್ರಮದಲ್ಲಿ ಕೃಷಿ ತಂತ್ರಜ್ಞರ ಸಂಸ್ಥೆಯ ಅಧ್ಯಕ್ಷರಾದ ಸಿ.ಎನ್. ನಂದಿನಿಕುಮಾರಿ, ಕೃಷಿ ಇಲಾಖೆಯ ಆಯುಕ್ತರಾದ ವೈ. ಎಸ್.ಪಾಟೀಲ್, ಕೃಷಿಅರಣ್ಯ ರೈತರ ಮತ್ತು ತಂತ್ರಜ್ಞರ ಸಂಸ್ಥೆಯ ಅಧ್ಯಕ್ಷರಾದ ಅಜಯ್ ಮಿಶ್ರಾ, ಕೃಷಿ ತಂತ್ರಜ್ಞರ ಸಂಸ್ಥೆಯ ಕಾರ್ಯದರ್ಶಿ ವಿ.ಕೆ.ಕಾಮತರ, ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಯುವನಿಧಿಗೆ ಸ್ವಯಂ ಘೋಷಣೆ ಮಾಡಿಕೊಳ್ಳಲು ಉದ್ಯೋಗಾಧಿಕಾರಿ ಮನವಿ




**ಚಾಮರಾಜನಗರ:** ಯುವನಿಧಿ ಯೋಜನೆಯ ಪ್ರಯೋಜನ ಪಡೆಯುತ್ತಿರುವ ಅರ್ಹ ಅಭ್ಯರ್ಥಿಗಳು ಪ್ರತಿ ತಿಂಗಳು 25ನೇ ತಾರೀಖಿನೊಳಗಾಗಿ ಸ್ವಯಂಘೋಷಣೆ ಮಾಡಿಕೊಳ್ಳುವಂತೆ ಜಿಲ್ಲಾ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

ಯುವನಿಧಿ ಯೋಜನೆಯಡಿ ಪದವಿ ಮತ್ತು ಸ್ನಾತಕೋತ್ತರ ಪದವಿ ಹಾಗೂ ಡಿಪ್ಲೋಮಾಗಳನ್ನು 2022-23ನೇ ಶೈಕ್ಷಣಿಕ ವ?ರ್ದಲ್ಲಿ ವ್ಯಾಸಂಗ ಮಾಡಿ 2023ರಲ್ಲಿ ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಈಗಾಗಲೇ ಸೇವಾ ಸಿಂಧು ಪೋರ್ಟಲ್‌ನಲ್ಲಿ ನೋಂದಣಿಯಾಗಿದ್ದು ಹಾಗೂ ಫಲಿತಾಂಶದ ನಂತರ ನಿರುದ್ಯೋಗಿಗಳಾಗಿ 180 ದಿವಸಗಳು ಪೂರೈಸಿದ ಅಭ್ಯರ್ಥಿಗಳಿಗೆ ಜನವರಿ 2024 ರಿಂದ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ. ಅಭ್ಯರ್ಥಿಗಳು ಪ್ರಯೋಜನವನ್ನು ಪ್ರತಿ ತಿಂಗಳು ಪಡೆಯಬೇಕಿದ್ದರೆ, ಪ್ರತಿ ಮಾಹೆಯಲ್ಲಿ ತಾನು ನಿರುದ್ಯೋಗಿಯೆಂದು, ವ್ಯಾಸಂಗ ಮುಂದುವರೆಸುತ್ತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗಿಯಲ್ಲವೆಂದು ಪ್ರತಿ ತಿಂಗಳ 25ನೇ ತಾರೀಖಿನೊಳಗಾಗಿ ಸ್ವಯಂಘೋ?ಣೆಯನ್ನು ಮಾಡಬೇಕಿದೆ. ಸದರಿ ಯೋಜನೆಯ ಪ್ರಯೋಜನವನ್ನು ಪಡೆಯುತ್ತಿರುವ ಅರ್ಹ ಅಭ್ಯರ್ಥಿಗಳು ಪ್ರತಿ ತಿಂಗಳು 25ನೇ ತಾರೀಖಿನೊಳಗಾಗಿ ಸ್ವಯಂಘೋ?ಣೆ ಮಾಡದಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುವುದಿಲ್ಲ.

ಅಭ್ಯರ್ಥಿಗಳು ಕಡ್ಡಾಯವಾಗಿ ಆಧಾರ್ ಸೀಡೆಡ್ ಬ್ಯಾಂಕ್ ಖಾತೆಯನ್ನು ಹೊಂದಿರಬೇಕು. ವೆಬ್‌ಸೈಟ್ https:// sevasindhugs.karnataka. gov.in ನಲ್ಲಿ ಸ್ವಯಂಘೋಷಣೆ ಮಾಡಿಕೊಳ್ಳಬೇಕು. ಉಳಿದಂತೆ ಸೇವಾ ಸಿಂಧು ಪೋರ್ಟಲ್‌ನಲ್ಲಿ ತಮ್ಮ ಅರ್ಜಿಯು ಯಾವ ಹಂತದಲ್ಲಿದೆ ಎಂಬುದನ್ನು ಪರಿಶೀಲಿಸಿಕೊಂಡು, ಒಂದು ವೇಳೆ ಅರ್ಜಿಯು ಅಪ್ರೂವ್ ಆಗದ ಸಂದರ್ಭದಲ್ಲಿ ಸೂಚಿಸಲ್ಪಟ್ಟ ಇಲಾಖೆಯ ಕಚೇರಿಗಳಿಗೆ ತಮ್ಮ ಎಲ್ಲಾ ಮೂಲ ಅಂಕಪಟ್ಟಿ ಹಾಗೂ ಇತರೆ ಪ್ರಮಾಣ ಪತ್ರಗಳೊಂದಿಗೆ ಖುದ್ದಾಗಿ ಭೇಟಿ ನೀಡಿ ಅವುಗಳ ಜೆರಾಕ್ಸ್ ಪ್ರತಿಗಳನ್ನು ಸಲ್ಲಿಸಿ ಅಪ್ರೂವ್ ಮಾಡಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಯನ್ನು ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಜಿಲ್ಲಾ ಉದ್ಯೋಗಾಧಿಕಾರಿ ಯವರನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದು ಅಥವಾ ದೂ.ಸಂ 08226-224430 ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗಾಧಿಕಾರಿ ಎ. ಮಹಮ್ಮದ್ ಅಕ್ಬರ್ ತಿಳಿಸಿದ್ದಾರೆ.

# ಸಮುದಾಯಾಧಾರಿತ ಚಟುವಟಿಕೆ ದಾಖಲಿಗೆ ಸ್ಮಾರ್ಟ್‌ಫೋನ್ ಅಗತ್ಯ

**ಕೆ.ಆರ್.ಪೇಟೆ:** ಶಿಕ್ಷಣದ ಪ್ರಾರಂಭಿಕ ಹಂತವಾದ ಅಂಗನವಾಡಿಗಳಲ್ಲಿ ಸಮುದಾಯಾಧಾರಿತ ಚಟುವಟಿಕೆಗಳನ್ನು ತಂತ್ರಾಂಶದ ಮೂಲಕ ದಾಖಲಿಸಲು ಸ್ಮಾರ್ಟ್‌ಫೋನ್‌ಗಳ ಅಗತ್ಯವಿದೆ ಎಂದು ಶಾಸಕ ಹೆಚ್.ಟಿ.ಮಂಜು ತಿಳಿಸಿದರು.

ಅವರು ಪಟ್ಟಣದ ಯಶಸ್ವಿನಿ ಸಮುದಾಯ ಭವನದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಅಂಗನವಾಡಿ ಕಾರ್ಯಕರ್ತೆಯರಿಗೆ ಸ್ಮಾರ್ಟ್‌ಫೋನ್‌ಗಳನ್ನು ವಿತರಿಸಿ ಮಾತನಾಡಿದರು.

ಪೋಷನ್ ಅಭಿಯಾನ್ ಅಡಿಯಲ್ಲಿ ಭಾರತ ಸರ್ಕಾರದ ಮಾರ್ಗಸೂಚಿಯಂತೆ ಅಂಗನವಾಡಿ ಕೇಂದ್ರದಲ್ಲಿ ಪ್ರತಿನಿತ್ಯ ನಡೆಯುವ ಚಟುವಟಿಕೆಗಳನ್ನು ಟ್ರ್ಯಾಕರ್‌ನಲ್ಲಿ ಅಳವಡಿಸಿ ಹಾಗೂ ಅಗತ್ಯ ಮಾಹಿತಿಗಳನ್ನು ಸುಲಭವಾಗಿ ಸಂಗ್ರಹಿಸಲು ಅನುಕೂಲವಾಗುವಂತೆ ಈ ಹಿಂದೆಯೇ ಮಾರ್ಗಸೂಚಿ ಹೊರಡಿಸಲಾಗಿತ್ತು. ಅದರಂತೆ ಇಂದು ಅಂಗನವಾಡಿ ಕಾರ್ಯಕರ್ತೆಯರಿಗೆ ಸ್ಮಾರ್ಟ್‌ಫೋನ್ ವಿತರಿಸಲಾಗುತ್ತಿದೆ. ತಾಲೂಕಿನಲ್ಲಿ 400 ಅಂಗನವಾಡಿ ಕೇಂದ್ರಗಳು ಹಾಗೂ 14 ಮೇಲ್ವಿಚಾರಕಿಯರಿಗೆ ಸ್ಯಾಮ್ಸಂಗ್ ಸ್ಮಾರ್ಟ್‌ಫೋನನ್ನು ನೀಡಲಾಗುತ್ತಿದೆ. ಮೊಬೈಲ್ ಫೋನ್‌ಗಳಲ್ಲಿ ಆರು ವರ್ಷದ ಒಳಗಿನ ಮಕ್ಕಳ ಮಾಹಿತಿ, ಗರ್ಭಿಣಿ ಮತ್ತು ಬಾಣಂತಿಯರ ಅಪೌಷ್ಟಿಕತೆ ಮಟ್ಟವನ್ನು ಸುಧಾರಿಸುವ ಉದ್ದೇಶದಿಂದ ಕೈಗೊಂಡ ಕ್ರಮಗಳು ಸೇರಿದಂತೆ ಅಗತ್ಯ ಮಾಹಿತಿಗಳನ್ನು ಕ್ರೂಢೀಕರಿಸುವುದು, ನೋಂದಣಿ, ಸೀಮಂತ, ಅನ್ನಪ್ರಾಶನ, ಸುಪೋಷಣೆ ದಿನ ಅರ್ಹ ಮಕ್ಕಳನ್ನು ಅಂಗನವಾಡಿಗೆ ದಾಖಲಿಸುವುದು ಮುಂತಾದ ಸಮುದಾಯ ಆಧಾರಿತ ಚಟುವಟಿಕೆಗಳನ್ನು ಅಂಗನವಾಡಿ ಕೇಂದ್ರಗಳಲ್ಲಿ ಈ ಸ್ಮಾರ್ಟ್‌ಫೋನ್‌ಗಳನ್ನು ಉಪಯೋಗಿಸಿ ಮಾಹಿತಿಗಳನ್ನು ದಾಖಲಿಸಬೇಕಿರುತ್ತದೆ. ಪ್ರತಿ ವರ್ಷ ಮಾರ್ಚ್ ತಿಂಗಳಲ್ಲಿ ಪೋಷಣ್ ಪಕ್ವಾಡ್ ಹಾಗೂ ಸೆಪ್ಟೆಂಬರ್ ಮಾಹೆಯಲ್ಲಿ ಪೋಷಣ್ ಮಾಸಾಚರಣೆಯನ್ನು ಇತರೆ ಇಲಾಖೆಗಳ ಸಹಯೋಗದೊಂದಿಗೆ ಮಾಡಬೇಕಾಗಿರುತ್ತದೆ ಹೀಗಾಗಿ ಅಂಗನವಾಡಿ ಕಾರ್ಯಕರ್ತೆಯರು ಎದೆಗುಂದದೆ ತಮ್ಮ ದೈನಂದಿನ ಚಟುವಟಿಕೆಗಳನ್ನು ಯಶಸ್ವಿಯಾಗಿ ಕಾರ್ಯನಿರ್ವಹಿಸಬೇಕು ಆ ಮೂಲಕ ಇಲಾಖೆಗೆ ಹಾಗೂ ತಾಲೂಕಿಗೆ ಗೌರವ ತರುವ ಕೆಲಸವನ್ನು ಮಾಡಬೇಕು. ತುಂಬಾ ಕಷ್ಟಪಡುತ್ತಿರುವ ನಿಮಗೆ ನೀಡುತ್ತಿರುವ ಗೌರವಧನ ಕಡಿಮೆ ಇದ್ದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆಯೊಂದಿಗೆ ವೇತನ ಹೆಚ್ಚಳ ಸಂಬಂಧ ಮಾತನಾಡಲಾಗಿದೆ ಎಂದರು.



**ಅಂಗನವಾಡಿ ಕಾರ್ಯಕರ್ತೆಯರು ಎದೆಗುಂದದೆ ತಮ್ಮ ದೈನಂದಿನ ಚಟುವಟಿಕೆಗಳನ್ನು ಯಶಸ್ವಿಯಾಗಿ ಕಾರ್ಯನಿರ್ವಹಿಸಬೇಕು ಆ ಮೂಲಕ ಇಲಾಖೆಗೆ ಹಾಗೂ ತಾಲೂಕಿಗೆ ಗೌರವ ತರುವ ಕೆಲಸವನ್ನು ಮಾಡಬೇಕು. ತುಂಬಾ ಕಷ್ಟಪಡುತ್ತಿರುವ ನಿಮಗೆ ನೀಡುತ್ತಿರುವ ಗೌರವಧನ ಕಡಿಮೆ ಇದ್ದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆಯೊಂದಿಗೆ ವೇತನ ಹೆಚ್ಚಳ ಸಂಬಂಧ ಮಾತು ಕತೆ ನಡೆಸಲಾಗಿದೆ.**
**ಹೆಚ್.ಟಿ.ಮಂಜು** ಶಾಸಕರು.

ಇದೇ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ರಾಜಮೂರ್ತಿ, ಕೆಎಂಎಫ್ ಜಂಟಿ ನಿರ್ದೇಶಕ ಅರವಿಂದ್, ತಹಸಿಲ್ದಾರ್ ನಿಸರ್ಗಪ್ರಿಯ, ತಾಲ್ಲೂಕು ಪಂಚಾಯಿತಿ ಇಓ ಸತೀಶ್, ಸಿಡಿಪಿಓ ಅರುಣ್ ಕುಮಾರ್, ವೃತ್ತ ಮೇಲ್ವಿಚಾರಕಿ ಪದ್ಮಮ್ಮ ಸೇರಿದಂತೆ ಹಲವು ಮೇಲ್ವಿಚಾರಕಿಯರು, ಕಾರ್ಯಕರ್ತೆಯರು ಹಾಜರಿದ್ದರು.

# ಡೆಂಗ್ಯೂ ಹೆಚ್ಚಾಗದಂತೆ ಮುನ್ನೆಚ್ಚರಿಕೆ ಕೈಗೊಳ್ಳಿ

**ಮೈಸೂರು:** ಜಿಲ್ಲೆಯಲ್ಲಿ ಮಳೆಯಾಗುತ್ತಿದ್ದು ಇದರಿಂದ ಡೆಂಗ್ಯೂ ಪ್ರಕರಣಗಳು ಹೆಚ್ಚಾಗುತ್ತಿವೆ. ಡೆಂಗ್ಯೂ ಪ್ರಕರಣಗಳ ನಿಯಂತ್ರಣಕ್ಕೆ ಅಗತ್ಯ ಕ್ರಮಗಳನ್ನು ಕೈಗೊಳ್ಳಿ ಎಂದು ಜಿಲ್ಲಾಧಿಕಾರಿ ಡಾ.ಕೆ.ವಿ.ರಾಜೇಂದ್ರ ತಿಳಿಸಿದರು.

ಶನಿವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ಡೆಂಗ್ಯೂ ನಿಯಂತ್ರಣ ಕುರಿತು ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, 3493 ಜನರಿಗೆ ಪರೀಕ್ಷೆ ನಡೆಸಿದ್ದು ಇದರಲ್ಲಿ 481 ಜನರಿಗೆ ಡೆಂಗ್ಯೂ ಪ್ರಕರಣಗಳು ಕಂಡು ಬಂದಿದ್ದು ಶೇ.14 ಪ್ರಕರಣಗಳು ಕಂಡು ಬಂದಿವೆ. ಫೆಬ್ರವರಿ, ಮಾರ್ಚ್, ಏಪ್ರಿಲ್ ನಲ್ಲಿ ಶೇ.18 ಇದ್ದು ಈಗ ಶೇ.11ಕ್ಕೆ ಡೆಂಗ್ಯೂ ಪ್ರಕರಣಗಳು ಇಳಿದಿವೆ ಎಂದು ತಿಳಿಸಿದರು.

ನಮ್ಮಲ್ಲಿ ಡೆಂಗ್ಯೂ ಪ್ರಕರಣಗಳು ನಿಯಂತ್ರಣದಲ್ಲಿ ಇವೆ. ಇದು ಹೆಚ್ಚಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಿ. ಡೆಂಗ್ಯೂ ಸೊಳ್ಳೆಗಳ ಕಡಿತದಿಂದ ಬರುತ್ತದೆ. ಸೊಳ್ಳೆಗಳು ನಿಂತ ನೀರಿನಲ್ಲಿ ಉತ್ಪತ್ತಿ ಆಗುತ್ತವೆ. ಬಸ್ ಡಿಪೋಗಳು, ಚರಂಡಿಗಳು, ಹಳೆಯ ಟೈರ್‌ಗಳು, ತೆಂಗಿನ ಚಿಪ್ಪುಗಳಲ್ಲಿ, ನೀರಿನ ತೊಟ್ಟಿಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು. ಜನರಿಗೆ ಈ ಕುರಿತು ಅರಿವು ಮೂಡಿಸಬೇಕು ಎಂದು ತಿಳಿಸಿದರು. ನಿಯಮಿತವಾಗಿ ಫಾಗಿಂಗ್ ಮಾಡಿಸಬೇಕು. ಇದರಿಂದಲೂ ಜನರಿಗೆ ಡೆಂಗ್ಯೂ ಕುರಿತು ಅರಿವು ಮೂಡಿಸಬೇಕು. ಈ ಸಂಬಂಧ ಗ್ರಾಮ ಪಂಚಾಯಿತಿಗಳು, ಪುರಸಭೆ ನಗರಸಭೆ, ಕಾರ್ಯ ನಿರ್ವಹಿಸಬೇಕು. ಶುದ್ಧ ಕುಡಿಯುವ ನೀರು ಪೂರೈಸುತ್ತಿರುವ ಬಗ್ಗೆ ಸಂಬಂದಿಸಿದ ಅಧಿಕಾರಿಗಳು ಪ್ರತಿದಿನ ಪರಿಶೀಲನೆ ನಡೆಸಬೇಕು. ನಿಯಮಿತವಾಗಿ ನೀರಿನ ಟ್ಯಾಂಕ್ ಗಳು ಹಾಗೂ ಓವರ್ ಹೆಡ್ ಟ್ಯಾಂಕ್ ಗಳನ್ನು ಸ್ವಚ್ಛಗೊಳಿಸಬೇಕು ಎಂದು ಸೂಚಿಸಿದರು.



## ಅಸಮಕಾಲೀನ ಸ್ಪಂದನೆ ವಿಚಾರ ಸಂಕಿರಣದಲ್ಲಿ ಬಂಜಗೆರೆ ಜಯಪ್ರಕಾಶ್

# ಶೋಷಣೆ ವಿರುದ್ಧಮೊಳಗಿದ ಅಂಬೇಡ್ಕರ್

**ಮೈಸೂರು:** ಶೋಷಣೆ ವಿರುದ್ಧ ಮೊಳಗಿದ ದನಿ ಎಂದರೆ ಅದು ಅಂಬೇಡ್ಕರ್ ಮಾತ್ರ ಎಂದು ಬಂಜಗೆರೆ ಜಯಪ್ರಕಾಶ್ ಹೇಳಿದರು.

ನಗರದ ಮೈಸೂರು ವಿಶ್ವವಿದ್ಯಾಲಯದಲ್ಲಿ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಸಂಶೋಧನಾ ವಿದ್ಯಾರ್ಥಿ ವೇದಿಕೆಯಿಂದ ಶನಿವಾರ ನಡೆದ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ, ಅಂಬೇಡ್ಕರ್ ಚಿಂತನೆ: ಸಮಕಾಲೀನ ಸ್ಪಂದನೆ ಕುರಿತ ವಿಚಾರ ಸಂಕಿರಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಂಬೇಡ್ಕರ್ ಶೋಷಣೆ ವಿರುದ್ಧ ಜ್ಞಾನದ ಮಾರ್ಗದ ಕ್ರಾಂತಿ ನಡೆಸಿ ಸಮಾನತೆ ಸಾಧಿಸಿದರು. ಸಮಾಜಿಕ ಬದಲಾವಣೆಗೆ ಶ್ರಮಿಸಿದರು. ಎಲ್ಲರಿಗೂ ಸ್ಥಾನಮಾನ, ಸಮಾನತೆ ದೊರಕಬೇಕು ಎಂಬುದು ಅವರ ಆಶಯವಾಗಿತ್ತು ಎಂದರು.

ದೇಶದಲ್ಲಿ ಸನಾತನ ಮತ್ತು ಸಂವಿಧಾನ ಒಟ್ಟಾಗಿ ಹೋಗಲು ಸಾಧ್ಯವಿಲ್ಲ. ಶೋಷಣೆ, ಮೇಲು ಕೀಳು, ಜಾತಿ ವ್ಯವಸ್ಥೆ ತೊಡೆದುಹಾಕುವ ಸಲುವಾಗಿ ಭಾರತದ ಜನತೆ ಮಹತ್ತರ ಹೋರಾಟ ಪ್ರಾರಂಭವಾಯಿತು. ಸ್ವಾತಂತ್ರ್ಯ ಹೋರಾಟದ ಜೊತೆಯಲ್ಲಿ ಸಾಮಾಜಿಕ ಸ್ವಾತಂತ್ರ್ಯ ಹೋರಾಟ ಸಹ ಪ್ರಾರಂಭವಾಯಿತು. ಇದಕ್ಕೆ ಸಾವಿರ ವರ್ಷಗಳ ಇತಿಹಾಸ ಇದೆ ಎಂದು ಹೇಳಿದರು.

ಜಾತಿ ವ್ಯವಸ್ಥೆಗೆ ಕಾನೂನಿನಲ್ಲಿ ಮಾನ್ಯತೆ ಇರಬಾರದು. ಶ್ರಮ ವಿಭಜನೆಯಲ್ಲಿ ಮೇಲೂ ಕೀಳು ಇರಬಾರದು. ನಾನು ಕಟ್ಟ ಬೇಕಿರುವ ಸ್ವಾತಂತ್ರ್ಯ ಸಮಾನತೆ, ಭಾತೃತ್ವ, ಸೋದರತೆ ಬಗ್ಗೆ ಅಂಬೇಡ್ಕರ್ ಬಯಸಿದ್ದರು. ಆದರೆ, ಕಳೆದ ಹತ್ತು ವರ್ಷಗಳಲ್ಲಿ ಸಂವಿಧಾನ ಬದಲಾವಣೆ ಮಾಡಲು ಬಲಪಂಥೀಯರ ಹುನ್ನಾರ ನಡೆಯುತ್ತಿದೆ. ಇದಕ್ಕಾಗಿ ನಾಲ್ಕು ನೂರು ಸ್ಥಾನ ಕೊಡಿ ಎಂದು ಹೇಳುತ್ತಿದ್ದಾರೆ. ಯುವಕರ ಮನಸ್ಸನ್ನು ಗೆದ್ದು, ಎಲ್ಲಾ ಮಾಧ್ಯಮಗಳನ್ನು ಖರೀದಿಸಿ-ಹೆದರಿಸಿಕೊಂಡು ಮನುಸ್ಮೃತಿ ಜಾರಿ ಮಾಡಲು ಹೊರಟಿದ್ದರು. ಆದರೆ ಭಾರತದ ಜನರು ನಾವು ಇದರ ಪರವಾಗಿಲ್ಲ ಎಂದು ಹೇಳಿದರು.



**ಜಾತಿ ವ್ಯವಸ್ಥೆಗೆ ಕಾನೂನಿನಲ್ಲಿ ಮಾನ್ಯತೆ ಇರಬಾರದು. ಶ್ರಮ ವಿಭಜನೆಯಲ್ಲಿ ಮೇಲೂ ಕೀಳು ಇರಬಾರದು. ನಾನು ಕಟ್ಟ ಬೇಕಿರುವ ಸ್ವಾತಂತ್ರ್ಯ ಸಮಾನತೆ, ಭಾತೃತ್ವ, ಸೋದರತೆ ಬಗ್ಗೆ ಅಂಬೇಡ್ಕರ್ ಬಯಸಿದ್ದರು.**
**ಬಂಜಗೆರೆ ಜಯಪ್ರಕಾಶ್** ಪ್ರಗತಿಪರ ಚಿಂತಕ

ಆದಿವಾಸಿಗಳು, ದಲಿತರು, ಅಸ್ಪೃಶ್ಯರು-ಶೂದ್ರರು ಅದರಲ್ಲೂ ಮುಂಚೂಣಿ ಶಕ್ತಿಯಾಗಿ ಮುಸ್ಲಿಂ ಸಮುದಾಯ ಅಂಬೇಡ್ಕರ್ ಸಂವಿಧಾನ-ತತ್ವ ಚಿಂತನೆ ಮನಗಂಡಿದ್ದರು. ಮನುಸ್ಮೃತಿ ಆಸೆಯನ್ನು ಹೊಂದಿದ್ದವರು ಅವರು ಬಯಸಿದ ಸಂಖ್ಯಾ ಬಲವನ್ನು ಪಡೆಯಲು ಆಗದೆ ಪ್ರಾದೇಶಿಕ ಪಕ್ಷಗಳ ಆಶ್ರಯ ಪಡೆಯಬೇಕಾಯಿತು ಎಂದು ಪರೋಕ್ಷವಾಗಿ ಬಿಜೆಪಿ ವಿರುದ್ಧ ಕಿಡಿಕಾರಿದರು.

ಸಾಮಾಜಿಕ ಕಾರ್ಯಕರ್ತೆ, ಲಿಂಗತ್ವ ಅಲ್ಪಸಂಖ್ಯಾತರ ಹಕ್ಕುಗಳ ಹೋರಾಟಗಾರ್ತಿ ಅಕ್ಕೈ ಪದ್ಮಶಾಲಿ ಮಾತನಾಡಿ, ನಮ್ಮನ್ನು, ನಮ್ಮ ಲಿಂಗತ್ವ ನಿರ್ಣಯ ಮಾಡಲು ಯಾರಿಗೂ ಹಕ್ಕಿಲ್ಲ. ನಾವೇ ನಮ್ಮ ಲಿಂಗ ನಿರ್ಧರಿಸುವ ಮಹಾಲಿಂಗಿಗಳು. ಇದನ್ನು ಕೇಳುವ, ಪ್ರಶ್ನಿಸುವ ಹಕ್ಕು ಸಂವಿಧಾನ ಒದಗಿಸಿದೆ. ಇದರಿಂದಲೇ ನಮ್ಮ ರಕ್ಷಣೆಯಾಗುತ್ತಿದೆ ಎಂದರು.

ಬಸವಣ್ಣ ಅವರನ್ನು ರಾಜ್ಯದ ಸಾಂಸ್ಕೃತಿಕ ನಾಯಕನಾಗಿ ಘೋಷಣೆ ಮಾಡಿರುವುದು ನಮ್ಮೆಲ್ಲರ ಭಾಗ್ಯವೇ ಸರಿ. ಇದು ಬೇರೆ ಸರ್ಕಾರ ಬಂದಿದ್ದರೂ ಮಾಡಲು ಸಾಧ್ಯವಾಗುತ್ತಿತ್ತೋ ಗೊತ್ತಿಲ್ಲ. ಆದರೆ, ಕಾಂಗ್ರೆಸ್ ಸರ್ಕಾರ ಮಾಡಿದೆ ಎಂದು ಪ್ರಶಂಸಿಸಿದರು.

ಸನಾತನ ಧರ್ಮದಲ್ಲಿ ಎಲ್ಲವೂ ಸರಿಯಿಲ್ಲ. ಮಂಗಳಮುಖಿಯರು ಎದುರುಗಡೆ ಬಂದರೆ, ಮಂಗಳ ಅಗುತ್ತದೆ ಅಂದ ಮೇಲೆ ನಿಮ್ಮ ಮನೆಯಲ್ಲಿರುವ ಹೆಣ್ಣು ಮಕ್ಕಳು ಅಮಂಗಳರಾ ಎಂದು ಪ್ರಶ್ನಿಸಿದರು. ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ಸಂವಿಧಾನ ಪೀಠಿಕೆ ಬೋಧಿಸಲಾಯಿತು. ಕಾರ್ಯಕ್ರಮಕ್ಕೂ ಮೊದಲು ಕಲಾತಂಡದಿಂದ ಮೆರವಣಿಗೆ ನಡೆಯಿತು.

ಕೆಎಸ್‌ಓಯು ಪ್ರಾಧ್ಯಾಪಕಿ ಪ್ರೊ.ಕವಿತಾ ರೈ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ನಿರ್ದೇಶಕ ಪ್ರೊ. ಎನ್.ಕೆ.ಲೋಲಾಕ್ಷಿ, ಪ್ರಸಾರಾಂಗ ನಿರ್ದೇಶಕ ಪ್ರೊ. ಎಂ.ನಂಜಯ್ಯ ಭಾಗವಹಿಸಿದ್ದರು.

# ಗ್ರಾಹಕ ಜಾಗೃತಿ ಕಾರ್ಯಕ್ರಮ



**ಚಾಮರಾಜನಗರ:** ನಗರದ ಕರ್ನಾಟಕ ಬ್ಯಾಂಕ್, ಭಾರತೀಯ ರಿಸರ್ವ್ ಬ್ಯಾಂಕ್ ಬೆಂಗಳೂರು ಕಚೇರಿ ವತಿಯಿಂದ ಬ್ಯಾಂಕು ಮತ್ತು ಬ್ಯಾಂಕಿಂಗೇತರ ಹಣಕಾಸು ಸಂಸ್ಥೆಗಳ ಗ್ರಾಹಕರಗಳ ಅನುಕೂಲಕ್ಕಾಗಿ ಜನಜಾಗೃತಿ ಕಾರ್ಯಕ್ರಮವನ್ನು ಡಾ.ರಾಜಕುಮಾರ್ ಭವನದಲ್ಲಿ ಏರ್ಪಡಿಸಲಾಗಿತ್ತು. ವ್ಯವಸ್ಥಾಪಕರಾದ ಮಂಗಳಂ ವೆಂಕಟರಮನ್ ಉದ್ಘನೆ ನೆರವೇರಿಸಿದರು. ನಂತರ ಗ್ರಾಹಕರ ದೂರುಗಳ ಪರಿಹಾರ ಸಂಬಂಧ ಬ್ಯಾಂಕುಗಳಿಗೆ ಆರ್ ಬಿ ಐ ನೀಡಿರುವ ಸೂಚನೆಗಳು ಮತ್ತು ತಮ್ಮ ದೂರುಗಳನ್ನು ಕಾಲಮಿತಿಯಲ್ಲಿ ಪರಿಹರಿಸಿಕೊಳ್ಳುವುದು ಹೇಗೆ ಎಂಬುದರ ಬಗ್ಗೆ ಸಭಿಕರಿಗೆ ಮಾಹಿತಿ ನೀಡಿದರು. ಹಾಗೂ ಭಾರತೀಯ ರಿಸರ್ವ್ ಬ್ಯಾಂಕ್ ಏಕೀಕೃತ ಲೋಕಪಾಲ ಯೋಜನೆ 2021ರ ಅಡಿಯಲ್ಲಿ ಇರುವ ಪರಿಹಾರ ವಿಧಾನಗಳ ಬಗ್ಗೆಯೂ ತಿಳಿಸಿಕೊಟ್ಟರು. ದೂರುಗಳನ್ನು ಆರ್‌ಬಿಐನ ಸಿಎಂಎಸ್ ಪೋರ್ಟಲ್ ಮತ್ತು ಯೋಜನೆಯ ಇತರ ಮಾಧ್ಯಮಗಳ ಮೂಲಕ ಹೇಗೆ ಸಲ್ಲಿಸಬೇಕು ಎಂಬುದರ ಬಗ್ಗೆಯೂ ಮಾಹಿತಿ ನೀಡಿದರು. ನಾನಾ ವಿಧದ ವಂಚನೆಗಳನ್ನು ತಡೆಯುವುದಕ್ಕೆ ತೆಗೆದುಕೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ ವಿವರಣೆ ನೀಡಿದರು. ಸುಮಾರು 150 ಗ್ರಾಹಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಪ್ರಶ್ನೋತ್ತರ ಅವಧಿಯನ್ನೂ ಸಹ ಏರ್ಪಡಿಸಲಾಗಿತ್ತು .ಸಭಿಕರ ಪ್ರಶ್ನೆಗಳಿಗೆ . ಶಾಹಿನ್ ಕೌಸರ್ ಖಾನ್,. ವಿನೋದ್ ನಾಯಕ್ ಮತ್ತು . ರಾಯ್ ಶಿವಕುಮಾರ್ ಉತ್ತರಿಸಿದರು. ಕರ್ನಾಟಕ ಬ್ಯಾಂಕ್ ವತಿಯಿಂದ ಬಂದಂತಹ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ರಿಸರ್ವ್ ಬ್ಯಾಂಕ್ ಏಕೀಕೃತ ಲೋಕಪಾಲ ಯೋಜನೆ 2021 ರ ಬಗ್ಗೆ ಸಂಬಂಧಿಸಿದ ಕರಪತ್ರ ಮತ್ತು ಕಿರು ಹೊತ್ತಿಗೆಗಳನ್ನು ಅಧಿಕಾರಿಗಳಿಗೆ ಹಂಚಲಾಯಿತು.

# ಮಡೇನಹಳ್ಳಿಗೆ ತಹಶೀಲ್ದಾರ್ ಭೇಟಿ

**ಭಾರತೀನಗರ:** ಹೊಲ, ಗದ್ದೆಗಳಿಗೆ ಹೋಗಲು ರಸ್ತೆ ಬಿಡಿಸಿಕೊಡುವಂತೆ ಮಡೇನಹಳ್ಳಿ ಗ್ರಾಮಸ್ಥರು ತಹಶೀಲ್ದಾರ್ ಅವರಿಗೆ ಮಾಡಿದ ಮನವಿಯ ಮೇರೆಗೆ ತಹಶೀಲ್ದಾರ್ ಗ್ರಾಮಕ್ಕೆ ಭೇಟಿ ನೀಡಿ ಸ್ಥಳಪರಿಶೀಲನೆ ನಡೆಸಿದರು.

ಗ್ರಾಮ ಠಾಣಾ ವ್ಯಾಪ್ತಿಯಲ್ಲಿನ ರಸ್ತೆಯೊಂದರಲ್ಲಿ ಮಾಲೀಕರೊಬ್ಬರ ಜಮೀನು ಅಡ್ಡ ಬಂದಿದ್ದು, ಈ ಸಂಬಂಧ ಮದ್ದೂರು ತಾಲ್ಲೂಕು ತಹಶೀಲ್ದಾರ್ ಸೋಮಶೇಖರ್ ಗ್ರಾಮಸ್ಥರು ರಸ್ತೆ ಬಿಡಿಸಿಕೊಡುವಂತೆ ಮನವಿ ಮಾಡಿದ್ದರು.

ಈ ಕುರಿತು ಸ್ಥಳ ಪರಿಶೀಲನೆ ಮಾಡಿದ ನಂತರ ತಾವು ಕ್ರಮ ಕೈಗೊಳ್ಳುವುದಾಗಿ ಗ್ರಾಮಸ್ಥರಿಗೆ ತಿಳಿಸಿದ್ದ ತಹಶೀಲ್ದಾರ್ ಸೋಮಶೇಖರ್ ಮಡೇನಹಳ್ಳಿ ಗ್ರಾಮಕ್ಕೆ ಆಗಮಿಸಿ ಸ್ಥಳ ಪರಿಶೀಲನೆ ನಡೆಸಿದರು. ಈ ಸಂದರ್ಭ ಗ್ರಾಮದ ಲೋಕಮಾತೆ ಎಂಬುವವರಿಗೆ ಸೇರಿದ ಜಮೀನೆಂದು ತಿಳಿದು ಬಂದ ಹಿನ್ನೆಲೆಯಲ್ಲಿ ಗ್ರಾಮದಲ್ಲಿ ಈ ಸಂಬಂಧ ಕುಳಿತು ಸಮಸ್ಯೆ ಇತ್ಯರ್ಥ ಪಡಿಸಿಕೊಳ್ಳಬೇಕು. ಇದು ಕಾನೂನು ವ್ಯಾಪ್ತಿಗೆ ಬರುವುದಿಲ್ಲ ಎಂದು ಸೋಮಶೇಖರ್ ತಿಳಿಸಿದರು.

ಜಮೀನಿನ ಮಾಲೀಕರ ಪತಿ ರುದ್ರಮುನಿ ಎಂಬುವವರ ಜೊತೆಗೂ ಮಾತನಾಡಿದ ತಹಶೀಲ್ದಾರ್ ಗ್ರಾಮಸ್ಥರಿಗಾಗಿ ಸ್ವಲ್ಪ ಭಾಗವನ್ನು ರಸ್ತೆ ಬಿಡುವಂತೆ ಮನವೊಲಿಸಿದರು. ಆದರೆ ರುದ್ರಮುನಿ ಅವರು ತಮ್ಮ ಆರ್ಟಿಸಿಯಲ್ಲಿ ಇರುವಷ್ಟು ಜಮೀನನ್ನು ಅಳತೆ ಮಾಡಿಸಿ ಹೆಚ್ಚಾಗಿ ಬಂದಲ್ಲಿ ಅದನ್ನು ರಸ್ತೆಗೆ ಬಿಡುವುದಾಗಿ ತಿಳಿಸಿದರು.



ಈ ಸಂದರ್ಭ ಗ್ರಾಮದಲ್ಲಿ ಬಿಗುವಿನ ವಾತಾವರಣ ನಿರ್ಮಾಣವಾಗಿದ್ದು, ಸೋಮಶೇಖರ್ ಅದನ್ನು ತಿಳಿಗೊಳಿಸಿ ಈ ವಿಚಾರವಾಗಿ ಇನ್ನೂ ಸ್ವಲ್ಪ ದಿನ ಬಿಟ್ಟು ಜಮೀನಿನ ಮಾಲೀಕರೊಂದಿಗೆ ಕುಳಿತು ಮಾತನಾಡಿ ಸಮಸ್ಯೆ ಬಗೆಹರಿಸಿಕೊಳ್ಳಬೇಕೆಂದು ಗ್ರಾಮಸ್ಥರಿಗೆ ತಿಳಿಸಿದರು.

ಕಂದಾಯ ಇಲಾಖೆಯ ಎಡಿಎಲ್ ಆರ್ ಶ್ರೀನಿವಾಸಮೂರ್ತಿ, ಗ್ರಾಮಸ್ಥರಾದ ಸದಸ್ಯೆ ಶೋಭಾ ಎಂ. ಎಸ್. ಬಸವರಾಜ ಒಡೆಯರ್, ಉಪಾಧ್ಯಕ್ಷರು ಎಂ. ಎಸ್. ಸಿದ್ದಲಿಂಗಸ್ವಾಮಿ, ಮುಖಂಡರಾದ ಎಂ. ಮಲ್ಲಪ್ಪ, ರುದ್ರಮುನಿಸ್ವಾಮಿ,ಎಂ. ಬಿ. ಸಿದ್ದಲಿಂಗಸ್ವಾಮಿ, ಎಲ್ ಐಸಿ ಸಿದ್ದಲಿಂಗಸ್ವಾಮಿ, ಎಂ. ಪಿ. ಚಂದ್ರಶೇಖರ್, ಎಂ. ಗಣೇಶ, ಚಂದ್ರಶೇಖರ, ಸುಧಾರಾಣಿ, ಸುಗುಣ, ಮಂಜುಳಾ ಮತ್ತಿತರರಿದ್ದರು.

## ಕೇಂದ್ರೀಯ ವಿದ್ಯಾಲಯ ಶೀಘ್ರ ಉದ್ಘಾಟನೆ

**ಮಂಡ್ಯ:** ಕೇಂದ್ರೀಯ ವಿದ್ಯಾಲಯವು ಸ್ವಂತ ಕಟ್ಟಡವಿಲ್ಲದೆ ತಾತ್ಕಾಲಿಕವಾಗಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿತ್ತು, ಈದೀಗ ಸ್ವಂತ ಕಟ್ಟಡದ ಕಾಮಗಾರಿ ಕೆಲಸಗಳು ಅಂತಿಮ ಹಂತದಲ್ಲಿದ್ದು ಶೀಘ್ರ ರೊಳಗೆ ಕಾಮಗಾರಿ ಕೆಲಸಗಳು ಪೂರ್ಣಗೊಳ್ಳಲಿದೆ. ಜಿಲ್ಲಾಧಿಕಾರಿ ಡಾ. ಕುಮಾರ ಅವರು ಸಭೆಗಳನ್ನು ನಡೆಸಿ ಕಾಮಗಾರಿ ಪೂರ್ಣಗೊಳಿಸುವಂತೆ ಸೂಚನೆಗಳು ಈ ಹಿಂದೆ ನೀಡಿದ್ದರು. ಕಾಮಗಾರಿ ಪೂರ್ಣಗೊಳುತ್ತಿರುವ ಹಿನ್ನಲೆ ಉದ್ಘಾಟನೆಗೆ ದಿನಾಂಕ ನಿಗದಿ ಮಾಡುವಂತೆ ಬೆಂಗಳೂರಿನ ಕೇಂದ್ರೀಯ ವಿದ್ಯಾಲಯಗಳ ಸಂಘಟನಾ ಮುಖ್ಯಸ್ಥರಿಗೆ ಪತ್ರ ಬರೆದಿದ್ದಾರೆ. ಈ ಪತ್ರದೊಂದಿಗೆ ಕೇಂದ್ರೀಯ ವಿದ್ಯಾಲಯದಲ್ಲಿ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಸಹ ಭರ್ತಿ ಮಾಡಿಕೊಡುವಂತೆ ಸಹ ಪತ್ರ ಬರೆದಿದ್ದಾರೆ.

## ವಾಯುಪಡೆಗೆ ಅರ್ಜಿ ಆಹ್ವಾನ

**ಮಂಡ್ಯ:** ಭಾರತೀಯ ವಾಯುಪಡೆಯಿಂದ ಅಗ್ನಿಪಥ್ ಯೋಜನೆಯಡಿಯಲ್ಲಿ ಅಗ್ನಿವೀರ್ ವಾಯು ಸೇವೆಗೆ ಆಯೆ ಪರೀಕ್ಷೆಗಿ ಅವಿವಾಹಿತ ಪುರುಷ ಮತ್ತು ಮಹಿಳೆಯರಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಜುಲೈ 8 ರಿಂದ 28 ರವರೆಗೆ ಸಲ್ಲಿಸತಕ್ಕದ್ದು, ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08232-295124 ಹಾಗೂ https://agnipathvayu.cdac.in ವೆಬ್ ಸೈಟ್ ನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಉದ್ಯೋಗಾಧಿಕಾರಿ ತಿಳಿಸಿರುತ್ತಾರೆ.

## ಪ್ರೋತ್ಸಾಹಧನಕ್ಕೆ ಆಹ್ವಾನ

**ಮಂಡ್ಯ:** ಮಂಡ್ಯ ನಗರಸಭೆಯ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಬಡ ಕುಟುಂಬಕ್ಕೆ ಸೇರಿದ ಶೇ 24.10 ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಶೇ 7.25 ಇತರೆ ಬಡಜನ ಕಲ್ಯಾಣ ಕಾರ್ಯಕ್ರಮ ಯೋಜನೆಯಡಿ ಬಿ.ಪಿ.ಎಲ್ ಕಾರ್ಡ್ ಹೊಂದಿರುವ ಎಸ್.ಎಸ್. ಎಲ್.ಸಿ, ಪಿ.ಯು.ಸಿ, ಡಿಪ್ಲೋಮೊ, ಇತರೆ ವೃತ್ತಿಪರ ಐ.ಟಿ.ಐ ಪದವಿ, ಸ್ನಾತಕೋತ್ತರ ಪದವಿ ಬಿ.ಇ ಮತ್ತು ಎಂ.ಬಿ.ಬಿ.ಎಸ್ ವ್ಯಾಸಂಗ ಮಾಡುತ್ತಿರುವ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮತ್ತು ಶೇ 5 ವಿಶೇಷಚೇತನರ ಕಲ್ಯಾಣ ಕರ್ಯಕ್ರಮ ಯೋಜನೆಯಡಿ ಶ್ರವಣ ಸಾಧನಕೊಳ್ಳಲು ಸಹಾಯಧನ ಸೌಲಭ್ಯ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಡೇನಲ್ಮ್ ಶಾಖೆಯಿಂದ ಪಡೆದು ಜುಲೈ 26 ರೊಳಗೆ ನಗರಸಭೆ ಪೌರಾಯುಕ್ತರ ಕಚೇರಿಗೆ ಸಲ್ಲಿಸತಕ್ಕದ್ದು ಎಂದು ಮಂಡ್ಯ ನಗರಸಭೆ ಪೌರಾಯುಕ್ತರು ತಿಳಿಸಿರುತ್ತಾರೆ.

## ವಿದ್ಯಾರ್ಥಿಗಳು ದುಶ್ಚಟಗಳಿಗೆ ದಾಸರಾಗಬಾರದು

**ಹೊಸೂರು:** ಮಾದಕ ವಸ್ತುಗಳ ಬಳಕೆಯಿಂದ ದೂರ ಸರಿದು ಸಮಾಜದಲ್ಲಿ ಉತ್ತಮ ಹಾಗೂ ಗೌರವಯುತ ಬದುಕು ಕಟ್ಟಿಕೊಳ್ಳಲು ವಿದ್ಯಾರ್ಥಿ ದಿಸೆಯಿಂದಲೇ ಮುಂದಾಗಬೇಕು ಎಂದು ಸಾಲಿಗ್ರಾಮ ತಾಲೂಕು ಧರ್ಮಸ್ಥಳ ಸಂಸ್ಥೆಯ ಯೋಜನಾಧಿಕಾರಿ ಉಮೇಶ್ ಪೂಜಾರಿ ಹೇಳಿದರು.ಹೊಸೂರು ಗ್ರಾಮದಲ್ಲಿರುವ ಹೊಸೂರು ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಸಹಯೋಗದಲ್ಲಿ ನಡೆದ ಮಾದಕ ವಸ್ತು ವಿರೋಧಿ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.ಧೂಮಪಾನ ಹಾಗೂ ಮದ್ಯಪಾನ ಆರೋಗ್ಯಕ್ಕೆ ಹಾನಿಕರ ಜತೆಗೆ ತಂಬಾಕು, ಮಾದಕ ವಸ್ತುಗಳ ಸೇವನೆಯಿಂದ ಹಲವಾರು ಸಾಗಣೆ ರೋಗಗಳಿಗೆ ತುತ್ತಾಗಿ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಲಿದೆ. ಹೀಗಾಗಿ ಇಂತಹ ದುಶ್ಚಟಗಳಿಗೆ ಬಲಿಯಾಗಬಾರದು. ಶೈಕ್ಷಣಿಕ ಕಲಿಕೆಯತ್ತ ಗಮನಹರಿಸಿ ಸಮಾಜ ದಲ್ಲಿ ಉತ್ತಮ ಪ್ರಜೆಗಳಾಗಿ ಇತರರಿಗೆ ಮಾದರಿಯಾಗಬೇಕು ಎಂದು ಹೇಳಿದರು.ಇತ್ತೀಚಿನ ದಿನಗಳಲ್ಲಿ ಯುವಕರು ಮಾತ್ರವಲ್ಲದೆ ವಿದ್ಯಾರ್ಥಿಗಳು ಮಾದಕ ವಸ್ತುಗಳ ಬಳಕೆಯಲ್ಲಿ ತೊಡಗಿದ್ದು, ತಮ್ಮ ಜೀವನವನ್ನೇ ಹಾಳು ಮಾಡಿಕೊಳ್ಳುತ್ತಿದ್ದಾರೆ. ವಿದ್ಯಾರ್ಥಿ ಜೀವನದಲ್ಲಿ ಓದು ತುಂಬಾ ಅವಶ್ಯಕ. ಓದು ಎಲ್ಲರ ಭವಿಷ್ಯ ವನ್ನು ರೂಪಿಸುತ್ತದೆ. ಮಾದಕ ವಸ್ತುಗಳ ಬಳಕೆಯಿಂದ ಓದುವ ಮನಸ್ಥಿತಿ ಕಡಿಮೆ ಆಗುತ್ತಿದೆ. ಹೆರಾನ್, ಗಾಂಜಾ, ಕೊಕೈನ್, ಇವುಗಳು ಡ್ರಗ್ಸ್ನ ವಿಧಗಳಾಗಿದ್ದು ಒಬ್ಬರಿಂದ ಮತ್ತೊಬ್ಬರಿಗೆ ಪ್ರಭಾವ ಬೀರುತ್ತವೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಪ್ರಾಂಶುಪಾಲರಾದ ಮಂಜು, ಉಪನ್ಯಾಸಕರಾದ ಉಮಾ ಶಂಕರ್ ಜೆಲ್ಲಾ ಜನ ಜಾಗೃತಿ ವೇದಿಕೆ ಸದಸ್ಯರಾದ ಬಾಲಮನೋಹರ್, ಧರ್ಮಸ್ಥಳ ಸಂಸ್ಥೆಯ ಜಿಲ್ಲಾ ವಿಚೆಕ್ಷಣ ಅಧಿಕಾರಿ ರಾಜೇಶ್ ದೀಪ, ಶಿಕ್ಷಕರಾದ ರಂಜಿತಾ, ಮೇಲ್ವಿಚಾರಕರಾದ ಅವಿನಾಶ್, ವಲಯದ ಸೇವಾ ಪ್ರತಿನಿಧಿ ಕರುಣಮಾಲ ಸೇರಿದಂತೆ ಮತ್ತಿತರರು ಇದ್ದರು.



# ಬಾಲ ಸ್ವಸ್ಥ ಆರೋಗ್ಯ ಕಾರ್ಯಕ್ರಮ ಸಮರ್ಪಕ ಅನುಷ್ಠಾನಕ್ಕೆ ಸೂಚನೆ



**ಮಂಡ್ಯ:** ರಾಷ್ಟ್ರೀಯ ಬಾಲ ಸ್ವಸ್ಥ್ಯ ಕಾರ್ಯಕ್ರಮ ಅಂಗನವಾಡಿಗಳಲ್ಲಿ 6 ವರ್?ದೊಳಗಿನ ಹಾಗೂ ಸರ್ಕಾರಿ/ ಅನುದಾನಿತ/ ಸರ್ಕಾರಿ ವಸತಿ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ 1 ರಿಂದ 12 ನೇ ತರಗತಿವರಗಿನ ವಿದ್ಯಾರ್ಥಿಗಳ ಆರೋಗ್ಯ ತಪಾಸಣೆಯನ್ನು ವರ್?ಕ್ಕೆ ಎರಡು ಬಾರಿ ನಡೆಸಿ ಆರೋಗ್ಯದಲ್ಲಿ ಯಾವುದೇ ತೊಂದರೆಯಿದ್ದಲ್ಲಿ ಚಿಕಿತ್ಸೆ ನೀಡಲು ಸಹಕಾರಿಯಾಗಿದ್ದು, ಈ ಕಾರ್ಯಕ್ರಮ ಉತ್ತಮ ರೀತಿಯಲ್ಲಿ ಜಿಲ್ಲೆಯಲ್ಲಿ ಅನುಷ್ಠನಗೊಳಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸಿಫ್ ತಿಳಿಸಿದರು.

ಅವರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆರೋಗ್ಯ ಇಲಾಖೆಯ ವಿವಿಧ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದರು. ಕೆಲವು ಕಾಯಿಲೆಗಳು ಮಕ್ಕಳಿಗೆ ಹುಟ್ಟಿನಿಂದ ಬರುತ್ತದೆ. ಕೆಲವು ಪೋ?ಕಾಂಶಗಳ ಕೊರತೆಯಿಂದ ಉಂಟಾಗುತ್ತದೆ. ಇವುಗಳನ್ನು ಪತ್ತೆ ಹಚ್ಚಿ ಚಿಕಿತ್ಸೆ ನೀಡಿದರೆ ಮಕ್ಕಳು ಗುಣಮುಖರಾಗುತ್ತಾರೆ. ವಿದ್ಯಾರ್ಥಿಗಳನ್ನು ವರ್ಷಕ್ಕೆ ಎರಡು ಬಾರಿ ಪರೀಕ್ಷೆಗೆ ಒಳಪಡಿಸುವುದರಿಂದ ಪರೀಕ್ಷೆಯ ಸಂದರ್ಭದಲ್ಲಿ ಮಕ್ಕಳಲ್ಲಿ ಬೆಳವಣಿಗೆಯಲ್ಲಿ ಯಾವುದೇ ತೊಂದರೆ ಇದ್ದಲ್ಲಿ ತಕ್ಷಣ ವರದಿ ಮಾಡಿ ಚಿಕಿತ್ಸೆಗೆ ಒಳಪಡಿಸಿ ಎಂದರು.

ಸಭೆಯಲ್ಲಿ ಡಿಸೆಂಬರ್ 2023 ರಿಂದ ಏಪ್ರಿಲ್ 2024 ರವರೆಗೆ ಹೆರಿಗೆ ಸಂದರ್ಭದಲ್ಲಿ ಮೃತವಾದ ನವಜಾತ ಶಿಶುಗಳ ಕಾರಣ ಕುರಿತು ಪೋಷಕರೊಂದಿಗೆ ಚರ್ಚಿಸಿದರು. ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ: ಮೋಹನ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಜಮೂರ್ತಿ,ಆರ್.ಸಿ.ಹೆಚ್.ಓ ಡಾ: ಅನಿಲ್ ಸೇರಿದಂತೆ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಆರೋಗ್ಯವಂತ ಜನರಿಂದ ದೇಶದ ಅಭಿವೃದ್ಧಿ

**ಮಂಡ್ಯ:** ಹಿಂದಿನ ಕಾಲದಲ್ಲಿ ಭಾರತ ದೇಶದಲ್ಲಿ ಬಡತನವೆಂಬುವುದು ತಲೆ ಎತ್ತಿ ಮೆರೆಯುತ್ತಿತ್ತು ಆದರೆ ಮುಂದಿನ ದಿನಗಳಲ್ಲಿ ಅನಾರೋಗ್ಯವೆಂಬುವುದು ತಲೆ ಎತ್ತಿ ಮೆರೆಯುವ ಪರಿಸ್ಥಿತಿ ಬರಬಹುದು ಎಂದು ಅಪರ ಜಿಲ್ಲಾಧಿಕಾರಿ ಡಾ. ಎಚ್. ಎಲ್. ನಾಗರಾಜ್ ಬೇಸರ ವ್ಯಕ್ತ ಪಡಿಸಿದರು.

ಅವರು ಶನಿವಾರ ಮಂಡ್ಯ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದಲ್ಲಿ ನಡೆದ ವಿಶ್ವ ರಕ್ತದಾನಿಗಳಿಗೆ ಸನ್ಮಾನ ಕಾರ್ಯಕ್ರಮವನ್ನು ಕುರಿತು ಮಾತನಾಡಿದರು.

ನಮ್ಮ ಸುತ್ತಮುತ್ತಲೂ ಆಸ್ಪತ್ರೆಗಳ ಸಂಖ್ಯೆ ಹೆಚ್ಚುತ್ತಿದೆ ಇದರ ಅರ್ಥ ರೋಗಿಗಳ ಸಂಖ್ಯೆ ಹೆಚ್ಚಾಗುತ್ತಿದೆ. ಪ್ರತಿಯೊಬ್ಬರು ಕೂಡ ಉತ್ತಮ ಆರೋಗ್ಯ ವೃದ್ದಿಸಿಕೊಳ್ಳುವ ಬಗ್ಗೆ ಮುಂದಾಗಬೇಕು. ಮನುಷ್ಯರ ಆರೋಗ್ಯದಿಂದ ಇದ್ದರೆ ದೇಶವು ಅಭಿವೃದ್ಧಿ ಹೊಂದುತ್ತದೆ ಎಂದು ಹೇಳಿದರು.

ಉತ್ತಮ ಆರೋಗ್ಯಕ್ಕಾಗಿ ಯುವಜನತೆ ಮೊದಲು ಧೂಮಪಾನ, ಮದ್ಯಪಾನ ಮುಂತಾದ ದುಶ್ಚಟಗಳಿಂದ ದೂರವಿರಿ. ಮಕ್ಕಳು, ಯುವಕ ಯುವತಿಯರು ಹೆಚ್ಚಾಗಿ ತರಕಾರಿ, ಹಣ್ಣು ಸೇರಿದಂತೆ ಹೆಚ್ಚು ಪೋಷಕಾಂಶ ಇರುವ ಆಹಾರ ಸೇವನೆ ಮಾಡಿ ಇದರಿಂದ ಆರೋಗ್ಯ ವೃದ್ದಿ ಆಗುತ್ತದೆ ಹಾಗೂ ಧೈರ್ಯವಾಗಿ ರಕ್ತದಾನ ಮಾಡಿ ಕಷ್ಟದಲ್ಲಿರುವವರ ಜೀವ ಉಳಿಸಬಹುದು ಎಂದು ಹೇಳಿದರು.

ಇಡೀ ದೇಶದಲ್ಲಿ ರಕ್ತ ಹಾಗೂ ರಕ್ತ ದಾನಿಗಳ ಕೊರತೆ ಇದೆ. ರಕ್ತದಾನದಿಂದ ಆರೋಗ್ಯ ಏರುಪೇರು ಆಗುತ್ತದೆ ಎಂಬ ಮನೋಭಾವದಿಂದ ಬಹಳಷ್ಟು ಜನರು ರಕ್ತದಾನ ಮಾಡಲು ಹಿಂಜರಿಯುತ್ತಾರೆ. ಪುನಃ ರಕ್ತದ ಉತ್ಪತ್ತಿ ಆಗುವುದಕ್ಕೆ ತುಂಬಾ ಸಮಯ ತೆಗೆದುಕೊಳ್ಳುತ್ತದೆ ಎಂಬ ಭಯದಿಂದ ಎಷ್ಟೋ ಜನರು ರಕ್ತದಾನ ಮಾಡಲು ಮುಂದೆ ಬರುವುದಿಲ್ಲ. ರಕ್ತದಾನ ಮಾಡುವುದರಿಂದ ಆರೋಗ್ಯದಲ್ಲಿ ಯಾವುದೇ ತೊಂದರೆಯಾಗುವುದಿಲ್ಲ ಎಂದರು.



ರಕ್ತದಾನ ಮಾಡುವುದಕ್ಕೆ ಮುಂದೆ ಬರಲು ಹಿಂಜರಿಯುತ್ತಿರುವವರಿಗೆ ಪ್ರೇರಣೆ ಆಗಬೇಕು ಮತ್ತು ಇದುವರೆಗೂ ರಕ್ತದಾನ ಮಾಡಲು ಮುಂದೆ ಬರದೇ ಇರುವವರು ಮುಂದೆ ಬಂದು ರಕ್ತದಾನ ಮಾಡಬೇಕು ಎಂಬ ಉದ್ದೇಶದಿಂದಲೇ ಸನ್ಮಾನ ಮಾಡುತ್ತಿರುವುದು ಎಂದು ತಿಳಿಸಿದರು.

ರಕ್ತದಾನಿಗಳಿಗೆ ಸನ್ಮಾನ ಸ್ವ ಇಚ್ಛೆಯಿಂದ ಜಿಲ್ಲೆಯಲ್ಲಿ ಅತಿ ಹೆಚ್ಚು ಬಾರಿ ರಕ್ತದಾನ ಮಾಡಿದ ಅನಿಲ್ ರಾಜ್ ಎಚ್ ಸಿ-31 ಬಾರಿ , ತ್ಯಾಗರಾಜ್ ನಾಯ್ಡು ಡಿ -11 ಬಾರಿ, ಕಿರಣ್ ಕುಮಾರ್ ಎನ್- 9 ಬಾರಿ, ಕೆ.ಪಿ. ಕುಮಾರ್ -35 ಬಾರಿ, ಶಶಿಕಲಾ-11 ಬಾರಿ, ಸೃಜನ್ ಗೌಡ-4 ಬಾರಿ ಒಟ್ಟು 6 ಜನರನ್ನು ಸನ್ಮಾನಿಸಲಾಯಿತು.

01 ಜೂನ್ 2023 ರಿಂದ 31 ಮೇ 2024 ರವರೆಗೆ ರಕ್ತದಾನ ಶಿಬಿರ ನಡೆಸಿ 1572 ಯೂನಿಟ್ ರಕ್ತವನ್ನು ಸಂಗ್ರಹಿಸಿದ ಜೀವದಾರೆ ಟ್ರಸ್ಟ್ , 1080 ಯೂನಿಟ್ ರಕ್ತವನ್ನು ಸಂಗ್ರಹಿಸಿದ ಮಳವಳ್ಳಿ ಯುವಕ ಮಿತ್ರ, , 738 ಯೂನಿಟ್ ರಕ್ತವನ್ನು ಸಂಗ್ರಹಿಸಿದ ಪಿ.ಇ.ಎಸ್ ಟ್ರಸ್ಟ್, 541 ಯೂನಿಟ್ ರಕ್ತ ಸಂಗ್ರಹಿಸಿದ ಮದ್ದೂರಿನನಾಲ್ವಡಿ ಕೃಷ್ಣರಾಜ ಒಡೆಯರ್ ಸಂಘ ಮತ್ತು ಸಮಾನ ವಯಸ್ಕರ ವೇದಿಕೆ, 356 ಯೂನಿಟ್ ರಕ್ತವನ್ನು ಸಂಗ್ರಹಿಸಿದ ಬಿ.ಎಸ್.ಯು ಶ್ರೀರಂಗಪಟ್ಟಣ ಸಂಸ್ಥೆ, 1837 ಯೂನಿಟ್ ರಕ್ತವನ್ನು ಸಂಗ್ರಹಿಸಿದ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಮತ್ತು ಆರೋಗ್ಯ ಕುಟುಂಬ ಕಲ್ಯಾಣಾಧಿಕಾರಿ ಡಾ ಮೋಹನ್, ಮಿಮ್ಸ್ ನಿರ್ದೇಶಕರಾದ ಪಿ ನರಸಿಂಹ ಸ್ವಾಮಿ, ರೆಡ್ ಕ್ರಾಸ್ ಸಂಸ್ಥೆಯ ಗೌರವಾಧ್ಯಕ್ಷ ಮೀರಾಶಿವಲಿಂಗಯ್ಯ, ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಎಮ್.ಎನ್ ಆಶಾಲತಾ, ಜಿಲ್ಲಾ ಶಸ್ತ್ರ ಚಿಕಿತ್ಸಕರಾದ ಡಾ.ಗಾಯಿತ್ರಿ, ಜಿಲ್ಲಾ ಆರೋಗ್ಯ ಇಲಾಖೆಯ ತರಬೇತಿ ಕೇಂದ್ರದ ಪ್ರಾಂಶುಪಾಲರಾದ ಡಾ.ಮಮತಾ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಕುಮಾರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಸಂಜೆ ಟಿಪ್ಸ್




# ಮೊಬಿಕ್ಯೂಲ್ ಟೆಕ್ನಾಲಜೀಸ್ ತನ್ನ ಬೆಳವಣಿಗೆ ವೇಗ ನೀಡಿದೆ

ಮುಂಬಯಿ ಮೂಲದ, ಮೊಬಿಕ್ಯೂಲ್ ಟೆಕ್ನಾಲಜೀಸ್ ಪ್ರೈವೇಟ್ ಲಿಮಿಟೆಡ್, ಫೈಜಿಟಲ್ ಸಾಲ ಪರಿಹಾರ ಮತ್ತು ಗ್ರಾಹಕರ ಆನ್‌ಬೋರ್ಡಿಂಗ್‌ನಲ್ಲಿ ಮುಂಚೂಣಿಯಲ್ಲಿರುವ ಸಂಸ್ಥೆಯಾಗಿದ್ದು, ದಕ್ಷಿಣ ಭಾರತದ ಮಾರುಕಟ್ಟೆಯಲ್ಲಿ ತನ್ನ ಕಾರ್ಯತಂತ್ರದ ವಿಸ್ತರಣೆಯನ್ನು ಹೆಮ್ಮೆಯಿಂದ ಘೋಷಿಸುತ್ತದೆ. ಇದು ಫೈಜಿಟಲ್ ಸಾಲ ಪರಿಹಾರ ವಲಯದಲ್ಲಿ ತನ್ನ ಉಪಸ್ಥಿತಿ ಮತ್ತು ಸಾಮರ್ಥ್ಯಗಳನ್ನು ಹೆಚ್ಚಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ಈ ವಿಸ್ತರಣೆಯಲ್ಲಿ ಈ ಪ್ರದೇಶದಲ್ಲಿ ಬೆಳವಣಿಗೆಯನ್ನು ಹೆಚ್ಚಿಸಲು ಮತ್ತು ಸೇವೆಯ ವಿತರಣೆಯನ್ನು ಸುಧಾರಿಸಲು ವಿನ್ಯಾಸಗೊಳಿಸಲಾಗಿರುವ ಬೆಂಗಳೂರಿನಲ್ಲಿ ಏಕೀಕೃತ ಫೈಜಿಟಲ್ ಸಂಪರ್ಕ ಕೇಂದ್ರವನ್ನು ಸ್ಥಾಪಿಸುವುದು ಮತ್ತು ಚೆನ್ನೈನಲ್ಲಿ ಪ್ರಿಂಟ್-ಟು-ಪೋಸ್ಟ್ ಸೌಲಭ್ಯವನ್ನು ಸ್ಥಾಪಿಸುವುದು ಪ್ರಮುಖವಾಗಿದೆ. ಮುಂಬಯಿನಲ್ಲಿ ತನ್ನ ಫೈಜಿಟಲ್ ಸಂಪರ್ಕ ಕೇಂದ್ರ ಮತ್ತು ಇಂಟೆಲಿಜೆಂಟ್ ಪ್ರಿಂಟ್-ಟು ಪೋಸ್ಟ್ ಪರಿಹಾರವನ್ನು ಯಶಸ್ವಿಯಾಗಿ ಪ್ರಾರಂಭಿಸಿದ ನಂತರ, ಮೊಬಿಕ್ಯೂಲ್ ಟೆಕ್ನಾಲಜೀಸ್ ಫಿನ್‌ಟೆಕ್ ವಲಯದಲ್ಲಿ ಗಣನೀಯ ಪ್ರಗತಿಯನ್ನು ಮುಂದುವರಿಸಿದೆ. ಕಂಪನಿಯು ಬ್ಯಾಂಕ್‌ಗಳು ಮತ್ತು ಎನ್‌ಬಿಎಫ್ ಸಿಗಳಿಗೆ ಗ್ರಾಹಕರ ಅನುಭವದ ಕಾರ್ಯತಂತ್ರಗಳನ್ನು ಹೆಚ್ಚಿಸಲು, ಬೌನ್ಸ್ ದರಗಳನ್ನು ಕಡಿಮೆ ಮಾಡಲು ಮತ್ತು ಸುಧಾರಿತ ಬಳಕೆದಾರ ನಡವಳಿಕೆಯ ವಿಶ್ಲೇಷಣೆ, ಅಪಾಯದ ಮೌಲ್ಯಮಾಪನ ಮತ್ತು ಡಿಜಿಟಲ್, ಎಐ- ವರ್ಧಿತ ಮತ್ತು ಭೌತಿಕ ಸಂವಹನ ತಂತ್ರಗಳ ಸಂಯೋಜನೆಯ ಮೂಲಕ ಸಾಲ ಸಂಗ್ರಹಣೆ ಮತ್ತು ಚೇತರಿಕೆಯ ಸಾಮರ್ಥ್ಯವನ್ನು ಸುಧಾರಿಸಲು ಸಿದ್ಧವಾಗಿದೆ. ಬೆಂಗಳೂರಿನ ಕಚೇರಿಯು ದಕ್ಷಿಣ ಭಾರತದಲ್ಲಿ ಮೊಬಿಕ್ಯೂಲ್ ಕಾರ್ಯಾಚರಣೆಗಳಿಗೆ ಪ್ರಮುಖ ಹಬ್ ಆಗಿ ಕಾರ್ಯನಿರ್ವಹಿಸುತ್ತದೆ. ಜತೆಗೆ ಮಾರಾಟ ಮತ್ತು ಬೆಂಬಲ ಕಚೇರಿ ಮತ್ತು ಸಂಪೂರ್ಣ ಏಕೀಕೃತ ಫಿಜಿಟಲ್ ಸಂಪರ್ಕ ಕೇಂದ್ರ ಸೇರಿದಂತೆ ವ್ಯಾಪಕ ಶ್ರೇಣಿಯ ಕಾರ್ಯಗಳನ್ನು ಬೆಂಬಲಿಸುತ್ತದೆ. ಈ ಸೌಲಭ್ಯವು ಟೆಕ್ ತಜ್ಞರು ಮತ್ತು ಡೇಟಾ ವಿಶ್ಲೇಷಕರಿಂದ ಹಿಡಿದು ಗ್ರಾಹಕ ಸೇವಾ ಪ್ರತಿನಿಧಿಗಳು ಮತ್ತು ವ್ಯವಸ್ಥಾಪಕ ಸಿಬ್ಬಂದಿಯವರೆಗೆ ಗಮನಾರ್ಹ ಸಂಖ್ಯೆಯ ಹೊಸ ಉದ್ಯೋಗಿಗಳಿಗೆ ಅವಕಾಶ ಕಲ್ಪಿಸುವ ನಿರೀಕ್ಷೆಯಿದೆ. ಇದು ಸ್ಥಳೀಯ ಪ್ರತಿಭೆ ಮತ್ತು ಆರ್ಥಿಕ ಬೆಳವಣಿಗೆಗೆ ಮೊಬಿಕ್ಯೂಲ್ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ.

# ನುಗ್ಗೆಸೊಪ್ಪಿನ ಅಕ್ಕಿರೊಟ್ಟಿ

## ಪಾಕ ಶಾಲೆ



## ಬೇಕಾಗಿರುವ ಪದಾರ್ಥ

2 ಕಪ್-ನುಗ್ಗೆಸೊಪ್ಪು, 1 ಕಪ್- ಅಕ್ಕಿ ಹಿಟ್ಟು, ಳಿ ಕಪ್- ಸಣ್ಣಕ್ಕೆ ಹೆಚ್ಚಿದ ಈರುಳ್ಳಿ, 2 ಹಸಿಮೆಣಸು-ಸಣ್ಣಕ್ಕೆ ಹೆಚ್ಚಿಕೊಳ್ಳಿ, ರುಚಿಗೆ ತಕ್ಕಷ್ಟು-ಉಪ್ಪು, ಳ ಟೀ ಸ್ಪೂನ್ ಜೀರಿಗೆ, ಕಾಯಿತುರಿ-1/2 ಕಪ್, 1ಕಪ್- ನೀರು.

## ಮಾಡುವ ವಿಧಾನ

ಒಂದು ಪಾತ್ರೆಗೆ ಅಕ್ಕಿ ಹಿಟ್ಟು, ತೆಂಗಿನತುರಿ, ಈರುಳ್ಳಿ, ಜೀರಿಗೆ, ಉಪ್ಪು, ಮೆಣಸಿನಕಾಯಿ, ಸೊಪ್ಪು ಹಾಕಿ ಚೆನ್ನಾಗಿ ಮಿಶ್ರಣ ಮಾಡಿ. ನಂತರ ಗ್ಯಾಸ್ ಮೇಲೆ ನೀರು ಕುದಿಯಲು ಇಡಿ. ಕುದ್ದ ನೀರನ್ನು ಈ ಹಿಟ್ಟಿನ ಮಿಶ್ರಣಕ್ಕೆ ಸ್ವಲ್ಪ ಸ್ವಲ್ಪವೇ ಸೇರಿಸಿ ಕಲಸಿಕೊಳ್ಳಿ. ನಂತರ ಇದನ್ನು 10 ನಿಮಿಷ ಒಂದು ತಟ್ಟೆ ಮುಚ್ಚಿ ಇಟ್ಟುಬಿಡಿ. ಹಿಟ್ಟು ನೀರಾಗಿದ್ದರೆ ಸ್ವಲ್ಪ ಅಕ್ಕಿ ಹಿಟ್ಟು ಸೇರಿಸಿ. ನಂತರ ಕಾದ ತವಾಕ್ಕೆ ಎಣ್ಣೆ ಹಚ್ಚಿ ನಂತರ ಒಂದು ಬಟರ್ ಪೇಪರ್ ಅಥವಾ ಬಾಳೆ ಎಲೆಯ ಮೇಲೆ ರೊಟ್ಟಿ ತಟ್ಟಿ ಅದನ್ನು ತವಾಕ್ಕೆ ಹಾಕಿ ಎರಡು ಕಡೆ ಚೆನ್ನಾಗಿ ಬೇಯಿಸಿಕೊಳ್ಳಿ.

# ರಹಸ್ಯ ಬಿಚ್ಚಿಟ್ಟ ಮಂದಿರಾ ಬೇಡಿ



ಕ್ರಿಕೆಟ್ ಹೋಸ್ಟಿಂಗ್‌ನಲ್ಲಿ ಸಾಕಷ್ಟು ಹೆಸರು ಗಳಿಸಿದ ಮೊದಲ ನಟಿ ಮಂದಿರಾ ಬೇಡಿ. ಆದರೆ ಅಂತಾರಾಷ್ಟ್ರೀಯ ಪಂದ್ಯಗಳನ್ನು ಹೋಸ್ಟ್ ಮಾಡುವುದು ಅಷ್ಟು ಸುಲಭವಾಗಿರಲಿಲ್ಲ. ಅವರು ಅನೇಕ ಬಾರಿ ಸಂಕಷ್ಟಗಳನ್ನು ಎದುರಿಸಬೇಕಾಯಿತು. ಇದೀಗ ನಟಿ ಸಂದರ್ಶನವೊಂದರಲ್ಲಿ ಈ ವಿಷಯವನ್ನು ಬಹಿರಂಗಪಡಿಸಿದ್ದಾರೆ. ಇತ್ತೀಚೆಗೆ ನೀಡಿದ್ದ ಸಂದರ್ಶನದಲ್ಲಿ, ಮಂದಿರಾ ಬೇಡಿ, ಆ ಸಮಯದಲ್ಲಿ ನಮ್ಮಲ್ಲಿ ಸೋಶಿಯಲ್ ಮೀಡಿಯಾ ಇರಲಿಲ್ಲ, ನೀವು ಇಂದು ಜನರ ಕಾಮೆಂಟ್‌ಗಳನ್ನು ನೋಡಬಹುದು. ನಮ್ಮಲ್ಲಿ ಇಂಟರ್ನೆಟ್ ಇತ್ತು, ಆದರೆ ಈಗಿನಂತೆ ಇರಲಿಲ್ಲ. ಕ್ರಿಕೆಟ್ನಲ್ಲಿ ನನ್ನ ಸಮಯದಿಂದ ನಾನು ಕಲಿತದ್ದು ಏನೆಂದರೆ ಜೀವನದಲ್ಲಿ ನಿಮ್ಮನ್ನು ಇಷ್ಟಪಡುವ ಜನರು ಇರುತ್ತಾರೆ, ನಿಮ್ಮನ್ನು ಇಷ್ಟಪಡದ ಜನರು ಇರುತ್ತಾರೆ, ಆದ್ದರಿಂದ ನಿಮ್ಮನ್ನು ಇಷ್ಟಪಡುವ ಜನರಿಗೆ ಕೃತಜ್ಞರಾಗಿರಿ ಮತ್ತು ನಿಮ್ಮನ್ನು ಇಷ್ಟಪಡದವರನ್ನು ಮೆಚ್ಚಿಸಲು ಪ್ರಯತ್ನಿಸಬೇಡಿ. ಎಂದಿದ್ದಾರೆ. ಆಂಕರಿಂಗ್ ಮಾಡಲು ನಿರಂತರವಾಗಿ ಆಫರ್ಗಳು ಬರುತ್ತಿವೆ.. ಆದರೆ ಈ ಕಾರಣದಿಂದ ನಾನು ನಟಿ ಎಂಬುದನ್ನೇ ಎಲ್ಲರೂ ಮರೆತಿದ್ದಾರೆ ನನಗೆ ನಟನೆಯ ಆಫರ್ ಬರುವುದು ನಿಂತಿದೆ. ಎಂಟು ವರ್ಷ ನಟಿಸಿದ್ದೆ ಆದರೆ ಆಯಂಕರಿಂಗ್ ಮಾಡಿದ್ದರಿಂದ ಸಿನಿರಂಗದಲ್ಲಿ ನನ್ನ ನೆನಪಾಗಲಿಲ್ಲ ಎನ್ನುತ್ತಾರೆ ನಟಿ. ಸಂದರ್ಶನದ ಸಮಯದಲ್ಲಿ ಜನರು ಮತ್ತು ಕ್ರಿಕೆಟಿಗರು ನನ್ನತ್ತ ನೋಡುತ್ತಿದ್ದರು, ಇದರಿಂದಾಗಿ ಅವರು ಕೆಲವೊಮ್ಮೆ ಭಯವಾಗುತ್ತಿತ್ತು.. ಎಂದು ಮಂದಿರಾ ಥ್ರೋಬ್ಯಾಕ್ ಸಂದರ್ಶನದಲ್ಲಿ ಬಹಿರಂಗಪಡಿಸಿದ್ದಾರೆ. ಇಷ್ಟೇ ಅಲ್ಲ, ಪಂದ್ಯದ ಪೂರ್ವ ಪ್ರದರ್ಶನದ ವೇಳೆ ಹಲವು ಕ್ರಿಕೆಟಿಗರು ನನ್ನನ್ನು ದಿಟ್ಟಿಸುತ್ತಿದ್ದರು. ಅನೇಕ ಬಾರಿ, ಕ್ರಿಕೆಟಿಗರು ನಮ್ಮ ಪ್ರಶ್ನೆಗಳಿಗೆ ಉತ್ತರಿಸಲು ನಿರಾಕರಿಸಿದ್ದುಂಟು ಇದರಿಂದಾಗಿ ಸಾಕಷ್ಟು ಟೀಕೆಗಳನ್ನು ಎದುರಿಸಬೇಕಾಯಿತು ಎಂದು ಹೇಳಿಕೊಂಡಿದ್ದಾರೆ.

# ನೆಲನೆಲ್ಲಿ ಎಂಬ ಸಂಜೀವಿನಿ..!



ಹೆಲ್ತ್ ಟಿಪ್ಸ್

ನಮ್ಮೆಲ್ಲಾ ಸಣ್ಣ ಪುಟ್ಟ ಅನಾರೋಗ್ಯ ಸಮಸ್ಯೆಗಳಿಂದ ಹಿಡಿದು ದೊಡ್ಡ ದೊಡ್ಡ ಅನಾರೋಗ್ಯಕ್ಕೂ ಆಯುರ್ವೇದದಲ್ಲಿ ಮದ್ದಿದೆ ಎಂಬುದು ನಮಗೆ ತಿಳಿದಿದೆ. ಆದರೆ ಆಯುರ್ವೇದಕ್ಕೂ ಮುನ್ನ ನಮ್ಮ ಮನೆಯಲ್ಲೇ ಒಂದಿಷ್ಟು ಮದ್ದು ಸಿಗುತ್ತದೆ.

ಇಂತಹ ಗಿಡಗಳ ಸಾಲಿನಲ್ಲಿ ನೆಲನೆಲ್ಲಿ ಕುರಿತು ನಾವಿಂದು ತಿಳಿದುಕೊಳ್ಳೋಣ. ನೀವು ನೆಲನೆಲ್ಲಿ ಹೆಸರು ಕೇಳಿರಬಹುದು. ಮನೆಮದ್ದು ಹಾಗೂ ಆಯುರ್ವೇದದಲ್ಲಿ ನೆಲನೆಲ್ಲಿಗೆ ತನ್ನದೇ ಆದ ಮಹತ್ವವಿದೆ. ನೀವು ಎಲ್ಲಿಯಾದರು ನೆಲನೆಲ್ಲಿ ನೋಡಿದರೆ ಅದನ್ನು ರಕ್ಷಿಸುವ ಕಡೆ ಗಮನ ನೀಡಿ. ನೆಲದಿಂದ ಕೆಲವೇ ಅಡಿ ಎತ್ತರಕ್ಕೆ ಈ ಗಿಡ ಬೆಳೆಯುತ್ತದೆ.

ಅಚ್ಚರಿ ಅಂದರೆ ಈ ಗಿಡದ ಎಲೆಗಳ ಬಳಿ ಚಿಕ್ಕ ಚಿಕ್ಕ ಗಾತ್ರ ಕಾಯಿಗಳು ಸಹ ಬಿಡುತ್ತವೆ. ಇದು ಎಷ್ಟು ಚಿಕ್ಕದಾಗಿರುತ್ತೆ ಅಂದರೆ ಸಾಸಿವೆಗಿಂತ ಸ್ವಲ್ಪ ದೊಡ್ಡದಾಗಿರಬಹುದು ಅಷ್ಟೆ. ಆದರೆ ಮೂರ್ತಿ ಚಿಕ್ಕದಾದರು ಕೀರ್ತಿ ದೊಡ್ಡದು ಎಂಬ ಮಾತಿಗೆ ಈ ನೆಲನೆಲ್ಲಿ ಉದಾಹರಣೆಯಾಗಿ ನೀಡಬಹುದು.

ಹೌದು ಈ ನೆಲನೆಲ್ಲಿ ಎಂಬುದು ಹತ್ತು ಹಲವು ಅನಾರೋಗ್ಯ ಸಮಸ್ಯೆಗಳ ನಿವಾರಿಸುವ ಸಂಜೀವಿನಿಯಾಗಿದೆ.

ಮೊದಲು ಈ ನೆಲನೆಲ್ಲಿಯ ಕಷಾಯದ ಕುರಿತು ನಾವು ತಿಳಿದುಕೊಳ್ಳೋಣ. ನಾವು ಕೆಮ್ಮು, ಶೀತ, ಜ್ವರ ಸೇರಿ ಕೆಲವು ಚಿಕ್ಕಪುಟ್ಟ ಕಾಯಿಲೆಗೆ ಮೆಣಸಿನಕಾಳಿನ ಕಷಾಯ ಕುಡಿದಿರುತ್ತೇವೆ. ಅದೇ ರೀತಿ ಈ ನೆಲನೆಲ್ಲಿ ಕಷಾಯ ಸಹ ಈ ಸಣ್ಣ

**ಮಾಡುವುದು ಹೇಗೆ:** ನೆಲನೆಲ್ಲಿಯ ಎಲೆಗಳು, ಕಾಂಡವನ್ನು ಬಿಸಿ ನೀರಿಗೆ ಹಾಕಬೇಕು. ಇದಕ್ಕೆ ಒಂದು ಸಣ್ಣ ಪೀಸ್ ಶುಂಠಿ ಜಜ್ಜಿ ಅದಕ್ಕೆ ಸೇರಿಸಬೇಕು. ಬಳಿಕ ಕಾಳು ಮೆಣಸಿನಪುಡಿ, ಜೀರಿಗೆ ಹಾಕಿ ಸಣ್ಣದಾಗಿ ಕುದಿ ಬರಲು ಬಿಡಬೇಕು. ಇದಕ್ಕೆ ಒಂದು ಚಿಟಿಕೆ ಅರಶಿನ ಹಾಕಿ ಇಳಿಸಿಕೊಂಡರೆ ನಿಮ್ಮ ಮುಂದೆ ಕಷಾಯ ರೆಡಿಯಾಗಿರುತ್ತದೆ.

ಈ ನೆಲನೆಲ್ಲಿಯ ಎಲೆಗಳನ್ನು ಕತ್ತರಿಸಿ ಚೆನ್ನಾಗಿ ಬಿಸಿ ನೀರಿನಲ್ಲಿ ತೊಳೆದು ಬಳಿಕ ಅದನ್ನು ಜ್ಯೂಸ್ ಮಾಡಬೇಕು. ಇದಕ್ಕೆ ಚಿಟಿಕೆ ಅರಶಿನ, ಜೇನುತುಪ್ಪ ಹಾಕಿಕೊಂಡು ಕುಡಿಯುವುದರಿಂದ ರೋಗ ನಿರೋಧಕ ಶಕ್ತಿ ಹೆಚ್ಚಾಗಲಿದೆ. ಅಲ್ಲದೆ ಈ ನೆಲನೆಲ್ಲಿ ಕಿಡ್ನಿ ಸಮಸ್ಯೆಗೆ ಪರಿಹಾರ ನೀಡಲಿದೆ. ಕಿಡ್ನಿಯಲ್ಲಿ ಕಲ್ಲಾಗುವುದು ಸೇರಿ ಹಲವು ಸಮಸ್ಯೆಗೆ ಪರಿಹಾರ ನೀಡಲಿದೆ. ಚಿಕ್ಕಮಕ್ಕಳು ಯಾವಾಗಲು ಸಣ್ಣ ಪುಟ್ಟ ಕಾಯಿಲೆಗೆ ತುತ್ತಾಗುತ್ತಲೇ ಇರುತ್ತಾರೆ. ಕೆಮ್ಮು, ಶಿತ ಯಾವಾಗಲು ಮಕ್ಕಳನ್ನು ಕಾಡುತ್ತಲೇ ಇರುತ್ತದೆ. ಇದಲ್ಲದೆ ಮಕ್ಕಳಲ್ಲಿ ಕಾಣಿಸಿಕೊಳ್ಳುವ ಜಾಂಡೀಸ್, ಜ್ವರಕ್ಕೆ ಈ ನೆಲನೆಲ್ಲಿ ಮನೆಮದ್ದಾಗಿದೆ. ಮೊದಲೇ ಹೇಳಿದಂತೆ ಮಕ್ಕಳಿಗೂ ಇದರ ಕಷಾಯ ಮಾಡಿ ಕುಡಿಸಿದರೆ ಜಾಂಡೀಸ್ಗೆ ಒಳ್ಳೆಯ ಔಷಧಿ, ಆದರೆ ಮಕ್ಕಳಿಗೆ ಮಾಡುವಾಗ ಮೆಣಸಿನ ಪುಡಿ ಕಡಿಮೆ ಹಾಕಬೇಕು.

# ಮದುವೆ ಬಳಿಕ ಆಸ್ಪತ್ರೆಗೆ ಬಂದ ಸೋನಾಕ್ಷಿ- ಹಬ್ಬಿತು ಪ್ರೆಗ್ನೆನ್ಸಿ ಸುದ್ದಿ



ಬಾಲಿವುಡ್ ಬೆಡಗಿ ಸೋನಾಕ್ಷಿ ಸಿನ್ಹಾ ಮದುವೆಯಾಗಿ ಒಂದೇ ವಾರಕ್ಕೆ ಆಸ್ಪತ್ರೆಗೆ ಭೇಟಿ ನೀಡಿರುವುದು ನೆಟ್ಟಿಗರ ಚರ್ಚೆ ಗ್ರಾಸವಾಗಿದೆ. ಸೋನಾಕ್ಷಿ ಪ್ರೆಗ್ನೆನ್ಸಿ ಸುದ್ದಿ ಘೋಷಣೆ ಮಾಡುತ್ತಾರಾ? ಎಂಬ ಅನುಮಾನ ಅಭಿಮಾನಿಗಳಲ್ಲಿ ಮೂಡಿದೆ.

ಹೇಳಿ ಕೇಳಿ ಬಾಲಿವುಡ್‌ನಲ್ಲಿ ಪ್ರೆಗ್ನೆಂಟ್ ಆದ್ಮೇಲೆ ಮದುವೆಯಾಗುವುದು ಟ್ರೆಂಡ್ ಆಗಿದೆ. ರಣ್‌ಬೀರ್ ಕಪೂರ್ ಮತ್ತು ಆಲಿಯಾ ಭಟ್ ಜೋಡಿ, ಹಾರ್ದಿಕ್ ಪಾಂಡ್ಯ ಮತ್ತು ನತಾಶಾ ಜೋಡಿ, ಶ್ರೀದೇವಿ ಮತ್ತು ಬೋನಿ ಕಪೂರ್ ಜೋಡಿ ಸೇರಿದಂತೆ ಅನೇಕರು ಸೆಲೆಬ್ರಿಟಿಗಳು ಈ ಟ್ರೆಂಡ್ ಫಾಲೋ ಮಾಡಿದ್ದಾರೆ.

ಅದರಂತೆ ಸೋನಾಕ್ಷಿ, ಮತ್ತು ಝುಹೀರ್ ಜೋಡಿ ಗುಡ್ ನ್ಯೂಸ್ ಕೊಡ್ತಾರಾ ಎಂದು ಫ್ಯಾನ್ಸ್ ಎದುರು ನೋಡ್ತಿದ್ದಾರೆ. ಇಬ್ಬರೂ ಜೂನ್ 23ರಂದು ತರಾತುರಿಯಲ್ಲಿ ಮದುವೆಯಾದರು. ಇವರ ಮದುವೆ ಗುಟ್ಟಾಗಿ ಕುಟುಂಬಸ್ಥರ ಸಮ್ಮುಖದಲ್ಲಿ ನಡೆಯಿತು. ಪ್ರೆಗ್ನೆಂಟ್ ಆದ ಕಾರಣದಿಂದಲೇ ನಟಿ ಇಷ್ಟು ಆತುರದಲ್ಲಿ ಮದುವೆಯಾದ್ರಾ? ಎನ್ನುವ ಪ್ರಶ್ನೆ ಅನೇಕರಲ್ಲಿ ಮೂಡಿದೆ. ಇದಕ್ಕೆ ಉತ್ತರ ಸಿಗುತ್ತಾ ಕಾಯಬೇಕಿದೆ.

ಅಂದಹಾಗೆ, 7 ವರ್ಷಗಳ ಹಿಂದೆ 2017ರ ಜೂನ್ 23ರಂದು ಪರಸ್ಪರ ನಾವು ಪರಿಶುದ್ಧ ಪ್ರೀತಿಯನ್ನು ಕಂಡೆವು ಮತ್ತು ಅದನ್ನು ಹಿಡಿದಿಟ್ಟುಕೊಳ್ಳಲು ನಿರ್ಧರಿಸಿದ್ದೇವು. ಈಗ ಅದೇ ಪ್ರೀತಿ ನಮಗೆ ಸವಾಲುಗಳನ್ನು ಎದುರಿಸಲು ದಾರಿ ತೋರಿಸಿದೆ. ನಮ್ಮನ್ನು ಈ ಹಂತಕ್ಕೆ ತಂದು ನಿಲ್ಲಿಸಿದೆ ಎಂದು ಸೋನಾಕ್ಷಿ ಮತ್ತು ಝುಹೀರ್ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದರು. ಎರಡು ಕುಟುಂಬದ ಮತ್ತು ದೇವರ ಹಾರೈಕೆಯಿಂದ ನಾವು ಇಂದು ಸತಿ- ಪತಿ ಆಗಿದ್ದೇವೆ ಎಂದು ಕೂಡ ಬರೆದುಕೊಂಡಿದ್ದಾರೆ. ಮಗಳ ಮದುವೆಯ ವೇಳೆ, ಸೋನಾಕ್ಷಿ ಜೊತೆಯೇ ನಿಂತು ತಂದೆ ಶತ್ರುಘ್ನ ಸಿನ್ಹಾ ಸಂಭ್ರಮಿಸಿದ್ದರು.

# ಕುಂಬಳಕಾಯಿಂದ ಪೇಸ್ ಪ್ಯಾಕ್

## ಬ್ಯೂಟಿ ಟಿಪ್ಸ್



ಎಲ್ಲರಿಗೂ ತಮ್ಮ ಕೂದಲು, ಮುಖ ಹೊಳೆಯುತ್ತಿರಬೇಕು ಎಂಬ ಆಸೆ ಇರುತ್ತದೆ. ಹಾಗಾಗಿ ದುಬಾರಿ, ಕ್ರೀಮ್, ಶಾಂಪೂ ತಂದು ಉಪಯೋಗಿಸುತ್ತಾರೆ. ಆದರೆ ಇದು ಕೇವಲ ತಾತ್ಕಾಲಿಕ ಫಲಿತಾಂಶ ನೀಡುತ್ತದೆ. ನೈಸರ್ಗಿಕವಾಗಿ ಸಿಗುವ ಹಣ್ಣು, ತರಕಾರಿಗಳಿಂದ ನಮ್ಮ ದೇಹದ ಸೌಂದರ್ಯವನ್ನು ಹೆಚ್ಚಿಸಿಕೊಳ್ಳಬಹುದು.ಕುಂಬಳಕಾಯಿಂದ ಸಾಂಬಾರು, ಹಲ್ವಾ ಹೀಗೆ ನಾನಾ ತರಹದ ಖಾದ್ಯಗಳನ್ನು ಮಾಡಿಕೊಂಡು ಸವಿಯುತ್ತೇವೆ. ಅದೇ ಕುಂಬಳಕಾಯಿಯಿಂದ ನಮ್ಮ ಸೌಂದರ್ಯವನ್ನು ಕೂಡ ಹೆಚ್ಚಿಸಿಕೊಳ್ಳಬಹುದು. ಇದರಲ್ಲಿ ಸಾಕಷ್ಟು ಪೋಷಕಾಂಶಗಳು ಇವೆ. ನಮ್ಮ ಚರ್ಮ ಹಾಗೂ ಕೂದಲಿನ ಕಾಂತಿಗೆ ಇದು ಹೇಳಿ ಮಾಡಿಸಿದ್ದು. ಮುಖದಲ್ಲಿ ಕಪ್ಪು ಕಲೆ, ಚುಕ್ಕಿಗಳಿದ್ದರೆ ಒಂದು ಟೇಬಲ್ ಸ್ಪೂನ್ ಕುಂಬಳಕಾಯಿ ತಿರುಳು ತೆಗೆದುಕೊಳ್ಳಿ. ಇದನ್ನು ಮಿಕ್ಸಿಯಲ್ಲಿ ಚೆನ್ನಾಗಿ ರುಬ್ಬಿಕೊಳ್ಳಿ. ಇದಕ್ಕೆ 1 ಟೀ ಸ್ಪೂನ್ ಜೇನು ತುಪ್ಪ, 1 ಟೀ ಸ್ಪೂನ್ ಲಿಂಬೆ ಹಣ್ಣಿನ ರಸ, 1 ಟೀ ಸ್ಪೂನ್ ವಿಟಮಿನ್ ಇ ಆಯಿಲ್ ಹಾಕಿ ಚೆನ್ನಾಗಿ ಮಿಕ್ಸ್ ಮಾಡಿ. ನಂತರ ಇದನ್ನು ಮುಖಕ್ಕೆ ಹಚ್ಚಿಕೊಂಡು ಅರ್ಧ ಗಂಟೆ ಬಿಡಿ. ಆಮೇಲೆ ಮುಖ ತೊಳೆಯಿರಿ. ಇದರಿಂದ ನಿಮ್ಮ ಮುಖದ ಅಂದ ಹೆಚ್ಚುತ್ತದೆ. ಇನ್ನು ಒರಟಾದ ಕೂದಲಿಗೆ 2 ಕಪ್ ಬೇಯಿಸಿದ ಕುಂಬಳಕಾಯಿ ಹೋಳಿಗೆ 1 ಟೇಬಲ್ ಸ್ಪೂನ್ ತೆಂಗಿನೆಣ್ಣೆ, 1 ಟೇಬಲ್ ಸ್ಪೂನ್ ಜೇನುತುಪ್ಪ, 1 ಟೇಬಲ್ ಸ್ಪೂನ್ ಮೊಸರು ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ. ನಂತರ ಇದನ್ನು ನಿಮ್ಮ ತಲೆಗೆ ಹಚ್ಚಿಕೊಳ್ಳಿ. 20 ನಿಮಿಷ ಬಿಟ್ಟು ತಣ್ಣೀರಿನಿಂದ ತಲೆ ತೊಳೆದುಕೊಳ್ಳಿರಿ.

# ಶಿವ ಪ್ರಿಯ ಸೋಮವಾರ ಅಪ್ಪಿ-ತಪ್ಪಿಯೂ ಈ ಕೆಲಸ ಮಾಡದಿರಿ!



ಶಿವನ ಆರಾಧನೆಗೆ ಸೋಮವಾರ ಅತ್ಯಂತ ವಿಶೇಷವೆಂದು ಪರಿಗಣಿಸಲಾಗಿದೆ, ಆದರೆ ಇದು ಚಂದ್ರದೇವನ ದಿನವೂ ಆಗಿದೆ. ಆದ್ದರಿಂದ, ಚಂದ್ರನ ದೋಷವನ್ನು ಸರಿಪಡಿಸಲು ಕೂಡ ಸೋಮವಾರ ಪ್ರಾಶಸ್ತ್ಯವಾಗಿದೆ ಎಂದು ಹೇಳಲಾಗುತ್ತದೆ. ಚಂದ್ರ ಗ್ರಹವು ನಮ್ಮ ಮನಸ್ಸು ಮತ್ತು ತಾಯಿಯ ಸಂಕೇತವಾಗಿದೆ.

ಅದರ ಪರಿಹಾರಗಳನ್ನು ತೆಗೆದುಕೊಳ್ಳುವ ಮೂಲಕ, ಅದು ಶಾಂತಿ, ಆರೋಗ್ಯ ಮತ್ತು ಸಮೃದ್ಧಿಯನ್ನು ತರುತ್ತದೆ. ಉಗ್ರ/ಕ್ರೂರ ಸ್ವಭಾವವನ್ನು ಹೊಂದಿರುವವರು ಸೋಮವಾರ ಉಪವಾಸ ಮಾಡಬೇಕು. ಸೋಮವಾರ ಉಪವಾಸ ಮಾಡುವುದರಿಂದ ಅವರಲ್ಲಿನ ಉಗ್ರವಾದ ಮನೋಭಾವ ಕಡಿಮೆಯಾಗುತ್ತದೆ ಎಂಬ ನಂಬಿಕೆ ಇದೆ.

**ಈ ವಿಷಯಗಳಿಗೆ ಸೋಮವಾರ ಶುಭ:** ಮನೆ ನಿರ್ಮಾಣವನ್ನು ಪ್ರಾರಂಭಿಸುವುದರಿಂದ ಹಿಡಿದು ಚಿನ್ನ, ಬೆಳ್ಳಿ ಅಥವಾ ಷೇರು ಮಾರುಕಟ್ಟೆಯಲ್ಲಿ ಹೂಡಿಕೆ ಸೇರಿದಂತೆ ಕೆಲವು ಕೆಲಸಗಳನ್ನು ಪ್ರಾರಂಭಿಸಲು ಸೋಮವಾರ ಬಹಳ ಶುಭವೆಂದು ಪರಿಗಣಿಸಲಾಗಿದೆ. ಆದರೆ ಸೋಮವಾರದಂದು ಮರೆತೂ ಕೂಡ ಕೆಲವು ತಪ್ಪುಗಳನ್ನು ಮಾಡಬಾರದು.

**ಸೋಮವಾರ ಈ ಕೆಲಸಗಳನ್ನು ಅಪ್ಪಿ-ತಪ್ಪಿಯೂ ಮಾಡದಿರಿ:** ಸೋಮವಾರ ಕೆಲವು ಕೆಲಸ ಮಾಡುವುದನ್ನು ನಿಷೇಧಿಸಲಾಗಿದೆ. ಅಂತಹ ಪರಿಸ್ಥಿತಿಯಲ್ಲಿ, ಈ ದಿನ ಈ ಕೆಲಸಗಳನ್ನು ಮಾಡುವುದರಿಂದ ಜೀವನದಲ್ಲಿ ತೊಂದರೆಗಳು ಉಂಟಾಗಬಹುದು. ಆದ್ದರಿಂದ, ಸೋಮವಾರ ಈ ಕೆಲಸಗಳನ್ನು ಮಾಡುವುದನ್ನು ತಪ್ಪಿಸಿ.

ಈ ದಿನ ಸಕ್ಕರೆ ಸೇವಿಸಬೇಡಿ. ಮಧ್ಯಾಹ್ನ ಮಲಗಬೇಡಿ. ಬಿಳಿ ಬಟ್ಟೆ ಅಥವಾ ಹಾಲನ್ನು ಯಾರಿಗೂ ದಾನ ಮಾಡಬೇಡಿ. ಈ ದಿನ ಉತ್ತರ, ಪೂರ್ವ ಮತ್ತು ಆಗ್ನೇಯ ದಿಕ್ಕಿನಲ್ಲಿ ಪ್ರಯಾಣಿಸಬೇಡಿ. ವಿಶೇಷವಾಗಿ, ಪೂರ್ವದಲ್ಲಿ ಇದನ್ನು ಮಾಡಬೇಡಿ.

ಈ ದಿನ ತಾಯಿಯೊಂದಿಗೆ ಯಾವುದೇ ರೀತಿಯ ವಿವಾದ ಮಾಡಬೇಡಿ. ಒಟ್ಟು ದೇವತೆಗಳನ್ನು ಯಾವುದೇ ರೀತಿಯಲ್ಲಿ ಅವಮಾನಿಸಬೇಡಿ. ಇಲ್ಲದಿದ್ದರೆ, ಜೀವನದಲ್ಲಿ ಬಹಳಷ್ಟು ತೊಂದರೆಗಳು ಎದುರಾಗಬಹುದು.ಈ ದಿನ ಬೆಳಿಗ್ಗೆ 7:30 ರಿಂದ 9:00 ರವರೆಗೆ ರಾಹು ಕಾಲ ಇರುತ್ತದೆ. ಆದ್ದರಿಂದ, ಈ ಸಮಯದಲ್ಲಿ ಯಾವುದೇ ಪ್ರಯಾಣ ಅಥವಾ ಇತರ ಶುಭ ಕೆಲಸಗಳನ್ನು ಪ್ರಾರಂಭಿಸಬಾರದು.

ಈ ದಿನ ಶನಿಗೆ ಸಂಬಂಧಿಸಿದ ಆಹಾರವನ್ನು ಸೇವಿಸಬಾರದು. ಉದಾ: ಬದನೆಕಾಯಿ, ಅಲಸಿನಹಣ್ಣು, ಸಾಸಿವೆ ಸೊಪ್ಪು, ಕಪ್ಪು ಎಳ್ಳು, ಉದ್ದು, ಮಸಾಲೆಯುಕ್ತ ತರಕಾರಿಗಳು ಇತ್ಯಾದಿಗಳನ್ನು ಸೇವಿಸಬಾರದು. ಅಲ್ಲದೆ, ಶನಿಗೆ ಸಂಬಂಧಿಸಿದ ಬಟ್ಟೆಗಳನ್ನು ಧರಿಸಬಾರದು. ಉದಾಹರಣೆಗೆ: ಕಪ್ಪು, ನೀಲಿ, ನೇರಳೆ ಅಥವಾ ಕಂದು ಬಣ್ಣದ ಬಟ್ಟೆಗಳನ್ನು ಧರಿಸಬೇಡಿ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

# ರಾಶಿ ಭವಿಷ್ಯ

**ಮೇಷ:** ನೂತನ ಉದ್ಯೋಗ ಲಭ್ಯ, ಆಕಸ್ಮಿಕ ಧನ ಲಾಭ, ನಂಬಿದ ಜನರಿಂದ ಮೋಸ, ಯತ್ನ ಕಾರ್ಯಗಳಲ್ಲಿ ವಿಳಂಬ.

**ವೃಷಭ:** ಸರ್ಕಾರಿ ಕೆಲಸಗಳಲ್ಲಿ ಜಯ, ಗುಪ್ತಾಂಗ ರೋಗಗಳು, ಕೋಪ ಜಾಸ್ತಿ, ಶತ್ರು ಭಾದೆ, ಪುಣ್ಯಕ್ಷೇತ್ರ ದರ್ಶನ.

**ಮಿಥುನ:** ಆರ್ಥಿಕ ಪರಿಸ್ಥಿತಿ ಚೇತರಿಕೆ, ದೂರ ಪ್ರಯಾಣ, ಅಲ್ಪ ಆದಾಯ ಅಧಿಕ ಖರ್ಚು, ವಿರೋಧಿಗಳಿಂದ ಕುತಂತ್ರ.

**ಕಟಕ:** ಮಾನಸಿಕ ನೆಮ್ಮದಿ, ಗುರು ಹಿರಿಯರ ಮಾರ್ಗದರ್ಶನ, ವಾದ ವಿವಾದಗಳಿಂದ ದೂರವಿರಿ, ದೇವತಾ ಕಾರ್ಯ.

**ಸಿಂಹ:** ಪರಿಶ್ರಮಕ್ಕೆ ತಕ್ಕ ಫಲ, ಮುಖ್ಯವಾದ ಕೆಲಸ ನೆರವೇರುವುದು, ವಸ್ತ್ರ ವ್ಯಾಪಾರಿಗಳಿಗೆ ಅಲ್ಪ ಲಾಭ.

**ಕನ್ಯಾ:** ನಿರೀಕ್ಷಿತ ಆದಾಯ, ಅತಿಯಾದ ಮುಂಗೋಪ, ವಿದ್ಯಾರ್ಥಿಗಳಲ್ಲಿ ಶ್ರದ್ಧೆ, ಆರೋಗ್ಯದಲ್ಲಿ ವ್ಯತ್ಯಾಸ ಎಚ್ಚರ.

**ತುಲಾ:** ಯೋಚಿಸಿ ನಿರ್ಧಾರ ಕೈಗೊಳ್ಳಿ, ವಿಶ್ರಾಂತಿ ಇಲ್ಲದ ಕೆಲಸಗಳು, ಶತ್ರು ಭಾದೆ, ಪರರ ಕಷ್ಟಕ್ಕೆ ಸ್ಪಂದಿಸುವಿರಿ.

**ವೃಶ್ಚಿಕ:** ಮಾನಸಿಕ ಒತ್ತಡ, ವಾಹನ ಚಾಲಕರಿಗೆ ತೊಂದರೆ, ಭೂ ಲಾಭ, ಗುಪ್ತ ವಿದ್ಯೆಗಳಲ್ಲಿ ಆಸಕ್ತಿ.

**ಧನಸ್ಸು:** ಆಪ್ತರ ಹಿತನುಡಿ, ಇಷ್ಟ ವಸ್ತುಗಳ ಖರೀದಿ, ಋಣವಿಮೋಚನೆ, ಧಾನ ಧರ್ಮ.

**ಮಕರ:** ಸ್ವಲ್ಪ ಹಣ ಬಂದರೂ ಉಳಿಯುವುದಿಲ್ಲ, ಸ್ತ್ರೀ ಸೌಖ್ಯ, ಸಲ್ಲದ ಅಪವಾದ, ಗೊಂದಲಗಳಿಂದ ಆದಷ್ಟು ದೂರವಿರಿ, ಸ್ಥಳ ಬದಲಾವಣೆ.

**ಕುಂಭ:** ಸ್ವಂತ ಪರಿಶ್ರಮದಿಂದ ಯಶಸ್ಸು, ಮಾತಿಗೆ ಮರುಳಾಗದಿರಿ, ಉತ್ತಮ ಬುದ್ಧಿಶಕ್ತಿ.

**ಮೀನ:** ಅಭಿವೃದ್ಧಿ ಕುಂಠಿತ, ಕೈ ಹಾಕಿದ ಕೆಲಸಗಳಲ್ಲಿ ನಿಧಾನಗತಿ, ಷೇರು ವ್ಯವಹಾರಗಳಲ್ಲಿ ನಷ್ಟ, ಮಿತ್ರರಿಂದ ವಂಚನೆ.

# ವಿಶ್ವ ಜಲವರ್ಣ ತಿಂಗಳು



ಜುಲೈನಲ್ಲಿ ವಿಶ್ವ ಜಲವರ್ಣ ತಿಂಗಳನ್ನು ಜಗತ್ತಿನಾದ್ಯಂತ ಆಚರಿಸಲಾಗುತ್ತದೆ. ಕಲೆ ಯಾವಾಗಲೂ ನಮ್ಮ ಅತ್ಯಂತ ಆತ್ಮೀಯ ಆಲೋಚನೆಗಳು ಮತ್ತು ಭಾವನೆಗಳನ್ನು ವ್ಯಕ್ತಪಡಿಸುವ ಮಾಧ್ಯಮವಾಗಿದೆ. ಮಾನವನ ಭಾವನೆಗಳಿಗೆ ಧ್ವನಿ ನೀಡಲು ಚಿತ್ರಕಲೆ, ಕರಕುಶಲ, ಶಿಲ್ಪಕಲೆಗಳಂತಹ ಮಾಧ್ಯಮಗಳು ಶತಮಾನಗಳಿಂದಲೂ ಇವೆ. ಜಲವರ್ಣ ಚಿತ್ರಕಲೆಯು ಕಲೆಯ ಅತ್ಯಂತ ಪುರಾತನ ರೂಪಗಳಲ್ಲಿ ಒಂದಾಗಿದೆ ಮತ್ತು ಅದರ ಜನಪ್ರಿಯತೆಯು ದೀರ್ಘಕಾಲದವರೆಗೆ ಕಡಿಮೆಯಾಗುವುದಿಲ್ಲ. ಕಲಾ ಪ್ರಕಾರವನ್ನು ಬೆಂಬಲಿಸಲು ಮತ್ತು ಕಲಾ ಶಿಕ್ಷಣಕ್ಕಾಗಿ ಅರಿವು ಮತ್ತು ಹಣವನ್ನು ಸಂಗ್ರಹಿಸಲು ಹವ್ಯಾಸಿಗಳು, ಕಲಾವಿದರು ಮತ್ತು ಶಿಕ್ಷಣತಜ್ಞರು ಈ ತಿಂಗಳನ್ನು ಆಚರಿಸುತ್ತಾರೆ. ಇದು ಸಾಮಾಜಿಕ ಮಾಧ್ಯಮದ ದೊಡ್ಡ ಕಾರ್ಯಕ್ರಮವೂ ಆಗಿದೆ! Doodlewash® ನ ಸೃಷ್ಟಿಕರ್ತ ಮತ್ತು ಸ್ಕೆಚಿಂಗ್ ಸ್ಟಫ್ ಪಾಡ್ಕ್ಯಾಸ್ಟ್ನ ಹೋಸ್ಟ್ ಚಾರ್ಲಿ ಓ ಶೀಲ್ಡ್ಸ್ ಅವರು 2016 ರಲ್ಲಿ ವಿಶ್ವ ಜಲವರ್ಣ ತಿಂಗಳನ್ನು ಸ್ಥಾಪಿಸಿದರು. ಅವರು ಪ್ರಪಂಚದಾದ್ಯಂತದ ಜಲವರ್ಣ ಕಲಾವಿದರ ವ್ಯಾಪಕ ಸಮುದಾಯವನ್ನು ಉತ್ತೇಜಿಸಲು ಮತ್ತು ಒಟ್ಟಿಗೆ ತರಲು ಮೀಸಲಾಗಿರುವ ಬ್ಲಾಗ್ ಮತ್ತು ಸಾಮಾಜಿಕ ಕಲಾವಿದರ ಆಂದೋಲನವನ್ನು ರಚಿಸಿದರು. ಅವರು ಕೆಲವು ಕಲಾ ಸವಾಲುಗಳೊಂದಿಗೆ ಪ್ರಾರಂಭಿಸಿದರು, ಮಾಧ್ಯಮವು ವ್ಯಾಪಕವಾಗಿ ಪ್ರೀತಿಸಲ್ಪಟ್ಟಿದ್ದರೂ ಸಹ, ಅದಕ್ಕೆ ಮೀಸಲಾದ ಯಾವುದೇ ನಿರ್ದಿಷ್ಟ ಆಚರಣೆಗಳಿಲ್ಲ ಎಂದು ಅರಿತುಕೊಂಡರು. ಅದನ್ನು ವಿನಂತಿಸಲು ಅರ್ಜಿಯನ್ನು ಸಲ್ಲಿಸಲಾಯಿತು ಮತ್ತು ರಿಜಿಸ್ಟ್ರಾರ್ಗಳು ಕಾರಣವನ್ನು ಒಪ್ಪಿಕೊಂಡರು ಮತ್ತು ವಿಶ್ವ ಜಲವರ್ಣ ತಿಂಗಳು ಹೇಗೆ ಬಂದಿತು.

ಜಲವರ್ಣ ಚಿತ್ರಕಲೆಯು ಅನೇಕ ಶತಮಾನಗಳ ಹಿಂದಿನ ಇತಿಹಾಸವನ್ನು ಹೊಂದಿದೆ, ಇದು ಇತಿಹಾಸಪೂರ್ವ ಗುಹೆ ಗೋಡೆಗಳ ಮೇಲೆ ಕಂಡುಬರುವ ವರ್ಣಚಿತ್ರಗಳ ಆರಂಭಿಕ ಉದಾಹರಣೆಗಳಾಗಿವೆ. ಪ್ರಾಚೀನ ಸೃಜನಶೀಲ ಅಭಿವ್ಯಕ್ತಿ ಮತ್ತು ಮಾನವ ಸಮಾಜದಲ್ಲಿ ಅದರ ಪ್ರಮುಖ ಪಾತ್ರವನ್ನು ಗಮನಿಸುವುದು ಆಸಕ್ತಿದಾಯಕವಾಗಿದೆ. ಅನಾದಿ ಕಾಲದಿಂದಲೂ, ಕಲೆಯು ನಮ್ಮನ್ನು ಒಟ್ಟುಗೂಡಿಸಲು, ನಮಗೆ ಸ್ಫೂರ್ತಿ ನೀಡಲು ಮತ್ತು ನಮ್ಮ ಕಷ್ಟದ ಸಮಯದಲ್ಲಿ ಭರವಸೆಯನ್ನು ನೀಡಲು ಕಾರಣವಾಗಿದೆ. ಶಿಕ್ಷಣದಲ್ಲಿ ಕಲೆಯೂ ಪ್ರಮುಖ ಪಾತ್ರ ವಹಿಸಿದೆ ಎಂದು ಹೇಳಬೇಕಾಗಿಲ್ಲ. ಒಂದು ವಿಷಯವಾಗಿ ಕಲೆಯು ಸಾಮಾಜಿಕ ಆರ್ಥಿಕ ಅಡೆತಡೆಗಳಿಂದ ಪ್ರಭಾವಿತವಾಗಿರುವ ಪ್ರದೇಶಗಳು ಮತ್ತು ವಿಷಯಗಳಿಗೆ ಸಾರ್ವತ್ರಿಕತೆಯನ್ನು ಉತ್ತೇಜಿಸುವ ಸಮೀಕರಣವಾಗಿ ಕಾರ್ಯನಿರ್ವಹಿಸುತ್ತದೆ. ಆದರೂ, ಶೈಕ್ಷಣಿಕ ಸಂಸ್ಥೆಗಳ ಬಜೆಟ್ ಕಡಿತದ ಸಮಯದಲ್ಲಿ ಕಲಾ ಶಿಕ್ಷಣ ಮತ್ತು ಕಲಾ ತರಗತಿಗಳು ಸಹ ಹೆಚ್ಚಿನ ಹೊರೆಗಳನ್ನು ಹೊಂದಿವೆ ಡೂಡಲ್ವಾಶ್ ಮತ್ತು ವಿಶ್ವ ಜಲವರ್ಣ ತಿಂಗಳು ಕಲಾ ಶಿಕ್ಷಣ ಮತ್ತು ತರಗತಿಗಳಿಗೆ, ಅಗತ್ಯವಿರುವ ಕಲಾವಿದರಿಗೆ ನಿಧಿ ಮತ್ತು ಜಾಗೃತಿ ಮೂಡಿಸಲು ಮತ್ತು ಕಲೆಯ ಮಾಂತ್ರಿಕತೆಯನ್ನು ಇಲ್ಲದಿದ್ದರೆ ಅದನ್ನು ಮುಂದುವರಿಸಲು ಸಾಧ್ಯವಾಗದವರಿಗೆ ತರಲು ಆಶಿಸುತ್ತದೆ.

# ಮೊದಲ ದಿನ ಅಮರನಾಥನ ದರ್ಶನ



**ಶ್ರೀನಗರ:** ಅಮರನಾಥ ಯಾತ್ರೆಯು ಶನಿವಾರ ಪ್ರಾರಂಭವಾಗಿದೆ. ಯಾತ್ರಾರ್ಥಿಗಳು ದಕ್ಷಿಣ ಕಾಶ್ಮೀರ ಹಿಮಾಲಯದಲ್ಲಿ 3,880 ಮೀಟರ್ ಎತ್ತರದಲ್ಲಿರುವ ಗುಹೆಯಲ್ಲಿರುವ ಐಸ್ ಶಿವಲಿಂಗಕ್ಕೆ ಚಾರಣವನ್ನು ಪ್ರಾರಂಭಿಸಿದ್ದಾರೆ.

ಶನಿವಾರ ಆರಂಭವಾದ ಯಾತ್ರೆಯ ಮೊದಲ ದಿನವೇ 13000ಕ್ಕೂ ಹೆಚ್ಚು ಭಕ್ತರು ಅಮರನಾಥ ಗುಹೆಯ ದೇಗುಲದಲ್ಲಿ ದರ್ಶನ ಪಡೆದಿದ್ದಾರೆ.

ಯಾತ್ರಿಗಳ ಬ್ಯಾಚ್‌ಗಳನ್ನು ಬಾಲ್ಟಾಲ್ ಮತ್ತು ನುನ್ವಾನ್ (ಪಹಲ್ಗಾಮ್)ನ ಎರಡು ಮೂಲ ಶಿಬಿರಗಳಿಂದ ಹೊರಡಿಸಲಾಗಿದೆ. ದೇವಾಲಯದ ಮಾರ್ಗಗಳಲ್ಲಿ ವೈದ್ಯಕೀಯ ನೆರವು, ಆಹಾರ ಸರಬರಾಜು ಮತ್ತು ವಿಶ್ರಾಂತಿ ಪ್ರದೇಶಗಳ ಜೊತೆಗೆ ಬಿಗಿಯಾದ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿದೆ.

ಹೆಚ್ಚಿನ ಸಂಖ್ಯೆಯಲ್ಲಿ ಸ್ಥಳೀಯರು ಯಾತ್ರಿಗಳಿಗೆ ಉತ್ತಮ ಅನುಕೂಲತೆಯೊಂದಿಗೆ ತೀರ್ಥಯಾತ್ರೆಗೆ ಸಹಾಯ ಮಾಡುತ್ತಿದ್ದಾರೆ. ಈ ಬಾರಿ ಮಂಜುಗಡ್ಡೆಯಿಂದ ಶಿವನ ಲಿಂಗವು ಸಂಪೂರ್ಣವಾಗಿ ರೂಪುಗೊಂಡಿದೆ ಎಂದು ಭಕ್ತರು ಹೇಳಿದ್ದಾರೆ. ಯಾತ್ರಿಗಳು ಸಾಂಪ್ರದಾಯಿಕ 48 ಕಿಮೀ ಉದ್ದದ ಪಹಲ್ಗಾಮ್ ಬೇಸ್ ಕ್ಯಾಂಪ್ ಬಳಸುತ್ತಾರೆ. ಇದು ಗುಹಾ ದೇವಾಲಯವನ್ನು ತಲುಪಲು 4 ದಿನಗಳನ್ನು ತೆಗೆದುಕೊಳ್ಳುತ್ತದೆ. ಅಮರನಾಥ ಗುಹಾ ದೇಗುಲವನ್ನು ತಲುಪಲು ಯಾತ್ರಾರ್ಥಿಗಳಿಗೆ ಹೆಲಿಕಾಪ್ಟರ್ ಸೇವೆಗಳು ಲಭ್ಯವಿದೆ.

# ದಕ್ಷಿಣ ಸುಡಾನ್‌ನ ಪ್ರಮುಖ ನಗರ ಅರೆಸೇನಾ ಪಡೆ ವಶಕ್ಕೆ



**ಪೋರ್ಟ್‌ಸುಡಾನ್:** ಸುಡಾನ್‌ನ ಸಶಸ್ತ್ರ ಪಡೆಗಳೊಂದಿಗೆ ಕಳೆದ ಒಂದು ವರ್ಷದಿಂದಲೂ ಸಂಘರ್ಷ ಮುಂದುವರಿಸಿರುವ ಅರೆಸೇನಾ ಪಡೆ ಆಗ್ನೇಯ ರಾಜ್ಯದ ರಾಜಧಾನಿಯನ್ನು ವಶಪಡಿಸಿಕೊಂಡಿದ್ದು ಸಾವಿರಾರು ಜನರು ನಗರದಿಂದ ಪಲಾಯನ ಮಾಡಿದ್ದಾರೆ ಎಂದು ವರದಿಯಾಗಿದೆ.

ಸೆನ್ನಾರ್ ರಾಜ್ಯದ ರಾಜಧಾನಿ ಸಿಂಗಾ ನಗರವನ್ನು ನಮ್ಮ ತುಕಡಿಗಳು ವಶಕ್ಕೆ ಪಡೆದಿದ್ದು ನಗರದ ಪ್ರಮುಖ ರಸ್ತೆಗಳಲ್ಲಿ ನಮ್ಮ ಯೋಧರನ್ನು ನಿಯೋಜಿಸಲಾಗಿದೆ ಎಂದು ಅರೆಸೇನಾ ಪಡೆ ' ರ್ಯಾಪಿಡ್ ಸಪೋರ್ಟ್ ಫೋರ್ಸಸ್(ಆರ್‌ಎಸ್‌ಎಸ್) ಘೋಷಿಸಿದೆ. ಪ್ರಮುಖ ರಸ್ತೆಗಳಲ್ಲಿ ಹೋರಾಟ ಮುಂದುವರಿದಿದ್ದು ಸಶಸ್ತ್ರ ಪಡೆಯ ಯುದ್ಧವಿಮಾನಗಳು ನಗರದ ಮೇಲೆ ಹಾರಾಟ ನಡೆಸುತ್ತಿವೆ. ಆತಂಕಗೊಂಡಿರುವ ನಿವಾಸಿಗಳು ಮನೆಯಿಂದ ಪಲಾಯನ ಮಾಡುತ್ತಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳನ್ನು ಉಲ್ಲೇಖಿಸಿ ಎಎಫ್ಪಿ ಸುದ್ದಿಸಂಸ್ಥೆ ವರದಿ ಮಾಡಿದೆ. ಸೇನಾ ಮುಖ್ಯಸ್ಥ ಅಬ್ದುಲ್ ಫತಾಹ್ ಅಲ್ಬುರ್ಹಾನ್‌ಗೆ ನಿಷ್ಠರಾಗಿರುವ ಸಶಸ್ತ್ರ ಪಡೆ ಹಾಗೂ ಮಾಜಿ ಉಪಮುಖ್ಯಸ್ಥ ಮುಹಮ್ಮದ್ ಹಮ್ದನ್ ಡಗಾಲೊಗೆ ನಿಷ್ಠವಾಗಿರುವ ಅರೆಸೇನಾ ಪಡೆಯ ನಡುವೆ 2023ರ ಎಪ್ರಿಲ್‌ನಿಂದ ಸಂಘರ್ಷ ಭುಗಿಲೆದ್ದಿದ್ದು ಸಾವಿರಾರು ಮಂದಿ ಸಾವನ್ನಪ್ಪಿದ್ದು ಲಕ್ಷಾಂತರ ಮಂದಿ ನೆಲೆ ಕಳೆದುಕೊಳ್ಳುವಂತಾಗಿದೆ. ಅರೆಸೇನಾ ಪಡೆಯು ಸುಡಾನ್ ರಾಜಧಾನಿ ಖಾರ್ಟಮ್ನ ಬಹುತೇಕ ಭಾಗ, ದೇಶದ ಮಧ್ಯಭಾಗದಲ್ಲಿರುವ ಅಲ್-ಜಜಿರಾ ರಾಜ್ಯ, ಪಶ್ಚಿಮದ ವಿಶಾಲ ದರ್ಫುರ್ ಪ್ರಾಂತ ಹಾಗೂ ದಕ್ಷಿಣದ ಕೊರ್ಡೊಫಾನ್ ಪ್ರಾಂತದ ಮೇಲೆ ನಿಯಂತ್ರಣ ಸಾಧಿಸಿದೆ ಎಂದು ವರದಿಯಾಗಿದೆ.

# ಬ್ರಿಟನ್ ಪಿಎಂ ಸುನಕ್ ದಂಪತಿಯಿಂದ ಟೆಂಪಲ್ ರನ್!

**ಲಂಡನ್:** ಬ್ರಿಟನ್‌ನಲ್ಲಿ ಜು.4ರಂದು ಸಂಸತ್ ಚುನಾವಣೆ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಪ್ರಧಾನಿ ರಿಷಿ ಸುನಕ್, ಪತ್ನಿ ಅಕ್ಷತಾ ಮೂರ್ತಿ ದೇಗುಲಗಳಿಗೆ ಭೇಟಿ ನೀಡಲು ಆಂಭಿಸಿದ್ದಾರೆ. ಲಂಡನ್ನಲ್ಲಿರುವ ಸ್ವಾಮಿ ನಾರಾಯಣ ಮಂದಿರಕ್ಕೆ ಅವರು ಭೇಟಿ ನೀಡಿ ಪೂಜೆ ಸಲ್ಲಿಸಿದ್ದಾರೆ. ಅನಂತರ ಮಾತಾಡಿದ ರಿಷಿ ಸುನಕ್ ''ನಾನೊಬ್ಬ ಹಿಂದೂ, ನಾನು ನಿಮ್ಮೆಲ್ಲರನ್ನೂ ಇಷ್ಟ ಪಡುತ್ತೇನೆ. ನನಗೆ ಬೇಕಿರುವ ಪ್ರೇರಣೆಯನ್ನು ನಾನು ನನ್ನ ನಂಬಿಕೆಯಿಂದ ಪಡೆದುಕೊಳ್ಳುತ್ತೇನೆ. ಭಗವದ್ಗೀತೆಯ ಮೇಲೆ ಕೈಯಿಟ್ಟು ಪ್ರಮಾಣವಚನ ಸ್ವೀಕರಿಸಿದ್ದು ನನಗೆ ಹೆಮ್ಮೆ ತಂದಿದೆ.ಹಿಂದೂ ನಂಬಿಕೆ ಯಿಂದ ನನಗೆ ಬೇಕಿರುವ ಪ್ರೇರಣೆ ಯನ್ನು ಪಡೆದುಕೊಳ್ಳುತ್ತೇನೆ ಎಂದರು. ಇದೇ ವೇಳೆ, ಬ್ರಿಟನ್ ಪ್ರಧಾನಿ ದೇಗುಲ ಭೇಟಿಯ ಬೆನ್ನಲ್ಲೆ ಯು.ಕೆ. ಸಂಸದ ನೈಜರ್ ಫರಾಜ್ ಅವರ ಬೆಂಬಲಿಗನೊಬ್ಬ ರಿಷಿ ಸುನಕ್ ವಿರುದ್ಧ ಜನಾಂಗೀಯ ನಿಂದನೆ ಮಾಡಿದ್ದಾನೆ. ಈ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ''ವಿಪಕ್ಷಗಳ ಟೀಕೆಯಿಂದ ನೋವಾಗಿದೆ ಮತ್ತು ಕೋಪ ಬಂದಿದೆ ಎಂದು ಹೇಳಿ ದ್ದಾರೆ. ಅವರು ಮಾಡಿದ ಜನಾಂಗೀಯ ನಿಂದನೆಗಳನ್ನು ನಾನು ನೇರವಾಗಿ ಹೇಳ ಲಾಗುವುದಿಲ್ಲ. ಇದು ಅವರ ಸಂಸ್ಕೃತಿ ಯನ್ನು ತೋರಿಸುತ್ತದೆ ಎಂದಿದ್ದಾರೆ.



# ಪಿಎಂ ನರೇಂದ್ರ ಮೋದಿಗೆ ಮದುವೆ ಆಮಂತ್ರಣ ನೀಡಿದ ಮಾಣಿಕ್ಯ ನಟಿ



**ದೆಹಲಿ:** ಕನ್ನಡದ 'ಮಾಣಿಕ್ಯ' ನಟಿ ವರಲಕ್ಷ್ಮಿ ಶರತ್‌ಕುಮಾರ್ ಸದ್ಯ ಮದುವೆಯ ಸಂಭ್ರಮದಲ್ಲಿದ್ದಾರೆ. ಸೌತ್‌ನ ಸ್ಟಾರ್ ನಟ, ನಟಿಯರಿಗೆ ಮದುವೆ ಆಮಂತ್ರಣ ಪತ್ರಿಕೆ ನೀಡೋದ್ರಲ್ಲಿ ಬ್ಯುಸಿಯಿದ್ದ ನಟಿ ಈಗ ಕುಟುಂಬ ಸಮೇತ ಪಿಎಂ ಆಫೀಸ್‌ಗೆ ಭೇಟಿ ನೀಡಿ ನರೇಂದ್ರ ಮೋದಿಗೆ ಮದುವೆ ಆಮಂತ್ರಣ ಪತ್ರಿಕೆ ನೀಡಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ನಟಿ ಮಾಹಿತಿ ಹಂಚಿಕೊಂಡಿದ್ದಾರೆ.

ನಮ್ಮ ಗೌರವಾನ್ವಿತ ಪ್ರಧಾನಿ ನರೇಂದ್ರ ಮೋದಿಜೀ ಅವರನ್ನು ಭೇಟಿ ಮಾಡಿ ನಮ್ಮ ಮದುವೆಗೆ ಅವರನ್ನು ಆಹ್ವಾನಿಸಿದ್ದು ಎಂತಹ ಸೌಭಾಗ್ಯ. ಧನ್ಯವಾದಗಳು ತುಂಬಾ ಆತ್ಮೀಯ ಮತ್ತು ಸ್ವಾಗತಾರ್ಹ ಎಂದು ನಟಿ ಬರೆದುಕೊಂಡಿದ್ದಾರೆ. ನಿಮ್ಮ ಬಿಡುವಿಲ್ಲದ ವೇಳಾಪಟ್ಟಿಯ ಹೊರತಾಗಿಯೂ ನಿಮ್ಮ ಅಮೂಲ್ಯ ಸಮಯವನ್ನು ನಮ್ಮೊಂದಿಗೆ ಕಳೆದಿದ್ದೀರಿ. ನಿಜವಾಗಿಯೂ ನಿಮ್ಮ ಬಗ್ಗೆ ಹೆಚ್ಚು ಗೌರವವಿದೆ. ಇಂತಹ ಕ್ಷಣ ಸಾಧ್ಯ ಮಾಡಿದ ಅಪ್ಪ ಶರತ್ ಕುಮಾರ್ ಮತ್ತು ಅಮ್ಮ ರಾಧಿಕಾ ಶರತ್ ಕುಮಾರ್‌ಗೆ ಧನ್ಯವಾದಗಳು ಎಂದು ಮಾಣಿಕ್ಯ ನಟಿ ವರಲಕ್ಷ್ಮಿ ಸೋಷಿಯಲ್ ಮೀಡಿಯಾದಲ್ಲಿ ಸಂತಸ ವ್ಯಕ್ತಪಡಿಸಿದ್ದಾರೆ.

ವರಲಕ್ಷ್ಮಿ ಮತ್ತು ಉದ್ಯಮಿ ನಿಕೋಲಾಯ್ ಮದುವೆ ಜುಲೈ 2ರಂದು ಥೈಲ್ಯಾಂಡ್‌ನಲ್ಲಿ ಅದ್ದೂರಿಯಾಗಿ ನಡೆಯಲಿದೆ. ನಟಿಯ ನಿವಾಸದಲ್ಲಿ ವಿವಾಹ ಪೂರ್ವ ಕಾರ್ಯಕ್ರಮಗಳು ಅದ್ದೂರಿಯಾಗಿ ನಡೆಯುತ್ತಿದೆ. ಈ ಮದುವೆ ಸಂಭ್ರಮಕ್ಕೆ ಸಾಕ್ಷಿಯಾಗಲು ಸ್ಟಾರ್ ನಟಿ ನಯನತಾರಾ ದಂಪತಿ, ರವಿತೇಜ, ತಮಿಳು ನಟ ಸಿದ್ಧಾರ್ಥ್, ಎ.ಆರ್ ಮುರುಗದಾಸ್, ಮುರಳಿ ಶರ್ಮಾ, ಸಮಂತಾ, ಕನ್ನಡದ ನಟ ಸುದೀಪ್ ಸೇರಿದಂತೆ ಅನೇಕರಿಗೆ ನಟಿ ಆಮಂತ್ರಣ ಪತ್ರಿಕೆ ನೀಡಿದ್ದಾರೆ.ಅಂದಹಾಗೆ, ಮಾಣಿಕ್ಯ ನಟಿ ವರಲಕ್ಷ್ಮಿ ಅವರು ಉದ್ಯಮಿ ನಿಕೋಲಾಯ್ ಜೊತೆ ಮಾರ್ಚ್ 1ರಂದು ನಿಶ್ಚಿತಾರ್ಥ ಅದ್ದೂರಿಯಾಗಿ ಮಾಡಿಕೊಂಡಿದ್ದರು. ಹಲವು ವರ್ಷಗಳ ಪ್ರೀತಿಗೆ ಇಬ್ಬರೂ ಉಂಗುರದ ಮುದ್ರೆ ಒತ್ತಿದ್ದರು.

ಇನ್ನೂ 'ಮಾಣಿಕ್ಯ' ಸಿನಿಮಾದ ನಂತರ ಮತ್ತೆ ಸುದೀಪ್ ಜೊತೆ ನಟಿ ಕೈಜೋಡಿಸಿದ್ದಾರೆ. 'ಮ್ಯಾಕ್ಸ್' ಸಿನಿಮಾದಲ್ಲಿ ನಟಿ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಳ್ಳಿದ್ದಾರೆ.

## ಮೋದಿ ತವರಲ್ಲಿ ಇದೆಂಥಾ ಘಟನೆ ಅಂತ ಕಾಂಗ್ರೆಸ್ ತೀವ್ರ ತರಾಟೆ

# ಭಾರೀ ಮಳೆಗೆ ಕುಸಿದ ರಸ್ತೆ

**ಅಹಮದಾಬಾದ್:** ಇಲ್ಲಿ ಸುರಿದ ಭಾರೀ ಮಳೆಗೆ (ರಸ್ತೆ ಕುಸಿದಿದ್ದು, ಸಂಚಾರಕ್ಕೆ ಅಡ್ಡಿಯುಂಟಾದ ಘಟನೆ ಗುಜರಾತ್‌ನಲ್ಲಿ ನಡೆದಿದೆ. ಈ ನಡುವೆ ಕಾಂಗ್ರೆಸ್ ಆಡಳಿತಾ ರೂಢ ಬಿಜೆಪಿ ಸರ್ಕಾರವನ್ನು ತೀವ್ರ ತರಾಟೆಗೆ ತೆಗೆದುಕೊಂಡಿದೆ.

ಭಾರೀ ಮಳೆಯಿಂದಾಗಿ ತಗ್ಗು ಪ್ರದೇಶಗಳಿಗೆ ನೀರು ನುಗ್ಗಿದೆ. ಈ ವೇಳೆ ನಗರದ ಶೆಲಾ ಪ್ರದೇಶದಲ್ಲಿ ರಸ್ತೆ ದೊಡ್ಡದಾಗಿ ಕುಸಿತಗೊಂಡಿದೆ. ರಸ್ತೆ ಮಧ್ಯೆ ದೊಡ್ಡ ಹೊಂಡವೇ ನಿರ್ಮಾಣವಾದಂತೆ ಕಾಣಿಸುತ್ತಿದೆ. ಈ ಕುರಿತ ವೀಡಿಯೋ ಜಾಲತಾಣದಲ್ಲಿ ಹರಿದಾಡುತ್ತಿದೆ.

ಗುಜರಾತ್‌ನಾದ್ಯಂತ ಭಾರೀ ಮಳೆಯಾಗಿದೆ. ಸೂರತ್, ಭುಜ್, ವಾಪಿ, ಭರೂಚ್ ಮತ್ತು ಅಹಮದಾಬಾದ್‌ನಲ್ಲಿ ನಿರಂತರ ಸುರಿದ ಮಳೆಯಿಂದ ರಸ್ತೆಗಳು ಜಲಾವೃತಗೊಂಡಿವೆ. ಸೂರತ್ ಜಿಲ್ಲೆಯ ಪಲ್ಸಾನಾ ತಾಲೂಕಿನಲ್ಲಿ 153 ಮಿಮೀ ಮಳೆಯಾಗಿದೆ, ಮರಗಳು ಧರೆಗುರುಳಿವೆ, ಕೆಲವೆಡೆ ಅಂಡರ್‌ಪಾಸ್‌ಗಳು ಪ್ರವೇಶಿಸಲಾಗದೇ ವಾಹನ ಸವಾರರು ಪರದಾಡುವಂತಾಗಿತ್ತು. ಮುಂದಿನ ನಾಲ್ಕು ದಿನ ಇದೇ ರೀತಿ ಮಳೆಯ ವಾತಾವರಣ ಮುಂದುವರಿಯಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

**ಕಾಲೆಳೆದ ಕಾಂಗ್ರೆಸ್:** ಇನ್ನೂ ರಸ್ತೆ ಕುಸಿತ ಕಂಡು ರಾಜ್ಯದಲ್ಲಿ ಆಡಳಿತಾರೂಢ ಬಿಜೆಪಿಗೆ ಕಾಂಗ್ರೆಸ್ ಕಾಲೆಳೆದಿದೆ. ಈ ವೀಡಿಯೋವನ್ನು ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದು, ಸ್ಮಾರ್ಟ್ ಸಿಟಿ ಅಹಮದಾಬಾದ್ ನಲ್ಲಿ ಇತ್ತೀಚೆಗೆ ಭೂಗತ ಮಳೆ ನೀರು ಕೊಯ್ಲು ಸೌಲಭ್ಯವನ್ನು ಉದ್ಘಾಟಿಸಲಾಗಿದೆ. ಇಲ್ಲಿಂದ ಒಂದು ಹನಿ ನೀರು ಸಹ ಅರಬ್ಬಿ ಸಮುದ್ರಕ್ಕೆ ಸೋರಿಕೆಯಾಗುವುದಿಲ್ಲ ಎಂದು ಕುಟುಕಿದೆ.



# ಮಾನವರೂಪಿ ರೊಬಟ್ ಸೃಷ್ಟಿಸಿದ ವಿಜ್ಞಾನಿಗಳು

**ಟೋಕಿಯೊ:** ಜೀವಂತ ಚರ್ಮವನ್ನು ಹೊಂದಿರುವ, ಏಲಿಯನ್ಗಳನ್ನು ಹೋಲುವ ರೊಬಟ್‌ಗಳನ್ನು ಜಪಾನ್ನ ವಿಜ್ಞಾನಿಗಳು ಸೃಷ್ಟಿಸಿದ್ದಾರೆ. ಮಣಿಗಳಂತಿರುವ ಕಣ್ಣುಗಳನ್ನು ಹೊಂದಿರುವ ಈ ಮಾನವರೂಪಿ ರೊಬಟ್ಗಳು ನಗಲು ಅನುವು ಮಾಡಿಕೊಡುವ ಜೀವಂತ ಚರ್ಮಗಳನ್ನು ಹೊಂದಿದೆ. ಪ್ರೊಫೆಸರ್ ಶೋಜಿ ಟಕೆಯುಚಿ ನೇತೃತ್ವದ ಸಂಶೋಧಕರ ತಂಡದ ಯಶಸ್ವೀ ಸಂಶೋಧನೆಯನ್ನು ಟೋಕಿಯೊ ವಿವಿ ಘೋಷಿಸಿದೆ. ಮಾನವನ ಚರ್ಮ- ಅಸ್ಥಿರಜ್ಜು ರಚನೆಗಳನ್ನು ಅನುಕರಿಸುವ ಮೂಲಕ ಮತ್ತು ಘನ ವಸ್ತುಗಳಲ್ಲಿ ವಿಶೇಷವಾಗಿ ತಯಾರಿಸಿದ ವಿ ಆಕಾರದ ರಂಧ್ರಗಳನ್ನು ಬಳಸುವ ಮೂಲಕ ಚರ್ಮವನ್ನು ಸಂಕೀರ್ಣ ರಚನೆಗಳಿಗೆ ಬಂಧಿಸುವ ಮಾರ್ಗವನ್ನು ನಾವು ಕಂಡುಕೊಂಡಿದ್ದೇವೆ. ಚರ್ಮದ ನೈಸರ್ಗಿಕ ನಮ್ಯತೆ(ಫ್ಲೆಕ್ಸಿಬಿಲಿಟಿ) ಮತ್ತು ಅಂಟಿಕೊಳ್ಳುವಿಕೆಯ ಬಲವಾದ ವಿಧಾನವು ಚರ್ಮವು ಹರಿದು ಹೋಗದೆ ರೊಬಟ್ನ ಯಾಂತ್ರಿಕ ಘಟಕಗಳೊಂದಿಗೆ ಚಲಿಸಬಹುದು' ಎಂದು ಶೋಜಿ ಟಿಕೆಯುಚಿ ಹೇಳಿದ್ದಾರೆ.



# ದಕ್ಷಿಣದಲ್ಲಿ ಇಸ್ರೇಲ್ ದಾಳಿ: ವರದಿ



**ಗಾಝಾ:** ಉತ್ತರ ಮತ್ತು ದಕ್ಷಿಣ ಗಾಝಾದಲ್ಲಿ ತನ್ನ ಪಡೆಗಳು ಕಾರ್ಯಾಚರಣೆ ತೀವ್ರಗೊಳಿಸಿದ್ದು ಶೆಜೈಯಾ ನಗರದಲ್ಲಿ ನಡೆಸಿದ ನಿಖರ ವೈಮಾನಿಕ ದಾಳಿಯಲ್ಲಿ ಹಮಾಸ್ನ 40 ಸದಸ್ಯರು ಸಾವನ್ನಪ್ಪಿದ್ದಾರೆ ಎಂದು ಇಸ್ರೇಲ್ ಭದ್ರತಾ ಪಡೆ(ಐಡಿಎಫ್) ಹೇಳಿದೆ.

ಉತ್ತರ ಗಾಝಾದ ಶೆಜೈಯಾ ನಗರದಲ್ಲಿ ಮತ್ತು ಮಧ್ಯ ರಾಫಾದಲ್ಲಿ ಇಸ್ರೇಲ್ ಬಾಂಬ್ದಾಳಿಯಲ್ಲಿ ಕನಿಷ್ಟ 6 ಪೆಲೆಸ್ತೀನೀಯರು ಮೃತಪಟ್ಟಿದ್ದು ಹಲವು ಮನೆಗಳು ಧ್ವಂಸಗೊಂಡಿವೆ ಎಂದು ಮಾಧ್ಯಮಗಳು ವರದಿ ಮಾಡಿವೆ. ಉತ್ತರ ಗಾಝಾದಲ್ಲಿ ನಡೆಸಿದ ಕಾರ್ಯಾಚರಣೆಯಲ್ಲಿ ಹಮಾಸ್‌ಗೆ ಭಾರೀ ನಷ್ಟವಾಗಿದ್ದು ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳು, ಮಿಲಿಟರಿ ಮೂಲಸೌಕರ್ಯಗಳನ್ನು ವಶಕ್ಕೆ ಪಡೆಯಲಾಗಿದೆ. ತನ್ನ ಇಬ್ಬರು ಯೋಧರು ಸಾವನ್ನಪ್ಪಿದ್ದಾರೆ ಎಂದು ಐಡಿಎಫ್ ಹೇಳಿದೆ.

ಶೆಜೈಯಾ ಮತ್ತು ರಫಾದಲ್ಲಿ ಭಾರೀ ಹೋರಾಟ ನಡೆಯುತ್ತಿದ್ದು ತನ್ನ ಪಡೆ ಟ್ಯಾಂಕ್ ವಿರೋಧಿ ಕ್ಷಿಪಣಿಗಳನ್ನು ಹಾಗೂ ಮೋರ್ಟರ್ ಬಾಂಬ್‌ಗಳನ್ನು ಪ್ರಯೋಗಿಸಿ ಇಸ್ರೇಲ್ ಪಡೆಯನ್ನು ಹಿಮ್ಮೆಟ್ಟಿಸಿದೆ ಎಂದು ಹಮಾಸ್ ಹೇಳಿದೆ. ಈ ಮಧ್ಯೆ, ಗಾಝಾದಲ್ಲಿ ಕದನ ವಿರಾಮಕ್ಕೆ ನಡೆಸುತ್ತಿರುವ ಸಂಧಾನ ಪ್ರಯತ್ನ ಇದುವರೆಗೆ ಫಲ ನೀಡಿಲ್ಲ. ಯಾವುದೇ ಕದನ ವಿರಾಮ ಒಪ್ಪಂದವು ಯುದ್ಧವನ್ನು ಅಂತ್ಯಗೊಳಿಸುವ ಮತ್ತು ಗಾಝಾದಿಂದ ಇಸ್ರೇಲ್ನ ಪಡೆಗಳ ಸಂಪೂರ್ಣ ಹಿಂದೆ ಸರಿಯುವ ಅಂಶವನ್ನು ಹೊಂದಿರಬೇಕು ಎಂದು ಹಮಾಸ್ ಆಗ್ರಹಿಸುತ್ತಿದೆ.

# ಭಯೋತ್ಪಾದನಾ ನಿಗ್ರಹ ಯಶಸ್ಸಿಗೆ ಶಸ್ತ್ರಾಸ್ತ್ರ ನೀಡುವಂತೆ ಅಮೆರಿಕಕ್ಕೆ ಪಾಕ್ ಮನವಿ

**ಪಾಕಿಸ್ತಾನ:** ಪಾಕಿಸ್ತಾನವು ಹೊಸದಾಗಿ ಜಾರಿಗೆ ತರಲು ಉದ್ದೇಶಿಸಿರುವ ಭಯೋತ್ಪಾದನಾ ನಿಗ್ರಹ ಯೋಜನೆಯಾದ 'ಅಜಮ್-ಇ-ಇಶ್ತೆಕಾಮ್' ಯಶಸ್ಸಿಗಾಗಿ ಸಣ್ಣ ಮತ್ತು ಅತ್ಯಾಧುನಿಕ ಶಸ್ತಾಸ್ತ್ರಗಳನ್ನು ಪೂರೈಸಬೇಕು ಎಂದು ಪಾಕಿಸ್ತಾನದ ರಾಯಭಾರಿ ಮಸೂದ್ ಖಾನ್ ಅಮೆರಿಕಕ್ಕೆ ಮನವಿ ಮಾಡಿದ್ದಾರೆ. 'ದೇಶದಲ್ಲಿನ ಉಗ್ರರ ಜಾಲವನ್ನು ನಿಷ್ಕ್ರಿಯಗೊಳಿಸಲು ಪಾಕಿಸ್ತಾನವು 'ಅಜಮ್-ಇ-ಇಶ್ತೆಕಾಮ್' ಕಾರ್ಯಾಚರಣೆ ಆರಂಭಿಸಿದ್ದು, ಅದಕ್ಕಾಗಿ ನಮಗೆ ಸಣ್ಣ ಶಸ್ತ್ರಾಸ್ತ್ರಗಳು ಮತ್ತು ಸಂವಹನ ಸಾಧನಗಳ ಅಗತ್ಯವಿದೆ' ಎಂದು ಖಾನ್ ಹೇಳಿದ್ದಾಗಿ 'ಡಾನ್' ಪತ್ರಿಕೆ ವರದಿ ಮಾಡಿದೆ. ವಾಷಿಂಗ್ಟನ್‌ನ ವಿಲ್ಸನ್ ಸೆಂಟರ್ನಲ್ಲಿ ಕಳೆದ ವಾರ ನಡೆದ ಅಮೆರಿಕದ ನೀತಿ ನಿರೂಪಕರು, ವಿದ್ವಾಂಸರು, ಬೇಹುಗಾರರು ಮತ್ತು ಕಾರ್ಪೊರೇಟ್ ಮುಖಂಡರ ಸಭೆಯಲ್ಲಿ ಅವರು ಈ ಮನವಿ ಮಾಡಿದ್ದಾರೆ.



# ಮಂದಿರದ ಕಳಪೆ ಕಾಮಗಾರಿ, ರಾಮನಿಗೆ ಮಾಡಿದ ಅಪಮಾನ - ಸಂಸದ ಟೀಕೆ





**ಉತ್ತರ ಪ್ರದೇಶ:** ಕಳೆದೆರಡು ದಿನಗಳಿಂದ ಅಯೋಧ್ಯದಲ್ಲಿ ನಿರಂತರವಾಗಿ ಮಳೆ ಸುರಿಯುತ್ತಿದ್ದು, ಪರಿಣಾಮ ರಾಮಪಥ ಸಂಪೂರ್ಣ ಜಲಾವೃತಗೊಂಡಿದೆ. ಇದು ರಾಮನ ಹೆಸರಿಗೆ ಅವಮಾನ ಎಂದು ಎಸ್ಪಿ ಸಂಸದ ಅವಧೇಶ್ ಪ್ರಸಾದ್ ಹೇಳಿದ್ದಾರೆ.

ಈ ಬಗ್ಗೆ ಮಾತನಾಡಿದ ಅವರು, ಅಯೋಧ್ಯೆಯ ರಾಮಪಥ ಸಂಪೂರ್ಣ ಜಲಾವೃತವಾಗಿದೆ.

ಭಗವಾನ್ ರಾಮನ ಹೆಸರಿನಲ್ಲಿ ಭ್ರಷ್ಟಾಚಾರ ನಡೆದಿದೆ ಎಂಬುದಕ್ಕೆ ಉತ್ತಮ ಉದಾಹರಣೆ ಎಂದಿದ್ದಾರೆ.

ಜೂನ್ 23 ಮತ್ತು 25ರಂದು ಸುರಿದ ಮಳೆಗೆ ರಾಮಪಥ ಸೇರಿದಂತೆ ಬಳಿ ಇದ್ದ ಮನೆಗಳಿಗೂ ನೀರು ನುಗ್ಗಿತ್ತು. 14 ಕಿಲೋಮೀಟರ್ ಉದ್ದದ ರಸ್ತೆಯಲ್ಲಿ 12 ಕ್ಕೂ ಹೆಚ್ಚಿನ ಕಡೆ ಕುಸಿದಿದೆ ಎಂದು ಅವಧೇಶ್ ಪ್ರಸಾದ್ ಹೇಳಿದ್ದಾರೆ.

ಲೋಕೋಪಯೋಗಿ ಇಲಾಖೆ ಮತ್ತು ಜಲ ನಿಗಮದ ಕಾರ್ಯನಿರ್ವಾಹ ಕಿರಿಯ ಎಂಜಿನಿಯರ್ಗಳನ್ನು ಅಮಾನತುಗೊಳಿಸಲಾಗಿದೆ. ಅಹಮದಾ ಇನ್ಸಾ ಕಾಮ್ ಪ್ರೈ. ಲಿಮಿಟೆಡ್ಗೂ ರಾಜ್ಯ ಸರ್ಕಾರ ನೋಟಿಸ್ ಜಾರಿಗೊಳಿಸಲಾಗಿದೆ. ರಾಮಪಥ ನಿರ್ಮಾಣಗೊಂಡು ಕೆಲವೇ ತಿಂಗಳುಗಳಲ್ಲಿ ಹಲವು ಭಾಗಕ್ಕೆ ಹಾನಿಯಾಗಿದೆ. ಇದು ಕಾಮಗಾರಿಯ ನಿರ್ಲಕ್ಷ್ಯವನ್ನು ತೋರಿಸುತ್ತದೆ. ಇದರಿಂದ ಸರ್ಕಾರದ ಘನತೆಗೆ ದಕ್ಕೆ ತಂದಿದೆ ಎಂದು ಅವಧೇಶ್ ಪ್ರಸಾದ್ ಆಕ್ರೋಶ ಹೊರಹಾಕಿದ್ದಾರೆ.

# ಹಿರಿಯ ನಟ ಶತ್ರುಘ್ನ ಸಿನ್ಹಾ ಆಸ್ಪತ್ರೆಗೆ ದಾಖಲು!

**ಮುಂಬೈ:** ಬಾಲಿವುಡ್ ಖ್ಯಾತ ಹಿರಿಯ ನಟ ಹಾಗೂ ರಾಜಕಾರಣಿ ಶತ್ರುಘ್ನ ಸಿನ್ಹಾ (77) ಆರೋಗ್ಯದಲ್ಲಿ ಏರುಪೇರಾಗಿದ್ದು, ಅವರನ್ನು ಮುಂಬೈನ ಕೋಕಿಲಾಬೆನ್ ಧೀರೂಭಾಯಿ ಅಂಬಾನಿ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ತಿಳಿದುಬಂದಿದೆ. ಕಳೆದೆರಡು ದಿನಗಳಿಂದ ಅವರಿಗೆ ವೈರಲ್ ಜ್ವರ ಮತ್ತು ವೀಕ್ನೆಸ್ (ದೌರ್ಬಲ್ಯ) ಸಮಸ್ಯೆ ಕಂಡುಬಂದಿದ್ದು, ಈ ಹಿನ್ನೆಲೆಯಲ್ಲಿ ಇಂದು ದಿಢೀರನೇ ಅವರಿಗೆ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ನಟನ ಪುತ್ರ ಲುವ್ ಸಿನ್ಹಾ ಅವರು ಖಚಿತ ಪಡಿಸಿದ್ದಾರೆ. ಶತ್ರುಘ್ನ ಸಿನ್ಹಾ ಅವರ ಪುತ್ರಿ ಹಾಗೂ ಖ್ಯಾತ ನಟಿ ಸೋನಾಕ್ಷಿ ಸಿನ್ಹಾ ಅವರು ಜೂ.23ರಂದು ಜಹೀರ್ ಇಕ್ಬಾಲ್ ಎಂಬುವವರೊಡನೆ ವಿವಾಹ ಆಗಿದ್ದು ಗೊತ್ತೇ ಇದೆ.






# ಉಡಾವಣೆಯಾದ ಕೆಲವೇ ಕ್ಷಣಗಳಲ್ಲಿ ಸ್ಫೋಟ

**ಬೀಜಿಂಗ್:** ಸ್ಪೇಸ್ ಪಯೋನೀಯರ್ ಎಂದೂ ಕರೆಯಲ್ಪಡುವ ಬೀಜಿಂಗ್ ಟಿಯಾನ್ಬಿಂಗ್ ಟೆಕ್ನಾಲಜಿ ಕಂಪನಿ ತನ್ನ ಟಿಯಾನ್ಲಾಂಗ್ -3 ರಾಕೆಟ್ನ ಪರೀಕ್ಷೆಯ ಸಮಯದಲ್ಲಿ ರಚನಾತ್ಮಕ ವೈಫಲ್ಯವನ್ನು ಅನುಭವಿಸಿತು, ಇದರಿಂದಾಗಿ ಮೊದಲ ಹಂತವು ಉಡಾವಣಾ ಪ್ಯಾಡ್ನಿಂದ ಬೇರ್ಪಟ್ಟು ಚೀನಾದ ಗೊಂಗ್ಯಿಯ ಗುಡ್ಡಗಾಡು ಪ್ರದೇಶದಲ್ಲಿ ಅಪಘಾತಕ್ಕೀಡಾಯಿತು.

ಈ ಘಟನೆಯ ನಂತರ ರಾಕೆಟ್ ಹೊತ್ತಿ ಉರಿದಿದೆ. ನಂತರ ಅದನ್ನು ನಂದಿಸಲಾಯಿತು. ಈ ಘಟನೆಯು ಅಸಾಮಾನ್ಯವಾಗಿದೆ, ಏಕೆಂದರೆ ಇದು ಅಭಿವೃದ್ಧಿಯಲ್ಲಿರುವ ರಾಕೆಟ್ ಯೋಜಿತವಲ್ಲದ ಹಾರಾಟವನ್ನು ಮಾಡಿ ಅಪಘಾತಕ್ಕೀಡಾಗುವುದನ್ನು ಒಳಗೊಂಡಿದೆ. ಸ್ಪೇಸ್ ಪಯೋನೀರ್ ಇತ್ತೀಚಿನ ವರ್ಷಗಳಲ್ಲಿ ಹೊರಹೊಮ್ಮಿದ ಹಲವಾರು ಖಾಸಗಿ ಚೀನೀ ರಾಕೆಟ್ ತಯಾರಕರಲ್ಲಿ ಒಂದಾಗಿದೆ, ಮಿಷನ್ ವೆಚ್ಚವನ್ನು ಕಡಿಮೆ ಮಾಡಲು ಮರುಬಳಕೆ ಮಾಡಬಹುದಾದ ರಾಕೆಟ್ಗಳ ಮೇಲೆ ಕೇಂದ್ರೀಕರಿಸಿದೆ.

ರಾಕೆಟ್ ಹಂತದ ಭಾಗಗಳನ್ನು ಸುರಕ್ಷಿತ ಪ್ರದೇಶದಲ್ಲಿ ಚದುರಿಸಲಾಗಿದೆ, ಆದರೆ ಅದು ಸ್ಥಳೀಯ ಬೆಂಕಿಗೆ ಆಹುತಿಯಾಗಿದೆ ಎಂದು ಗೊಂಗ್ಯಿ ತುರ್ತು ನಿರ್ವಹಣಾ ಬ್ಯೂರೋದ ಹೇಳಿಕೆ ತಿಳಿಸಿದೆ ಎಂದು ಸುದ್ದಿ ಸಂಸ್ಥೆ ರಾಯಿಟರ್ಸ್ ವರದಿ ಮಾಡಿದೆ.

# ಉತ್ತರ ಕೊರಿಯಾದಲ್ಲಿ ಮದುವೆ ಉಡುಪು, ಜೀನ್ಸ್ ನಿಷೇಧ!

**ಕೊರಿಯಾ:** ಫ್ಯಾಷನ್, ಸಂಗೀತ ಮತ್ತು ಭಾಷೆ ಸೇರಿದಂತೆ ದಕ್ಷಿಣ ಕೊರಿಯಾದಿಂದ ಪ್ರಭಾವಿತವಾಗಿದೆ ಎಂದು ಪರಿಗಣಿಸಲಾದದ್ದನ್ನು ಉತ್ತರ ಕೊರಿಯಾ ವ್ಯಾಪಕವಾಗಿ ದಮನ ಮಾಡುತ್ತಿದೆ ಎಂದು ಹೊಸ ವರದಿಯನ್ನು ದಕ್ಷಿಣ ಕೊರಿಯಾದ ಏಕೀಕರಣ ಸಚಿವಾಲಯ ಬಿಡುಗಡೆ ಮಾಡಿದೆ.ನೆರೆಯ ದೇಶಗಳ ನಡುವೆ ಉದ್ವಿಗ್ನತೆ ಹೆಚ್ಚುತ್ತಿರುವ ಸಂದರ್ಭದಲ್ಲಿ ದಕ್ಷಿಣ ಕೊರಿಯಾ ಈ ವರದಿಯನ್ನು ಬಿಡುಗಡೆ ಮಾಡಿದೆ. ಮದುವೆಯಲ್ಲಿ ಬಿಳಿ ಉಡುಪನ್ನು ಧರಿಸುವುದು ಅಥವಾ ವರನು ವಧುವನ್ನು ಎತ್ತುವುದು, ವೈನ್ ಗ್ಲಾಸ್ಗಳಿಂದ ಮದ್ಯಪಾನ ಮಾಡುವುದು ದಕ್ಷಿಣ ಕೊರಿಯಾದ ಸಂಪ್ರದಾಯಗಳು ಎಂದು ಪರಿಗಣಿಸುತ್ತಾರೆ. ಹೀಗಾಗಿ ಈ ರೀತಿಯ ಸಂಸ್ಕೃತಿಯನ್ನು ಉತ್ತರ ಕೋರಿಯಾ ಹತೋಟಿಯಲ್ಲಿಡಲು ಕಾರ್ಯಮಗ್ನರಾಗಿದೆ. ಅದೇ ರೀತಿ ಜೀನ್ಸ್, ಸನ್ಗ್ಲಾಸ್ನಂತಹ ಕೆಲವು ಫ್ಯಾಷನ್ ವಸ್ತುಗಳನ್ನು ಪ್ರತಿ ಕ್ರಾಂತಿಕಾರಿ ಎಂದು ಪರಿಗಣಿಸಲಾಗಿದೆ ಎಂದು ವರದಿ ತಿಳಿಸಿದೆ. ಆದರೆ ಈ ಉಲ್ಲಂಘನೆಗಳಿಗೆ ಶಿಕ್ಷೆ ಯಾವುದು ಎನ್ನುವುದು ಅಸ್ಪಷ್ಟವಾಗಿದೆ.

ದಕ್ಷಿಣ ಕೊರಿಯಾದ ಸಿನಿಮಾ ರೀತಿಯ ಮನರಂಜನೆಯನ್ನು ವೀಕ್ಷಿಸುವುದು ಅಥವಾ ವಿತರಿಸುವುದನ್ನು 2020ರ ಕಾನೂನು ಗಂಭೀರವಾಗಿ ಪರಿಣಮಿಸುತ್ತದೆ. ಇದರ ಬೆನ್ನಲ್ಲೇ 2022ರಲ್ಲಿ ದಕ್ಷಿಣ ಕೋರಿಯಾದ ಹಾಡನ್ನು ಕೇಳಿದ್ದ ಹಾಗೂ ಸಿನಿಮಾವನ್ನು ವೀಕ್ಷಿಸಿದ್ದ ಯುವಕನನ್ನು ಸಾರ್ವಜನಿಕವಾಗಿ ಗಲ್ಲಿಗೇರಿಸಲಾಗಿತ್ತು.



# ದಕ್ಷಿಣ ಕೊರಿಯ ಹಾಡು ಕೇಳಿದ ಯುವಕನ ಶಿರಚ್ಛೇದ!

**ಸಿಯೋಲ್:** ಕೆ-ಪಾಪ್ ಹಾಡು ಕೇಳಿದ ಅಪರಾಧಕ್ಕೆ ಉತ್ತರ ಕೊರಿಯಾದಲ್ಲಿ ಸಾರ್ವಜನಿಕವಾಗಿ 22 ವರ್ಷದ ಯುವಕನ ಶಿರಚ್ಛೇದ ಮಾಡದಲಾಗಿದೆ ಎಂದು ದಕ್ಷಿಣ ಕೊರಿಯಾದ ಏಕೀಕರಣ ಸಚಿವಾಲಯ ಬಿಡುಗಡೆಗೊಳಿಸಿದ ಮಾನವ ಹಕ್ಕುಗಳ ವರದಿಯಲ್ಲಿ ಹೇಳಿದೆ. ವರದಿಯ ಪ್ರಕಾರ, ದಕ್ಷಿಣ ಹ್ವಾಂಗೇ ಪ್ರಾಂತದ ಯುವಕನೊಬ್ಬ 70 ಕೊರಿಯನ್ ಹಾಡುಗಳು, 3 ಸಿನೆಮಾ ನೋಡಿದ್ದು ಹಾಗೂ ಹಂಚಿಕೊಂಡಿದ್ದಕ್ಕಾಗಿ 2022ರಲ್ಲಿ, ಉತ್ತರ ಕೊರಿಯಾ ಆಡಳಿತ ಆತನ ಶಿರಚ್ಛೇದ ಮಾಡಿದೆ. ಉತ್ತರ ಕೊರಿಯಾದಲ್ಲಿ 2020ರಲ್ಲಿ ಜಾರಿಗೆ ತರಲಾದ ಪ್ರತಿಗಾಮಿ ಸಿದ್ಧಾಂತ ಹಾಗೂ ಸಂಸ್ಕೃತಿ ಕಾನೂನನ್ನು ಯುವಕ ಉಲ್ಲಂ ಸಿದ್ದಾನೆ ಎಂದು ಈ ಶಿಕ್ಷೆ ನೀಡ ಲಾಗಿದೆ. ಈ ಕಾನೂನಿನ ಪ್ರಕಾರ ದಕ್ಷಿಣ ಕೊರಿಯಾದ ಪಾಪ್ ಸಂಸ್ಕೃತಿಯನ್ನು ಉತ್ತರ ಕೊರಿಯಾ ನಿರ್ಬಂಧಿಸಿದೆ. ಪಾಶ್ಚಾತ್ಯರ ಭ್ರಷ್ಟ ಸಂಸ್ಕೃತಿಯಿಂದ ಉತ್ತರ ಕೊರಿಯನ್ನರನ್ನು ರಕ್ಷಿಸುವ ಅಭಿಯಾನದ ಭಾಗವಾಗಿ ಈ ಕಾನೂನನ್ನು ತರಲಾಗಿದೆ. ಕೆ-ಪಾಪ್, ಕೆ-ಡ್ರಾಮಗಳು ದಕ್ಷಿಣ ಕೊರಿಯಾದ ಮನೋರಂಜನ ಕ್ಷೇತ್ರದ ಭಾಗವಾಗಿದ್ದು, ಇವು ಇತ್ತೀಚಿನ ವರ್ಷ ಗಳಲ್ಲಿ ಇಡೀ ವಿಶ್ವವನ್ನು ತನ್ನತ್ತ ಸೆಳೆದಿದೆ.



ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ಕಲ್ಕಿ 2898 ಎಡಿ' ಸಿನಿಮಾ ಭಾರತ ಚಿತ್ರರಂಗವನ್ನು ಮತ್ತೊಂದು ಹಂತಕ್ಕೆ ಕೊಂಡೊಯ್ದಿದೆ ಎಂದ ರಜನಿಕಾಂತ್





'ಕಲ್ಕಿ 2898 ಎಡಿ' ಸಿನಿಮಾ ಎಲ್ಲ ಕಡೆಗಳಲ್ಲಿ ಹವಾ ಮಾಡುತ್ತಿದೆ. ಈ ಚಿತ್ರ ನೋಡಿದವರು ಮೆಚ್ಚುಗೆ ಸೂಚಿಸುತ್ತಿದ್ದಾರೆ. ಸಿನಿಮಾ ನೋಡಿ ಅನೇಕರು ತಮ್ಮ ಅಭಿಪ್ರಾಯ ಹಂಚಿಕೊಳ್ಳುತ್ತಿದ್ದಾರೆ. ಈಗ ನಟ ರಜನಿಕಾಂತ್ ಅವರ ಸರದಿ. ಅವರು 'ಕಲ್ಕಿ 2898 ಎಡಿ' ಚಿತ್ರವನ್ನು ವೀಕ್ಷಿಸಿದ್ದಾರೆ. ಜೊತೆಗೆ ನಿರ್ದೇಶಕನ ಕಾರ್ಯ ವೈಖರಿ ಬಗ್ಗೆ ಮೆಚ್ಚುಗೆ ಸೂಚಿಸಿದ್ದಾರೆ.

'ಕಲ್ಕಿ 2898 ಎಡಿ' ಸಿನಿಮಾ ಸೈನ್ಸ್ ಫಿಕ್ಷನ್ ಶೈಲಿಯಲ್ಲಿ ಮೂಡಿ ಬಂದಿದೆ. ಸಂಪೂರ್ಣ ಕಲ್ಪನಾತ್ಮಕವಾಗಿ ಚಿತ್ರ ಮೂಡಿ ಬಂದಿದೆ. ಈ ಸಿನಿಮಾದಲ್ಲಿ ಇರೋ ಗ್ರಾಫಿಕ್ಸ್ ಹಾಗೂ ವಿಶ್ಯುವಲ್ಸ್ ಗಮನ ಸೆಳೆದಿದೆ. ಈ ಕಾರಣಕ್ಕೆ ಜನರಿಗೆ ಈ ಚಿತ್ರ ಸಖತ್ ಇಷ್ಟ ಆಗಿದೆ. ಸಾಮಾನ್ಯರಿಂದ ಹಿಡಿದು ಸೆಲೆಬ್ರಿಟಿಗಳವರೆಗೆ ಅನೇಕರು ಚಿತ್ರವನ್ನು ಮೆಚ್ಚಿಕೊಂಡಿದ್ದಾರೆ. ರಜನಿಕಾಂತ್ ಅವರಿಗೂ ಚಿತ್ರ ಇಷ್ಟ ಆಗಿದೆ. 'ಕಲ್ಕಿ ಸಿನಿಮಾ ನೋಡಿದೆ. ಎಂತಹ ಅದ್ಭುತ ಸಿನಿಮಾ. ನಾಗ್ ಅಶ್ವಿನ್ ಅವರು ಭಾರತೀಯ ಚಿತ್ರರಂಗವನ್ನು ಮತ್ತೊಂದು ಹಂತಕ್ಕೆ ಕರೆದುಕೊಂಡು ಹೋಗಿದ್ದಾರೆ. ಅಶ್ವಿನಿ ದತ್, ಅಮಿತಾಭ್ ಬಚ್ಚನ್, ಪ್ರಭಾಸ್, ಕಮಲ್ ಹಾಸನ್, ದೀಪಿಕಾ ಪಡುಕೋಣೆ ಹಾಗೂ ತಂಡಕ್ಕೆ ಅಭಿನಂದನೆ. ಎರಡನೇ ಪಾರ್ಟ್ ಗಾಗಿ ಕಾಯುತ್ತಿದ್ದೇನೆ. ದೇವರು ಒಳ್ಳೆಯದು ಮಾಡಲಿ' ಎಂದು ಅವರು ಕೋರಿದ್ದಾರೆ.

'ಕಲ್ಕಿ 2898 ಎಡಿ' ಸಿನಿಮಾಗೆ ನಾಗ್ ಅಶ್ವಿನ್ ನಿರ್ದೇಶನ ಮಾಡಿದ್ದಾರೆ. ಪ್ರಭಾಸ್, ದೀಪಿಕಾ ಪಡುಕೋಣೆ, ಕಮಲ್ ಹಾಸನ್ ಮೊದಲಾದವರು ನಟಿಸಿದ್ದಾರೆ. ಈ ಚಿತ್ರದ ಬಜೆಟ್ 600 ಕೋಟಿ ರೂಪಾಯಿ. ಈಗಾಗಲೇ ಸಿನಿಮಾದ ಗಳಿಕೆ ಭರ್ಜರಿಯಾಗಿ ಸಾಗುತ್ತಿದೆ. ಇದು ತಂಡದ ಖುಷಿ ಹೆಚ್ಚಿಸಿದೆ.

# ಹಿಂದೆ ತಪ್ಪು ಮಾಡಿರುವುದಾಗಿ ಒಪ್ಪಿಕೊಂಡ ನಟಿ ಸಮಂತಾ



ನಟಿ ಸಮಂತಾ ವಿಚ್ಛೇದನದ ಬಳಿಕ ಸಿನಿಮಾ ಹಾಗೂ ವೈಯಕ್ತಿಕ ಜೀವನದಲ್ಲಿ ಬಹಳ ಭಿನ್ನ ಹಾದಿ ತುಳಿದಿದ್ದಾರೆ. ವಿಚ್ಛೇದನದ ಆರಂಭದಲ್ಲಿ ಸಾಮಾಜಿಕ ನಿಂದನೆಗೆ ಒಳಗಾಗಿದ್ದ ನಟಿ ಸಮಂತಾ ಆ ನಂತರ ಅದರಿಂದ ಹೇಗೋ ಹೊರಬಂದರು. ಅದಾದ ಬಳಿಕ ಅವರಿಗೆ ತೀವ್ರ ಆರೋಗ್ಯ ಸಮಸ್ಯೆಗಳು ಕಾಡಲು ಆರಂಭಿಸಿತು. ಅನಾರೋಗ್ಯದ ನಡುವೆಯೂ ಸತತ ಚಿತ್ರೀಕರಣದಲ್ಲಿ ಪಾಲ್ಗೊಂಡಿದ್ದ ನಟಿ ಸಮಂತಾ ಕಳೆದ ಒಂದು ವರ್ಷದಿಂದ ಸಿನಿಮಾದಿಂದ ಬಿಡುವು ಪಡೆದು ವೈಯಕ್ತಿಕ ಆರೋಗ್ಯದ ಕಡೆಗೆ ಗಮನ



ಹರಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿಯೂ ಸಕ್ರಿಯರಾಗಿರುವ ಸಮಂತಾ, ಹಿಂದೆ ತಾವು ಮಾಡಿರುವ ತಪ್ಪಿನ ಬಗ್ಗೆ ಮಾತನಾಡಿದ್ದಾರೆ.

ಸ್ವತಃ ಸತತ ಅನಾರೋಗ್ಯಕ್ಕೆ ತುತ್ತಾಗಿದ್ದ ನಟಿ ಸಮಂತಾ ವ್ಯಾಯಾಮ, ಆಹಾರ ಕ್ರಮದ ಬದಲಾವಣೆಗಳಿಂದ ಮತ್ತೆ ಆರೋಗ್ಯವಂತರಾದರು. ಸಿನಿಮಾಗಳಿಂದ ಬಿಡುವು ಪಡೆದಿದ್ದ ಸಮಂತಾ ಈ ಸಮಯದಲ್ಲಿ ಪಾಡ್ ಕಾಸ್ಟ್ ಒಂದನ್ನು ಆರಂಭಿಸಿ ಆರೋಗ್ಯ ಮತ್ತು ಆಹಾರದ ಬಗ್ಗೆ ವಿವಿಧ ವಿಷಯಗಳನ್ನು ಹಂಚಿಕೊಳ್ಳಲು ಆರಂಭಿಸಿದರು. ವಿಶೇಷವಾಗಿ ಆಹಾರ ಕ್ರಮದ ಬದಲಾವಣೆ, ಗಟ್ ಆರೋಗ್ಯದ ಮಹತ್ವದ ಬಗ್ಗೆ ತಜ್ಞರೊಟ್ಟಿಗೆ ಚರ್ಚಿಸುತ್ತಿರುತ್ತಾರೆ. ಈ ಪಾಡ್ ಕಾಸ್ಟ್ ಗೆ ಟೇಕ್ 20 ಎಂದು ಹೆಸರಿಟ್ಟಿದ್ದಾರೆ.

ಪಾಡ್ ಕಾಸ್ಟ್ ನಲ್ಲಿ ಆರೋಗ್ಯಕ್ಕೆ ಅವಶ್ಯಕವಾದ ಆಹಾರ ಪದ್ಧತಿಗಳ ಬಗ್ಗೆ ಮಾತನಾಡಿದ್ದಾರೆ. ಆದರೆ ಸಮಂತಾರ ಅಭಿಮಾನಿಯೊಬ್ಬ, 'ನೀವು ಈಗ ಆರೋಗ್ಯಕರ ಆಹಾರ ಪದ್ಧತಿ ಬಗ್ಗೆ ಮಾತನಾಡುತ್ತೀರಿ ಆದರೆ ನೀವೇ ಆರೋಗ್ಯಕರವಲ್ಲದ ಆಹಾರ, ತಿನಿಸು, ಪೇಯಗಳ ಜಾಹೀರಾತು ನೀಡಿದ್ದೀರಿ ಇದು ಸರಿಯೇ ' ಎಂದು ಪ್ರಶ್ನೆ ಮಾಡಿದ್ದಾರೆ. ಕಮೆಂಟ್ ನಲ್ಲಿ ಬಂದ ಅಭಿಮಾನಿಯ ಪ್ರಶ್ನೆಯನ್ನು ಗಂಭೀರವಾಗಿ ತೆಗೆದುಕೊಂಡಿರುವ ನಟಿ ಸಮಂತಾ, ಪ್ರಶ್ನೆಗೆ ಉತ್ತರ ಸಹ ನೀಡಿದ್ದಾರೆ.

'ಹೌದು, ನಾನು ಈ ಹಿಂದೆ ಕೆಲವು ತಪ್ಪುಗಳನ್ನು ಮಾಡಿದ್ದೇನೆ ಅದಕ್ಕೆ ಕಾರಣ ಆಗ ನನಗೆ ಅದರ ಬಗ್ಗೆ ಹೆಚ್ಚೇನೂ ಗೊತ್ತಿರಲಿಲ್ಲ. ಆದರೆ ಈಗ ಅದೆಲ್ಲ ತಿಳಿದ ಬಳಿಕ ನಾನು ಆ ರೀತಿಯ ಜಾಹೀರಾತು ಬ್ರ್ಯಾಂಡ್ ಗಳೊಟ್ಟಿಗೆ ಒಪ್ಪಂದ ಮಾಡಿಕೊಳ್ಳುವುದನ್ನೇ ನಿಲ್ಲಿಸಿದ್ದೇನೆ. ನಾನು ಏನು ಹೇಳುತ್ತೇನೆಯೋ ಅದರಂತೆ ಬದುಕಲು ಇಷ್ಟಪಡುತ್ತೇನೆ. ಆಡಿದ ಮಾತನ್ನು ಪಾಲಿಸುವುದರಲ್ಲಿ ವಿಶ್ವಾಸವಿಟ್ಟಿದ್ದೇನೆ. ದೇವರು ಒಳಿತು ಮಾಡುವ ವಿಶ್ವಾಸವಿದೆ' ಎಂದಿದ್ದಾರೆ ಸಮಂತಾ.

ಸಮಂತಾ ಇದೀಗ ಬ್ರೇಕ್ ಬಳಿಕ ಮತ್ತೆ ಚಿತ್ರರಂಗಕ್ಕೆ ವಾಪಸ್ಸಾಗಿದ್ದಾರೆ. 'ಮಾ ಇಂಟಿ ಬಂಗಾರಂ' ಸಿನಿಮಾದಲ್ಲಿ ನಟಿಸಲಿದ್ದಾರೆ. ಸಿನಿಮಾದ ಪೋಸ್ಟರ್ ಬಿಡುಗಡೆ ಆಗಿದೆ. 'ದಿ ಫ್ಯಾಮಿಲಿ ಮ್ಯಾನ್' ಹೊಸ ಸೀಸನ್ ನಲ್ಲಿ ಸಮಂತಾ ನಟಿಸಲಿದ್ದಾರೆ. ಪ್ರಾಜೆಕ್ಟ್ ಗಳು ಘೋಷಣೆ ಆಗಿವೆ ಆದರೆ ಇನ್ನೂ ಚಿತ್ರೀಕರಣ ಪ್ರಾರಂಭವಾಗಿಲ್ಲ.



# ಬಿಡುಗಡೆ ಆಗಲಿದೆ 'ಗೌರಿ' ಸಿನಿಮಾ

ಇಂದ್ರಜಿತ್ ಲಂಕೇಶ್ ನಿರ್ದೇಶನ ಮಾಡಿ ಅವರ ಪುತ್ರ, ಸಮರ್ಜಿತ್ ಮೊದಲ ಬಾರಿ ನಾಯಕ ನಟನಾಗಿ ನಟಿಸಿರುವ 'ಗೌರಿ' ಸಿನಿಮಾ ಪ್ರಾರಂಭವಾದಾಗಿನಿಂದಲೂ ವಿವಿಧ ಕಾರಣಕ್ಕೆ ಗಮನ ಸೆಳೆಯುತ್ತಲೇ ಇದೆ. ಭಿನ್ನವಾಗಿ ನಾಯಕ-ನಾಯಕಿಯ ಫೋಟೊಶೂಟ್ ಮಾಡಿಸಿದ್ದ ನಿರ್ದೇಶಕ ಇಂದ್ರಜಿತ್ ಲಂಕೇಶ್ ತಮ್ಮ ಮಗನನ್ನು ಅದ್ಧೂರಿಯಾಗಿ ಲಾಂಚ್ ಮಾಡುತ್ತಿದ್ದು, ಪ್ರಚಾರವನ್ನೂ ಸಹ ಜೋರಾಗಿಯೇ ಮಾಡುತ್ತಿದ್ದಾರೆ. ಇದೀಗ ಕೊನೆಗೂ ಸಿನಿಮಾದ ಬಿಡುಗಡೆ ದಿನಾಂಕ ಘೋಷಣೆ ಮಾಡಿದ್ದಾರೆ.




ಈಗಾಗಲೇ ಸಾಕಷ್ಟು ಕುತೂಹಲ ಹುಟ್ಟಿಸಿರುವ ಗೌರಿ ಸಿನಿಮಾ ಯಾವಾಗ ಬಿಡುಗಡೆ ಆಗಲಿದೆ ಎಂದು ಪ್ರಚಾರಕ್ಕೆ ಹೋದಾಗಲೆಲ್ಲ ಪ್ರಶ್ನೆ ಎದುರಾಗಿತ್ತು. ಇದೀಗ ಕುತೂಹಲಕ್ಕೆ ತೆರೆ ಎಳೆದಿರುವ ಇಂದ್ರಜಿತ್ ಲಂಕೇಶ್ ಸಿನಿಮಾ ಬಿಡುಗಡೆ ದಿನಾಂಕ ಘೋಷಣೆ ಮಾಡಿದ್ದಾರೆ. ಅದೂ ವಿಶೇಷವಾದ ದಿನದಂದು ಸಿನಿಮಾ ಬಿಡುಗಡೆ ಮಾಡಲು ಇಂದ್ರಜಿತ್ ಮುಂದಾಗಿದ್ದಾರೆ.

ಸಮರ್ಜಿತ್ ಹಾಗೂ ಬಿಗ್ ಬಾಸ್ ಚೆಲುವೆ ಸಾನ್ಯಾ ಐಯ್ಯರ್ ಒಟ್ಟಿಗೆ ನಟಿಸಿರುವ 'ಗೌರಿ' ಚಿತ್ರ ಆಗಸ್ಟ್ 15 ಅದ್ದೂರಿಯಾಗಿ ಬಿಡುಗಡೆ ಆಗುತ್ತಿದೆ. ಇಂದು ಬೆಂಗಳೂರಿನ ಎಂಇಎಸ್ ಕಾಲೇಜಿನಲ್ಲಿ ಅದ್ಧೂರಿಯಾಗಿ ಕಾರ್ಯಕ್ರಮ ಮಾಡುವ ಮೂಲಕ ಸಿನಿಮಾ ಬಿಡುಗಡೆ ದಿನಾಂಕ ಘೋಷಿಸಿದೆ. ಸ್ವಾತಂತ್ರ್ಯ ದಿನಾಚರಣೆಯ ದಿನ ಸಿನಿಮಾವನ್ನು ಚಿತ್ರಮಂದಿರಕ್ಕೆ ಬಿಡುಗಡೆ ಮಾಡಲಿದೆ ಚಿತ್ರತಂಡ. ಕಾರ್ಯಕ್ರಮದಲ್ಲಿ ಸಿನಿಮಾದ ನಾಯಕ-ನಾಯಕಿ ವಿದ್ಯಾರ್ಥಿಗಳೊಂದಿಗೆ ಕುಣಿದು-ಕುಪ್ಪಳಿಸಿ ಎಂಜಾಯ್ ಮಾಡಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ನಿರ್ದೇಶಕ ಇಂದ್ರಜಿತ್ ಲಂಕೇಶ್ 'ಆಗಸ್ಟ್ 15 ರಂದು ಸಿನಿಮಾ ಬಿಡುಗಡೆ ಮಾಡುತ್ತಿದ್ದೇವೆ. ಒಳ್ಳೆಯ ದಿನ ಪ್ರೇಕ್ಷಕರನ್ನು ಮತ್ತೆ ಚಿತ್ರಮಂದಿರಕ್ಕೆ ಕರೆತರುವ ಪ್ರಯತ್ನ ಮಾಡುತ್ತಿದ್ದೇವೆ. 'ಕನ್ನಡದ ಯುವ ಪ್ರತಿಭೆಗಳನ್ನು ಬೆಳಸಿ. ಎಲ್ಲಾ ಒಳ್ಳೆಯ ಕನ್ನಡ ಸಿನಿಮಾಗಳನ್ನು ಪ್ರೋತ್ಸಾಹಿಸಿ ಎಂದು ಮನವಿ ಮಾಡಿದರು.

ಸಿನಿಮಾದ ನಾಯಕ ಸಮರ್ಜಿತ್ ಮಾತನಾಡಿ, 'ಕನಸು ನನಸಾದ ಸಮಯ ಇದು. ನನ್ನ ಮೊದಲ ಸಿನಿಮಾವನ್ನು ದಯವಿಟ್ಟು ಎಲ್ಲರೂ ನೋಡಿ ಬೆಂಬಲಿಸಿ' ಎಂದು ಮನವಿ ಮಾಡಿದರು. ನಾಯಕಿ ಸಾನ್ಯಾ ಐಯ್ಯರ್ ಸಹ ಮಾತನಾಡಿ ಸಿನಿಮಾಕ್ಕೆ ಬೆಂಬಲಿಸಿ ಎಂದರು.

## ವಿಶ್ವಕಪ್ ಗೆದ್ದ ಹಾರ್ದಿಕ್ ಪಾಂಡ್ಯ

# ಪತ್ನಿ ನತಾಶಾ ಫುಲ್ ಸೈಲೆಂಟ್






ಬಾರ್ಬಡೋಸ್ ನಲ್ಲಿ ನಡೆದ ಟಿ20 ವಿಶ್ವಕಪ್ ಫೈನಲ್ ಪಂದ್ಯದಲ್ಲಿ ಸೌತ್ ಆಫ್ರಿಕಾ ತಂಡವನ್ನು ಮಣಿಸಿ ಟೀಮ್ ಇಂಡಿಯಾ ವಿಶ್ವ ಚಾಂಪಿಯನ್ ಪಟ್ಟ ಅಲಂಕರಿಸಿದೆ. ಈ ಮೂಲಕ 17 ವರ್ಷಗಳ ಬಳಿಕ ಭಾರತ ತಂಡವು ಮತ್ತೊಮ್ಮೆ ಟಿ20 ಟ್ರೋಫಿ ಮುಡಿಗೇರಿಸಿಕೊಳ್ಳುವಲ್ಲಿ ಯಶಸ್ವಿಯಾಗಿದೆ.

ಈ ವಿಶ್ವಕಪ್ ವಿಜಯದ ಹಿಂದೆ ಟೀಮ್ ಇಂಡಿಯಾದ ಸಾಂಘಿಕ ಪ್ರದರ್ಶನ ಇರುವುದಂತು ನಿಜ. ಅದರಲ್ಲೂ ಫೈನಲ್ ಪಂದ್ಯದಲ್ಲಿ ವಿರಾಟ್ ಕೊಹ್ಲಿ ಹಾಗೂ ಅಕ್ಷರ್ ಪಟೇಲ್ ಅವರ ಅದ್ಭುತ ಬ್ಯಾಟಿಂಗ್, ಜಸ್ ಪ್ರೀತ್ ಬುಮ್ರಾ, ಅರ್ಷದೀಪ್ ಸಿಂಗ್ ಹಾಗೂ ಹಾರ್ದಿಕ್ ಪಾಂಡ್ಯ ಅವರ ಅತ್ಯುತ್ತಮ ಬೌಲಿಂಗ್ ಭಾರತ ತಂಡದ ಗೆಲುವಿನಲ್ಲಿ ಪ್ರಮುಖ ಪಾತ್ರವಹಿಸಿತ್ತು.

ಅದರಲ್ಲೂ ಅಂತಿಮ ಓವರ್ ನಲ್ಲಿ ಕೇವಲ 8 ರನ್ ಮಾತ್ರ ನೀಡುವ ಮೂಲಕ ಹಾರ್ದಿಕ್ ಪಾಂಡ್ಯ ಟೀಮ್ ಇಂಡಿಯಾಗೆ 7 ರನ್ ಗಳ ರೋಚಕ ಜಯ ತಂದುಕೊಟ್ಟರು. ಈ ಗೆಲುವಿನ ಬೆನ್ನಲ್ಲೇ ಪಾಂಡ್ಯ ಮೈದಾನದಲ್ಲೇ ಬಿಕ್ಕಳಿಸುತ್ತಾ ಕಣ್ಣೀರಿಟ್ಟಿದ್ದರು.

ಆದರೆ ಇತ್ತ ಪತಿಯ ಈ ಸಾಧನೆಯ ಬಗ್ಗೆ ಪತ್ನಿ ನತಾಶಾ ಸ್ಟಾಂಕೋವಿಕ್ ಒಂದು ಒಂದು ಮೆಚ್ಚುಗೆ ವ್ಯಕ್ತಪಡಿಸಿಲ್ಲ ಎಂಬುದು ಅಚ್ಚರಿ. ಸೋಷಿಯಲ್ ಮೀಡಿಯಾದಲ್ಲಿ ಆ ಯಕ್ಟೀವ್ ಆಗಿದ್ದರೂ ನತಾಶಾ ಟಿ20 ವಿಶ್ವಕಪ್ ಗೆದ್ದಿರುವ ಪತಿ ಹಾರ್ದಿಕ್ ಪಾಂಡ್ಯಗೆ ಯಾವುದೇ ಅಭಿನಂದನೆ ಸಲ್ಲಿಸಿಲ್ಲ.

ಇದರೊಂದಿಗೆ ಹಾರ್ದಿಕ್ ಪಾಂಡ್ಯ ಹಾಗೂ ನತಾಶಾ ಸ್ಟಾಂಕೋವಿಕ್ ನಡುವೆ ಎಲ್ಲವೂ ಸರಿಯಿಲ್ಲ. ಇಬ್ಬರೂ ಬೇರೆ ಬೇರೆಯಾಗಿ ವಾಸಿಸುತ್ತಿದ್ದಾರೆ ಎಂಬುದು ಖಚಿತವಾಗಿದೆ. ಅಲ್ಲದೆ ಶೀಘ್ರದಲ್ಲೇ ಇಬ್ಬರು ಡೈವೋರ್ಸ್ ಆಗಲಿದ್ದಾರೆ ಎಂಬ ಸುದ್ದಿ ಇದೀಗ ಮಹತ್ವ ಪಡೆದುಕೊಂಡಿದೆ.




ಒಟ್ಟಿನಲ್ಲಿ ಜೊತೆಯಾಗಿ ಜೊತೆಯಾಗಿ ಜನುಮದ ಜೋಡಿಯಂತೆ ಕಾಣಿಸಿಕೊಳ್ಳುತ್ತಿದ್ದ ಹಾರ್ದಿಕ್ ಪಾಂಡ್ಯ-ನತಾಶಾ ಸ್ಟಾಂಕೋವಿಕ್ ನಡುವೆ ಎಲ್ಲವೂ ಸರಿಯಿಲ್ಲ ಎಂಬುದು ಇದೀಗ ಮತ್ತೊಮ್ಮೆ ಬಹಿರಂಗವಾಗಿದೆ. ಈ ಸರಿಯಿಲ್ಲದಿರುವುದನ್ನು ಸರಿಪಡಿಸಿಕೊಂಡು ಈ ಜೋಡಿ ಮತ್ತೆ ಜೊತೆಯಾಗಿ ಬಾಳಲಿದ್ದಾರೆ ಎಂಬ ನಿರೀಕ್ಷೆ ದಿನದಿಂದ ದಿನಕ್ಕೆ ಹುಸಿಯಾಗುತ್ತಿರುವುದಂತು ಸುಳ್ಳಲ್ಲ.

## ವಾಲ್ಮೀಕಿ ನಿಗಮದ ಹಗರಣಕ್ಕೆ ಹವಾಲಾ ಲಿಂಕ್!

# ಎಸ್ಐಟಿ ತನಿಖೆಯಲ್ಲಿ ಬಯಲು

**ಬೆಂಗಳೂರು:** ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ ವರ್ಗಾವಣೆಯಾಗಿದ್ದ ಬಹುಕೋಟಿ ಹಣ ಹವಾಲಾ ಮಾರ್ಗದ ಮೂಲಕ ಹೈದರಾಬಾದ್ ಗ್ಯಾಂಗ್ ಕೈಸೇರಿದೆ ಎಂಬ ಮಾಹಿತಿ ಎಸ್ ಐಟಿ ತನಿಖೆ ವೇಳೆ ತಿಳಿದು ಬಂದಿದೆ.



ಹಣ ವರ್ಗಾವಣೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಬೆಂಗಳೂರಿನ ತೇಜ ತಮ್ಮಯ್ಯ, ಹೈದರಾಬಾದ್ ನ ಚಂದ್ರಮೋಹನ್, ಶ್ರೀನಿವಾದ್, ಜಗದೀಶ್ ವಿಚಾರಣೆ ವೇಳೆ ನಿಗಮದ ಹಣ ಹವಾಲಾ ಮೂಲಕ ವರ್ಗಾವಣೆಯಾಗಿರುವ ಬಗ್ಗೆ ಬಾಯ್ಬಿಟ್ಟಿದ್ದಾರೆ. ಇದೀಗ ಎಸ್ ಐಟಿ ಅಧಿಕಾರಿಗಳು ಹವಾಲಾ ದಂಧೆಕೋರ ಕಾರ್ತೀ ಶ್ರೀನಿವಾಸ್ ಗಾಗಿ ಹುಡುಕಾಟ ನಡೆಸಿದ್ದಾರೆ.

ಹವಾಲಾ ದಂಧೆ ಮಾಹಿತಿ ಆಧರಿಸಿ ಅಕ್ರಮ ಹಣ ವರ್ಗವಣೆ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ ಪ್ರವೇಶಿಸಿದೆ. ಈ ಅಕ್ರಮ ಹಣದ ವಿಚಾರವಾಗಿ ಇಡಿ ಅಧಿಕಾರಿಗಳಿಗೆ ಎಸ್ ಐಟಿ ಅಧಿಕಾರಿಗಳು ಅಧಿಕೃತವಾಗಿ ಮಾಹಿತಿ ನೀಡಿದ್ದು, ಅದರಂತೆ ಪ್ರತ್ಯೇಕವಾಗಿ ಇಡಿ ತನಿಖೆ ಆರಂಭಿಸಿದೆ.

**ಬಾರ್ ಅಂಗಡಿ ಖಾತೆಗಳಿಂದ ಹಣ ವಿತ್ ಡ್ರಾ:** ವಾಲ್ಮಿಕಿ ಅಭಿವೃದ್ಧಿ ನಿಗಮದ ಹಣ ಬಾರ್ , ಚಿನ್ನದ ಅಂಗಡಿ ಖಾತೆಗಳಿಗೆ ವರ್ಗಾವಣೆಯಾಗಿತ್ತು. ಬಳಿಕ ಈ ಹಣವನ್ನು ಹೈದರಾಬಾದ್ ಗ್ಯಾಂಗ್ ಬಾರ್ ಅಂಗಡಿ ಖಾತೆಗಳಿಂದ ವಿತ್ ಡ್ರಾ ಮಾಡಿಕೊಂಡಿದೆ. ಬಾರ್ ಮತ್ತು ಚಿನ್ನದ ಅಂಗಡಿಗಳಿಗೆ ಬರೊಬ್ಬರಿ 10 ಕೋಟಿ ರೂ. ವರ್ಗಾವಣೆಯಾಗಿದೆ. ವರ್ಗಾವಣೆಯಾಗಿದ್ದ ಹಣವನ್ನು ಎಸ್ ಐಟಿ ಅಧಿಕಾರಿಗಳು ವಶಕ್ಕೆ ಪಡೆದುಕೊಂಡಿದ್ದಾರೆ. 193 ಬ್ಯಾಂಕ್ ಖಾತೆಗಳಿಂದ 10 ಕೋಟಿ ವಶಕ್ಕೆ ಪಡೆದಿದ್ದರು. ಈ ಮೂಲಕ ಇದುವರೆಗೆ ಒಟ್ಟು 28 ಕೋಟಿ ಹಣ ವಶಕ್ಕೆ ಪಡೆಯಲಾಗಿದೆ.

**ವಾಲ್ಮೀಕಿ ಅಭಿವೃದ್ಧಿ ನಿಗಮ ಅಕ್ರಮಕ್ಕೆ ಹನಿ ಟ್ರ್ಯಾಪ್ ನಂಟು:** ಇತ್ತೀಚೆಗೆ ಬಿಜೆಪಿ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಅವರು ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದ ಅಕ್ರಮದ ಹಿಂದೆ ಹನಿಟ್ರ್ಯಾಪ್ ಇದೆ ಎಂದು ಗಂಭೀರ ಆರೋಪ ಮಾಡಿದ್ದರು. ಆಂಧ್ರಪ್ರದೇಶದ ಸತ್ಯನಾರಾಯಣ ವರ್ಮ ಎಂಬಾತ ಈ ಪ್ರಕರಣದ ಸೂತ್ರಧಾರ. ವರ್ಮ ಒಬ್ಬ ವೃತ್ತಿಪರ ಕೇಡಿ ಎನ್ನುವ ಮಾಹಿತಿಯಿದೆ. ಹಲವು ರಾಜ್ಯಗಳಲ್ಲಿ ನಡೆದ ಅಕ್ರಮಗಳಲ್ಲಿ ಈತನ ಪಾತ್ರವಿದೆ ಎಂಬ ಆರೋಪಗಳು ಕೇಳಿಬಂದಿವೆ. ಈತನಿಗೆ ನಮ್ಮ ರಾಜ್ಯದ ಸಚಿವರು, ಶಾಸಕರು, ಅಧಿಕಾರಿಗಳು ಸಹಕರಿಸಿದ್ದಾರೆ. ನಿಗಮಕ್ಕೆ ಸೇರಿದ 187 ಕೋಟಿ ರೂ. ಗಳನ್ನು ತೆಲಂಗಾಣ, ಆಂಧ್ರ ಪ್ರದೇಶ, ಕರ್ನಾಟಕದಲ್ಲಿ ಚುನಾವಣೆಗಾಗಿ ಬಳಕೆ ಮಾಡಲಾಗಿದೆ ಎಂದು ಸಿ,ಟಿ. ರವಿ ಆರೋಪಿಸಿದ್ದರು.



# ಟಿ20 ವಿಶ್ವಕಪ್ ಗೆದ್ದ ಟೀಂ ಇಂಡಿಯಾ ಆಟಗಾರರಿಗೆ ಬಂಪರ್



ಐಸಿಸಿ ಪುರುಷರ ಟಿ20 ವಿಶ್ವಕಪ್ ಟೂರ್ನಿ ಬಳಿಕ 2024ರ ಚಾಂಪಿಯನ್ ಪಟ್ಟ ಅಲಂಕರಿಸಿದ ರೋಹಿತ್ ಶರ್ಮಾ ನೇತೃತ್ವದ ಟೀಂ ಇಂಡಿಯಾ ಬಳಗಕ್ಕೆ ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ ಬರೋಬ್ಬರಿ 125 ಕೋಟಿ ರೂ. ನಗದು ಬಹುಮಾನ ಘೋಷಿಸಿದೆ.

ಬಾರ್ಬಡೋಸ್‌ನಲ್ಲಿ ಶನಿವಾರ ನಡೆದ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ 7 ರನ್ ಗಳ ರೋಚಕ ಗೆಲುವು ಸಾಧಿಸುವ ಮೂಲಕ 17 ವರ್ಷಗಳ ಬಳಿಕ ಟಿ20 ವಿಶ್ವಕಪ್ ಕಿರೀಟಕ್ಕೆ ಭಾರತ ತಂಡ ಮುತ್ತಿಟ್ಟಿದೆ. ಅಲ್ಲದೇ 11 ವರ್ಷಗಳ ಐಸಿಸಿ ಟ್ರೋಫಿ ಬರವನ್ನೂ ನೀಗಿಸಿಕೊಂಡಿದೆ.

ಟಿ20 ವಿಶ್ವಕಪ್ ಗೆದ್ದ ಮರುದಿನವೇ ಬಿಸಿಸಿಐ ಕಾರ್ಯದರ್ಶಿ ಜಯ್ ಶಾ ಅವರು ವಿಜೇತ ತಂಡಕ್ಕೆ ಬರೋಬ್ಬರಿ 125 ಕೋಟಿ ರೂ.ಗಳ ಬಹುಮಾನ ಘೋಷಣೆ ಮಾಡಿದ್ದಾರೆ.

ಈ ಕುರಿತು ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಜಯ್ ಶಾ, ಐಸಿಸಿ ಪುರುಷರ ಟಿ20 ವಿಶ್ವಕಪ್ 2024 ಅನ್ನು ಗೆದ್ದ ಟೀಂ ಇಂಡಿಯಾಕ್ಕೆ 125 ಕೋಟಿ ರೂ. ಬಹುಮಾನ ಘೋಷಿಸಲು ನನಗೆ ಸಂತೋಷವಾಗಿದೆ. ತಂಡವು ಟೂರ್ನಿಯುದ್ಧಕ್ಕೂ ಅಸಾಧಾರಣ ಪ್ರತಿಭೆ, ದೃಢನಿಶ್ಚಯ ಮತ್ತು ಕ್ರೀಡಾ ಮನೋಭಾವ ಪ್ರದರ್ಶಿಸಿದೆ. ಈ ಅತ್ಯುತ್ತಮ ಸಾಧನೆಗಾಗಿ ಎಲ್ಲಾ ಆಟಗಾರರು, ತರಬೇತುದಾರರು ಮತ್ತು ಸಹಾಯಕ ಸಿಬ್ಬಂದಿಗೆ ಅಭಿನಂದನೆಗಳು ಎಂದು ಬರೆದುಕೊಂಡಿದ್ದಾರೆ.

**13 ವರ್ಷಗಳ ಬಳಿಕ ವಿಶ್ವಕಪ್:** ಇನ್ನೂ ಭಾರತ ತಂಡಕ್ಕೆ ಇದು 13 ವರ್ಷಗಳ ಬಳಿಕ ಸಿಕ್ಕ ವಿಶ್ವಕಪ್ ಹಾಗೂ 17 ವರ್ಷಗಳ ಬಳಿಕ ದೊರೆತ 2ನೇ ಟಿ20 ವಿಶ್ವಕಪ್ ಆಗಿದೆ. ಭಾರತ ತಂಡ 2007ರ ಉದ್ಘಾಟನಾ ಆವೃತ್ತಿಯಲ್ಲೇ ಟಿ20 ವಿಶ್ವಕಪ್ ಗೆದ್ದುಕೊಂಡಿತ್ತು. ಅಲ್ಲದೇ 2011ರ ಏಕದಿನ ವಿಶ್ವಕಪ್ ಸಹ ಗೆದ್ದುಕೊಂಡಿತ್ತು. ಈ ಎರಡೂ ಟೂರ್ನಿಯಲ್ಲೂ ಎಂ.ಎಸ್ ಧೋನಿ ಅವರೇ ನಾಯಕತ್ವ ವಹಿಸಿದ್ದು ವಿಶೇಷ.

# ಸದ್ಯಕ್ಕೆ ಸಿಎಂ ಸ್ಥಾನ ಖಾಲಿ ಇಲ್ಲ : ಸಚಿವ ಜಮೀರ್





**ಮಂಡ್ಯ:** ಸದ್ಯಕ್ಕೆ ಸಿಎಂ ಸ್ಥಾನ ಖಾಲಿಯಿಲ್ಲ, ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಕುರ್ಚಿಯಲ್ಲಿ ಕುಳಿತಿದ್ದಾರೆ ಎಂದು ಸಚಿವ ಜಮೀರ್ ಅಹಮದ್ ತಿರುಗೇಟು ನೀಡಿದ್ದಾರೆ.

ರಾಜ್ಯದಲ್ಲಿ ಸಿಎಂ ಬದಲಾವಣೆ ವಿಚಾರಕ್ಕೆ ಸಂಬಂಧಿಸಿದಂತೆ ಮಂಡ್ಯದಲ್ಲಿ ಮಾತನಾಡಿದ ಅವರು, ಚಂದ್ರಶೇಖರ ಶ್ರೀಗಳು ಹೇಳಿರುವುದು ಅವರ ವೈಯಕ್ತಿಕ ಅಭಿಪ್ರಾಯ. ಆದ್ರೆ ಸಿಎಂ ಖುರ್ಚಿ ಈಗ ಎಲ್ಲಿ ಖಾಲಿಯಿದೆ? ಖಾಲಿ ಇರುವಾಗ ಚರ್ಚೆ ಮಾಡಬೇಕು, ಇಲ್ಲದಿರುವಾಗ ಚರ್ಚೆ ಅಗತ್ಯವಿಲ್ಲ ಎಂದಿದ್ದಾರೆ.

ಸ್ವಾಮೀಜಿ ಅಭಿಪ್ರಾಯ ತಪ್ಪು ಅನ್ನೋಕೆ ಆಗಲ್ಲ. ಈಗಾಗಲೇ ಹೈಕಮಾಂಡ್ ಸಿದ್ದರಾಮಯ್ಯ ಸಿಎಂ ಎಂದು ತೀರ್ಮಾನ ಮಾಡಿ ಆಗಿದೆ. ಒಕ್ಕಲಿಗರು, ಲಿಂಗಾಯತರು, ದಲಿತರು ಕೇಳ್ತಿದ್ದಾರೆ. ಅವರು ಕೇಳುವುದರಲ್ಲಿ ತಪ್ಪೇನಿದೆ? ನಮ್ಮದು ಹೈಕಮಾಂಡ್ ಪಕ್ಷ. ನಮ್ಮ ಪಕ್ಷದ ಹೈಕಮಾಂಡ್ ಯಾರು ಸಿಎಂ ಅಂತ ತೀರ್ಮಾನಿಸುತ್ತೆ. ಹೈಕಮಾಂಡ್ ಹಾಕಿದ ಗೆರೆಯನ್ನ ನಾವ್ಯಾರು ದಾಟಲ್ಲ. ಇದು ನಮ್ಮ ಪಕ್ಷದ ನಿಯಮ. ಏನೇ ಇದ್ದರೂ ನಮ್ಮ ಹೈಕಮಾಂಡ್ ತೀರ್ಮಾನ ಮಾಡಲಿದೆ ಎಂದು ಹೇಳಿದ್ದಾರೆ.

ಇನ್ನೂ ಸಿಎಂ ಬದಲಾವಣೆ ವಿಚಾರ ಮಾತಾಡದಂತೆ ಸಚಿವ, ಶಾಸಕರಿಗೆ ಕೆಪಿಸಿಸಿ ಅಧ್ಯಕ್ಷರ ಸೂಚನೆ ನೀಡಿದೆ ಎಂಬ ವಿಚಾರಕ್ಕೆ ಪ್ರತಿಕ್ರಿಯಿಸಿ, ಆ ವಿಚಾರ ನನಗೆ ಗೊತ್ತಿಲ್ಲ ಎಂದು ಜಾರಿಕೊಂಡಿದ್ದಾರೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com